

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡವೇ ಸತ್ಯ, ಕನ್ನಡವೇ ನಿತ್ಯ

ವೇಣು ಸಾರಥ್ಯದಲ್ಲಿ...

ಸಂಪುಟ: 22, ಸಂಚಿಕೆ: 26, ಪುಟಗಳು: 8, ಮಂಗಳವಾರ, 5 ನವೆಂಬರ್ 2024 RNI NO. KARKAN/2002/08054

epaper: www.sanjemugilu.com

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3





ದಶಪ್ರಮತಿ ಮುದ್ರಣಾಲಯ

dashapramathi mudranalaya

PRE-PRESS PRINTERS

Contact: +91 9483589085 | e-mail: dashapramathimudranalaya@gmail.com

We Undertake Printing of Newspapers | Tabloids | Magazines




### ಸುಭಾಷಿತ

ಕೂರಬೇಡಿ, ನಿಲ್ಲಬೇಡಿ, ಇಳಿಯಬೇಡಿ, ಏರುತ್ತಾ ಇರಿ.

। ಮಾಸ್ತಿ ವೆಂಕಟೇಶ ಅಯ್ಯಂಗಾರ್

### ಪಂಚಾಂಗ

(ಮಂಗಳವಾರ 5, ನವೆಂಬರ್-2024)

- ಶ್ರೀ ಕ್ರೋಧಿ ನಾಮ ಸಂವತ್ಸರ,
- ದಕ್ಷಿಣಾಯನ, ಶರದ್ ಋತು
- ಕಾರ್ತಿಕ ಮಾಸ, ಶುಕ್ಲ ಪಕ್ಷ
- ವಾರ: ಮಂಗಳವಾರ, ತಿಥಿ: ಚತುರ್ಥಿ
- ನಕ್ಷತ್ರ: ಜೇಷ್ಠ
- ರಾಹುಕಾಲ: 3.02 ರಿಂದ 4.30
- ಗುಳಿಕಕಾಲ: 12.07 ರಿಂದ 1.35
- ಯಮಗಂಡಕಾಲ: 9.12 ರಿಂದ 10.40

## ಸಂಕ್ಷಿಪ್ತ ಸುದ್ದಿ

### ಹಸುಗೂಸನ್ನು ನೀರಿನ ಸಿಂಟೆಕ್ಸ್ ಟ್ಯಾಂಕ್‌ಗೆ ಎಸೆದು ಕೊಲೆ



**ಬೆಂಗಳೂರು:** ವರ್ಷದ ಹಸುಗೂಸನ್ನು ನೀರಿನ ಸಿಂಟೆಕ್ಸ್ ಟ್ಯಾಂಕ್‌ಗೆ ಎಸೆದು ಕೊಲೆ ಮಾಡಿರುವ ಅಮಾನವೀಯ ಘಟನೆ ಬೆಂಗಳೂರು ಹೊರವಲಯ ಆನೇಕಲ್ ತಾಲ್ಲೂಕಿನ ಇಗ್ಗಲೂರುನಲ್ಲಿ ನಡೆದಿದೆ. ಮನು ಮತ್ತು ಹರ್ಷಿತಾ ದಂಪತಿಗೆ ಆರೂವರೆ ತಿಂಗಳಿಗೆ ಸಿಜೇರಿಯನ್ ಮೂಲಕ ಮಗು ಜನಿಸಿತ್ತು. ಮಗುವಿಗೆ ಉಸಿರಾಟದ ತೊಂದರೆಯಿಂದಾಗಿ ಲಕ್ಷಾಂತರ ರೂಪಾಯಿ ಖರ್ಚು ಮಾಡಿ ಆಸ್ಪತ್ರೆಯಲ್ಲಿ ಐಸಿಯುನಲ್ಲಿ ಚಿಕಿತ್ಸೆ ನೀಡಲಾಗಿತ್ತು. ಮಗು ಸಂಪೂರ್ಣ ಚೇತರಿಕೆ ಕಂಡ ಹಿನ್ನೆಲೆ ವಾರದ ಹಿಂದೆ ಮನೆಗೆ ಕರೆತರಲಾಗಿತ್ತು. ಆದರೆ ತಾಯಿ ಶೌಚಾಲಯಕ್ಕೆ ಹೋದಾಗ ಮಗು ಇದ್ದಕ್ಕಿದ್ದಂತೆ ಕಾಣೆಯಾಗಿದೆ. ಸೋಮವಾರ ಮಧ್ಯಾಹ್ನ 12:45ರ ಸುಮಾರಿಗೆ ಮಗು ನಾಪತ್ತೆಯಾಗಿದೆ. ಪುಟ 2

### ಹಾಸನದಲ್ಲಿ ಮಾರಕಾಸ್ತ್ರಗಳಿಂದ ಕೊಚ್ಚಿ ಕಾನ್‌ಸ್ಟೇಬಲ್ ಬರ್ಬರ ಹತ್ಯೆ

**ಹಾಸನ:** ಮಾರಕಾಸ್ತ್ರಗಳಿಂದ ಕೊಚ್ಚಿ ಪೊಲೀಸ್ ಕಾನ್‌ಸ್ಟೇಬಲ್‌ನನ್ನು ಬರ್ಬರ ಹತ್ಯೆ ಮಾಡಿರುವ ಘಟನೆ ಹಾಸನ ತಾಲೂಕಿನ ದುದ್ದ ಗ್ರಾಮದಲ್ಲಿ ನಡೆದಿದೆ.



ಅರಸೀಕೆರೆ ತಾಲೂಕಿನ ಬಾಗೇಶಪುರ ಗ್ರಾಮದವರಾದ ಹರೀಶ್.ವಿ (32) ಕೊಲೆಯಾದ ಪೊಲೀಸ್ ಕಾನ್‌ಟೇಬಲ್. ಹರೀಶ್ ಬೆಂಗಳೂರಿನ KSISFನಲ್ಲಿ ಕಾನ್‌ಸ್ಟೇಬಲ್ ಆಗಿದ್ದರು. ಇದೇ ತಿಂಗಳು 11 ರಂದು ಹರೀಶ್ ವಿವಾಹ ನಿಶ್ಚಯವಾಗಿತ್ತು. ಸೋಮವಾರ ರಾತ್ರಿ ಮದುವೆ ಆಮಂತ್ರಣ ಪತ್ರ ಹಂಚಿ ಮನೆಗೆ ವಾಪಾಸ್ ಆಗುತ್ತಿದ್ದ ವೇಳೆ ದುದ್ದ ಗ್ರಾಮದ ಹೊರವಲಯದಲ್ಲಿರುವ ಡಾಬಾ ಸರ್ಕಲ್‌ನಲ್ಲಿ ದುಷ್ಕರ್ಮಿಗಳು ಬರ್ಬರವಾಗಿ ಹತ್ಯೆ ಮಾಡಿದ್ದಾರೆ. ಸ್ಥಳಕ್ಕೆ ಎಸ್ಪಿ ಮಹಮದ್ ಸುಜೇತಾ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ದುದ್ದ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

### ಮುಡಾ ಹಗರಣ ಪ್ರಕರಣ: ಕ್ಲೈಮ್ಯಾಕ್ಸ್‌ನತ್ತ ಹಗರಣ

# ನಾಳೆ ಸಿದ್ದರಾಮಯ್ಯ ವಿಚಾರಣೆ

**ಮೈಸೂರು:** ಸದ್ಯ ವಕ್ಫ್ ಹಾಗೂ ಉಪಚುನಾವಣೆ ಗಲಾಟೆ ಮಧ್ಯ ಅತ್ತ ಮುಡಾ ಹಗರಣದ ತನಿಖೆ ಚುರುಕುಗೊಂಡಿದೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಚಾರಣೆಗೆ ಹಾಜರಾಗುವಂತೆ ಎ1 ಆರೋಪಿಯಾಗಿರುವ ಸಿಎಂ ಸಿದ್ದರಾಮಯ್ಯನವರಿಗೆ ಲೋಕಾಯುಕ್ತ ನೋಟಿಸ್ ಜಾರಿ ಮಾಡಿದೆ. ನಾಳೆ ಮೈಸೂರಿನ ಲೋಕಾಯುಕ್ತ ಕಚೇರಿಗೆ ವಿಚಾರಣೆಗೆ ಹಾಜರಾಗಬೇಕೆಂದು ಸಿದ್ದರಾಮಯ್ಯಗೆ ಸೂಚನೆ ನೀಡಲಾಗಿದೆ. ಈ ಮೂಲಕ ಸಿಎಂ ಸಿದ್ದರಾಮಯ್ಯ ತಮ್ಮ 40 ವರ್ಷದ ರಾಜಕೀಯ ಜೀವನದಲ್ಲಿ ಈ ರೀತಿಯ ವಿಚಾರಣೆ ಎದುರಿಸಬೇಕಾಗಿ ಬಂದಿದೆ.

ಈಗಾಗಲೇ ಲೋಕಾಯುಕ್ತ ಎಲ್ಲಾ ಆರೋಪಿಗಳ ವಿಚಾರಣೆ ಮುಗಿಸಿದ್ದು, ಸಿದ್ದರಾಮಯ್ಯನವರ ವಿಚಾರಣೆಯೊಂದೇ ಬಾಕಿ ಇತ್ತು. ಇದೀಗ ಎ1 ಆರೋಪಿಗೂ ಸಹ ಲೋಕಾಯುಕ್ತ ವಿಚಾರಣೆ ಹಾಜರಾಗುವಂತೆ ನೋಟಿಸ್ ಜಾರಿ ಮಾಡಿದೆ. ಸಿದ್ದರಾಮಯ್ಯ ಜೀವನದ ಮೊದಲ ವಿಚಾರಣೆ ಇದಾಗಿದೆ. ಅವರು




ಸುಮಾರ 40 ವರ್ಷಗಳಿಂದ ರಾಜಕಾರಣದಲ್ಲಿದ್ದು, ಯಾವುದೇ ರೀತಿ ಪ್ರಕರಣದಲ್ಲಿ ಆರೋಪಿಯಾಗಿ ವಿಚಾರಣೆ ಎದುರಿಸಿರಲಿಲ್ಲ. ಆದ್ರೆ, ಇದೀಗ ಸಿದ್ದರಾಮಯ್ಯನವರಿಗೆ ಮುಡಾ ಕಂಟಕ ಎದುರಾಗಿದ್ದು, ತಮ್ಮ 40 ವರ್ಷ ಸುದೀರ್ಘ ರಾಜಕಾರಣದಲ್ಲಿ ಇದೇ ಮೊದಲ ಬಾರಿಗೆ ಲೋಕಾಯುಕ್ತದ ಮುಂದೆ ವಿಚಾರಣೆಗೆ ಹಾಜರಾಗ ಬೇಕಾದ ಅನಿವಾರ್ಯತೆ ಎದುರಾಗಿದೆ. ಪುಟ 2

### ಬೆಂಗಳೂರಿನಲ್ಲಿ ಈ ಬಾರಿ ದೀಪಾವಳಿ ಪಟಾಕಿ ಸಂಭ್ರಮಕ್ಕೆ ಮನುಷ್ಯ ಮಾತ್ರವಲ್ಲ

# ಹದ್ದುಗಳು ವಿಲವಿಲ..!

**ಬೆಂಗಳೂರು:** ದೀಪಗಳ ಹಬ್ಬ ದೀಪಾವಳಿಗೆ ಪಟಾಕಿ ಸಿಡಿಸಿ ಕುಣಿದಾಡಿದಾಯ್ತು. ಆದ್ರೆ ತಿಳಿದೋ, ತಿಳಿಯದೆಯೋ ಪಟಾಕಿ ಸಿಡಿತಕ್ಕೆ ರಾಜಧಾನಿಯಲ್ಲಿ ಅಳಿದುಳಿದಿರುವ ಪಕ್ಷಿ ಸಂಕುಲ ನಲುಗಿ ಹೋಗಿದೆ. ಪಟಾಕಿ ಶಬ್ಧಕ್ಕೆ ಪಕ್ಷಿಗಳು ಹೆದರಿ ಹೋಗಿವೆ. ರಾಕೆಟ್ ಪಟಾಕಿ ಸಿಡಿತಕ್ಕೆ ಒಂದಲ್ಲ, ಹತ್ತಲ್ಲ ಬರೋಬ್ಬರಿ 200 ಹದ್ದುಗಳು ಪ್ರಾಣ ಬಿಟ್ಟಿವೆ.

ಹದ್ದು ಬೆಂಗಳೂರಿನ ಅರ್ಬನ್ ಪಕ್ಷಿ ಎನ್ನಿಸಿಕೊಂಡಿದೆ. ನಗರದಲ್ಲಿ ಗಾರ್ಬೇಜ್ ಕ್ಲೀನರ್ ಎಂಬ ಪಟ್ಟ ಹೊಂದಿವೆ. ನಗರದ ಕಸ ತಿಂದು ಜೀರ್ಣಿಸಿಕೊಳ್ಳುವ ಹದ್ದಿಗೆ ಪಟಾಕಿ ನಾರಕವಾಗಿದೆ. ಶಬ್ಧದಿಂದ, ಹೊಗೆಯಿಂದ, ರಾಕೆಟ್ ಹೊಡೆತದಿಂದ ಪೆಟ್ಟು ತಿಂದು ಪ್ರಾಣ ಬಿಟ್ಟಿವೆ. ಕೆಲ ಪ್ರಾಣಿ ಪ್ರಿಯರ ಸಹಾಯದಿಂದ ಆಸ್ಪತ್ರೆ ಸೇರಿ ಜೀವನ್ ಮರಣದ ಹೋರಾಡುತ್ತಿವೆ. ಕೆಂಗೇರಿಯಲ್ಲಿರುವ ಪೀಪಲ್ ಫಾರ್ ಎನಿಮಲ್ಸ್ ಸಂಸ್ಥೆಗೆ ಈ ಸಲ ಕಳೆದ ಬಾರಿಗಿಂತ



ಹೆಚ್ಚು ಪ್ರಕರಣಗಳು ಬಂದಿವೆ. ಮಂಗಗಳು ಸೇರಿ ಶಾರ್ಟ್ ನೋಸ್ಡ್ ಫ್ರೂಟ್ ಬ್ಯಾಟ್, ಇಂಡಿಯನ್ ಕುಕ್ಕೂ, ಇಂಡಿಯನ್ ನೈಟ್ ಜಾರ್, ಬಾರ್ನ್ ಔಲ್ ಸೇರಿ ಹಲವು ಪಕ್ಷಿಗಳು ಪಟಾಕಿ ಗಾಯದಿಂದ ನರಳಾಡುತ್ತಿದೆ.ಇನ್ನು ಮನುಷ್ಯರ ಬಗ್ಗೆ ಗಮನಹರಿಸುವುದಾರೆ, ಈ ಸಲ ದೀಪಾವಳಿಗೆ ದಾಖಲೆ ಪ್ರಮಾಣದಲ್ಲಿ ಪಟಾಕಿ ಕಣ್ಣಿನ ಅವಘಡ ಕೇಸ್ ದಾಖಲಾಗಿದೆ. ಪುಟ 2

# ಹೆಚ್‌ಡಿಕೆ ವಿರುದ್ಧ ಎಫ್‌ಐಆರ್!

## ಬಿಎನ್‌ಎಸ್ ಅಂಡರ್ ಸೆಕ್ಷನ್ 224ರ ಅಡಿಯಲ್ಲಿ ಪ್ರಕರಣ ದಾಖಲು



**ಬೆಂಗಳೂರು:** ಎಡಿಜಿಪಿ ಚಂದ್ರಶೇಖರ್ ಅವರು ನೀಡಿದ ದೂರಿನ ಆಧಾರದ ಮೇಲೆ ಕೇಂದ್ರ ಸಚಿವ ಹೆಚ್ ಡಿ ಕುಮಾರಸ್ವಾಮಿ ಅವರ ವಿರುದ್ಧ ಸಂಜಯನಗರ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ. ಬಿಎನ್‌ಎಸ್ ಅಂಡರ್ ಸೆಕ್ಷನ್ 224ರ ಅಡಿಯಲ್ಲಿ ಪೊಲಿಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ. ಪ್ರಕರಣದಲ್ಲಿ ಹೆಚ್‌ಡಿಕುಮಾರಸ್ವಾಮಿ ಆರೋಪಿ ನಂಬರ್ 1 ಆಗಿದ್ದಾರೆ. ಜೆಡಿಎಸ್ ಯುವ ಘಟಕ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಆರೋಪಿ ನಂಬರ್ 2 ಆಗಿದ್ದಾರೆ. ಮತ್ತು ಜೆಡಿಎಸ್ ಮುಖಂಡ ಸುರೇಶ್ ಬಾಬು ಆರೋಪಿ ನಂಬರ್ 3 ಆಗಿದ್ದಾರೆ.

ಆರೋಪಿಗಳು ದುರುದ್ದೇಶ ಪೂರಿತವಾಗಿ ಆರೋಪ ಮಾಡಿದ್ದಾರೆ. ಮತ್ತು ತೊಂದರೆ ಕೊಡುವುದಾಗಿ ಬೆದರಿಕೆ ಹಾಕಿದ್ದಾರೆ ಎಂದು ಚಂದ್ರಶೇಖರ್ ಅವರು ದೂರಿನಲ್ಲಿ ದಾಖಲಿಸಿದ್ದರು. ಈ ಹಿನ್ನೆಲೆಯಲ್ಲಿ ಹೆಚ್ ಡಿ ಕುಮಾರಸ್ವಾಮಿ ಸೇರಿದಂತೆ ಮೂವರ ವಿರುದ್ಧ 42ನೇ ಎಸಿಎಂಎಂ ನ್ಯಾಯಾಲಯದ ಆದೇಶದಂತೆ ಎಫ್ ಐಆರ್ ದಾಖಲಾಗಿದೆ. ಪುಟ 2

### ಚನ್ನಪಟ್ಟಣ ಅಖಾಡಕ್ಕೆ ದೊಡ್ಡಗೌಡರ ಎಂಟ್ರಿ!

# ಮೊಮ್ಮಗನ ಪರ ದೇವೇಗೌಡರ ಮತಬೇಟೆ

**ಚನ್ನಪಟ್ಟಣ:** ಚನ್ನಪಟ್ಟಣ ಉಪ ಚುನಾವಣೆ ಕಣ ರಂಗೇರುತ್ತಿದೆ. ಚುನಾವಣೆ ಕಣದಲ್ಲಿರುವ ನಿಖಿಲ್ ಕುಮಾರಸ್ವಾಮಿ ಪ್ರಚಾರ ಮುಂದುವರೆಸಿದ್ದಾರೆ. ಮತ್ತೊಂದೆಡೆ ನಿಖಿಲ್ ಕುಮಾರಸ್ವಾಮಿ ಪರವಾಗಿ ಪತ್ನಿ ರೇವತಿ ಕೂಡ ಪ್ರಚಾರ ನಡೆಸಿದ್ದಾರೆ. ಇದೀಗ ಮೊಮ್ಮಗನ ಗೆಲುವಿಗಾಗಿ ಮಾಜಿ ಪ್ರಧಾನಿ ಹೆಚ್‌ಡಿ ದೇವೇಗೌಡ ಅವರು ಕೂಡ ಅಖಾಡಕ್ಕೆ ಎಂಟ್ರಿ ಕೊಡುತ್ತಿದ್ದಾರೆ. ಇದೀಗ ಚನ್ನಪಟ್ಟಣ ರಣಕಣ ಮತ್ತಷ್ಟು ರಂಗು ಪಡೆಯಲಿದೆ.



**ಚನ್ನಪಟ್ಟಣಕ್ಕೆ ದೊಡ್ಡಗೌಡರ ಎಂಟ್ರಿ!:** ಚನ್ನಪಟ್ಟಣದಲ್ಲಿ ದೇವೇಗೌಡರಿಗೆ ಭಾರೀ ಜನಪ್ರಿಯತೆ ಇದ್ದು, ಇಂದು ಮೊಮ್ಮಗನ ಗೆಲುವುಗಾಗಿ ಚನ್ನಪಟ್ಟಣದಲ್ಲಿ ಮತಶಿಖಾರಿ ನಡೆಸಲಿದ್ದಾರೆ. ಇಂದು 4 ಜಿ.ಪಂ ಕ್ಷೇತ್ರದಲ್ಲಿ ಪ್ರಚಾರ ನಡೆಸಲಿದ್ದಾರೆ. ಚನ್ನಪಟ್ಟಣದ ಕೋಡಂಬಳ್ಳಿ ಜಿ.ಪಂ ವ್ಯಾಪ್ತಿಯ ವಿರುಪಾಕ್ಷೀಪುರ, ಕೋಡಂಬಳ್ಳಿ, ಜೆ.ಬ್ಯಾಡರಹಳ್ಳಿ, ವೈ.ಟಿ ಹಳ್ಳಿ ಗ್ರಾಪಂ ವ್ಯಾಪ್ತಿಯಲ್ಲಿ ದೇವೇಗೌಡರು ಪ್ರಚಾರ ಮಾಡುತ್ತಾರೆ. ಪುಟ 2

### ಕೆನಡಾದಲ್ಲಿ ಹಿಂದೂ ದೇವಾಲಯದ ಮೇಲೆ ದಾಳಿ

# ಪ್ರಧಾನಿ ಮೋದಿ ಖಂಡನೆ

**ನವದೆಹಲಿ:** ಕೆನಡಾದ ಹಿಂದೂ ದೇವಾಲಯದ ಮೇಲೆ ಉದ್ದೇಶಪೂರ್ವಕ ದಾಳಿಯನ್ನು ಪ್ರಧಾನಿ ನರೇಂದ್ರ ಮೋದಿ ಅವರು ಖಂಡಿಸಿದ್ದಾರೆ. ಕಳೆದ ವಾರ ಒಂಟಾರಿಯೊದ ಬ್ರಾಂಪ್ಟನ್‌ನಲ್ಲಿ ಹಿಂದೂ ದೇವಾಲಯದ ಮೇಲೆ ಕೆಲವರು ದಾಳಿ ನಡೆಸಿದ್ದರು.



ಆ ದೇಶದಲ್ಲಿನ ಭಾರತೀಯ ರಾಜತಾಂತ್ರಿಕರನ್ನು ಬೆದರಿಸುವ ಹೇಡಿತನದ ಪ್ರಯತ್ನಗಳು ನಡೆಯುತ್ತಿವೆ ಎಂದು ಪ್ರಧಾನಿ ಟೀಕಿಸಿದ್ದಾರೆ. ಇಂತಹ ಹಿಂಸಾಚಾರಗಳು ಭಾರತದ ಸಂಕಲ್ಪವನ್ನು ಎಂದಿಗೂ ದುರ್ಬಲಗೊಳಿಸುವುದಿಲ್ಲ. ಕೆನಡಾದ ಸರ್ಕಾರವು ನ್ಯಾಯವನ್ನು ಖಚಿತಪಡಿಸುತ್ತದೆ ಮತ್ತು ಕಾನೂನಿನ ನಿಯಮವನ್ನು ಎತ್ತಿಹಿಡಿಯುತ್ತದೆ ಎಂದು ನಾವು ನಿರೀಕ್ಷಿಸುತ್ತೇವೆ ಎಂದು ತಿಳಿಸಿದ್ದಾರೆ.

ಭಾರತ ಸರ್ಕಾರವು, ಉಗ್ರವಾದಿಗಳು ಮತ್ತು ಪ್ರತ್ಯೇಕತಾವಾದಿಗಳು ನಡೆಸಿದ ಹಿಂಸಾಚಾರದ ಕೃತ್ಯಗಳನ್ನು ಖಂಡಿಸುತ್ತದೆ ಎಂದು ವಿದೇಶಾಂಗ ಸಚಿವಾಲಯವು ಟೀಕಿಸಿತ್ತು. ಅದರ ಬೆನ್ನಲ್ಲೇ, ಪ್ರಧಾನಿಯವರು ಸೋಷಿಯಲ್ ಮೀಡಿಯಾದಲ್ಲಿ ಪೋಸ್ಟ್ ಹಾಕಿದ್ದಾರೆ. ಎಲ್ಲಾ ಪೂಜಾ ಸ್ಥಳಗಳನ್ನು ಸಮರ್ಪಕವಾಗಿ ರಕ್ಷಿಸಲಾಗಿದೆಯೇ ಎಂಬುದನ್ನು ಖಚಿತಪಡಿಸಿಕೊಳ್ಳಲು ಕೆನಡಾ ಆಡಳಿತ ವ್ಯವಸ್ಥೆಗೆ ಒತ್ತಾಯಿಸಿದ್ದಾರೆ. ಪುಟ 2

# ಗ್ಯಾಸ್ ಸಿಲಿಂಡರ್ ಸ್ಫೋಟ! ಮನೆ ಗೋಡೆಯಲ್ಲಾ ಛಿದ್ರ ಛಿದ್ರ!

**ಉಡುಪಿ:** ಪಾರ್ಟಿ ಮಾಡುತ್ತಿದ್ದ ವೇಳೆ ಗ್ಯಾಸ್ ಸಿಲಿಂಡರ್ ಸ್ಫೋಟಗೊಂಡ ಪರಿಣಾಮ ಅಪಾರ ಪ್ರಮಾಣದ ಹಾನಿ ಉಂಟಾದ ಘಟನೆ ನಿನ್ನೆ ಸಂಜೆ ಉಡುಪಿ ಕಲ್ಸಂಕ ಸಮೀಪದ ಬಡಗುಪೇಟೆ ರಸ್ತೆಯ ಅಪಾರ್ಟ್‌ಮೆಂಟ್‌ವೊಂದರಲ್ಲಿ ನಡೆದಿದೆ. ಅದೃಷ್ಟವಶಾತ್ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ.

ಮೂರು ಅಂತಸ್ತಿನ ಅಪಾರ್ಟ್‌ಮೆಂಟ್‌ನ ಮೂರನೇ ಮಹಡಿಯಲ್ಲಿ



ಪಶ್ಚಿಮ ಬಂಗಾಳ ಮೂಲದ ಕಾರ್ಮಿಕರು ಪಾರ್ಟಿ ಮಾಡುತ್ತಿದ್ದರು ಎನ್ನಲಾಗಿದೆ. ಈ ಸಂದರ್ಭದಲ್ಲಿ ಗ್ಯಾಸ್ ಸಿಲಿಂಡರ್ ಲೀಕ್ ಆದ ಪರಿಣಾಮ ಏಕಾಏಕಿ ಬೆಂಕಿ ಹೊತ್ತಿಕೊಂಡಿದೆ.

**ಮನೆ ಗೋಡೆಯಲ್ಲಾ ಛಿದ್ರ ಛಿದ್ರ!:** ಸಿಲಿಂಡರ್ ಸ್ಫೋಟದ ತೀವ್ರತೆಗೆ ಮನೆಯ ಗೋಡೆಯಲ್ಲಾ ಛಿದ್ರ ಛಿದ್ರವಾಗಿವೆ. ಮನೆಯಲ್ಲಿದ್ದ ವಸ್ತುಗಳು ಸುಟ್ಟು ಕರಕಲಾಗಿದ್ದು, ಅಪಾರ ಪ್ರಮಾಣದ ಹಾನಿಯುಂಟಾಗಿದೆ. ಪುಟ 2

### ಉತ್ತಮ ಗಾಳಿ ಇರುವ ಟಾಪ್ 10 ಸಿಟಿಗಳಲ್ಲಿ

# ಚ.ಪಟ್ಟಣ ನಂ.1

**ಹಾಸನ:** ರಾಜ್ಯದ ಸ್ವಚ್ಛ ಹಾಗೂ ಉತ್ತಮ ಗಾಳಿ ಇರುವ ಟಾಪ್ 10 ಸಿಟಿಗಳಲ್ಲಿ ಹಾಸನದ ಎರಡು ನಗರಗಳು ಸೇರಿವೆ. ನಂ.1 ಸ್ಥಾನದಲ್ಲಿ ಚನ್ನರಾಯಪಟ್ಟಣ ಹಾಗೂ 3ನೇ ಸ್ಥಾನದಲ್ಲಿ ಬೇಲೂರು ಸ್ಥಾನ ಪಡೆದಿದೆ ಎಂದು ವಾಯು ಗುಣಮಟ್ಟ ಸೂಚ್ಯಂಕ ವರದಿ ಬಹಿರಂಗಪಡಿಸಿದೆ.

ದೀಪಾವಳಿ ಹಬ್ಬದ ವೇಳೆ ಪಟಾಕಿ ಸಿಡಿಸಿದ್ದರಿಂದ ದೇಶಾದ್ಯಂತ ವಾಯುಮಾಲಿನ್ಯ ತೀವ್ರವಾಗಿ ಹೆಚ್ಚಿದೆ. ಅದರಲ್ಲೂ ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ವಾಯು ಗುಣಮಟ್ಟ ಸೂಚ್ಯಂಕ 400 ದಾಟಿದೆ. ಇದು ಅತ್ಯಂತ ಅಪಾಯಕಾರಿ ಮಟ್ಟವಾಗಿದೆ. ಇದರ ನಡುವೆ ದೇಶದಲ್ಲಿ ಸ್ವಚ್ಛ ಹಾಗೂ ಉತ್ತಮ ಗಾಳಿ ಇರುವ ಟಾಪ್ 10 ನಗರಗಳ ಹೆಸರು ಬಹಿರಂಗಗೊಂಡಿದೆ. ಪುಟ 2



### ಬಿಬಿಎಂಪಿ ತೆರಿಗೆ ಬಾಕಿ ಉಳಿಸಿಕೊಂಡ ಯಶವಂತಪುರ ಮಾರುಕಟ್ಟೆಯ

# 32 ಅಂಗಡಿಗಳಿಗೆ ಬೀಗ



**ಬೆಂಗಳೂರು:** ಬೆಂಗಳೂರಿನಲ್ಲಿ ಅತಿ ಹೆಚ್ಚು ತೆರಿಗೆ ಬಾಕಿ ಉಳಿಸಿಕೊಂಡಿರುವ ಅಂಗಡಿಗಳಿಗೆ ಬೀಗ ಹಾಕುವ ಕೆಲಸವನ್ನು ಬಿಬಿಎಂಪಿ ಚುರುಕುಗೊಳಿಸಿದೆ. ಬಿಬಿಎಂಪಿ ವ್ಯಾಪ್ತಿಯ ಎಂಟು ವಲಯಗಳಲ್ಲೂ ಈ ಅಭಿಯಾನ ನಡೆಯುತ್ತಿದ್ದು ಸೋಮವಾರ ಪಶ್ಚಿಮ ವಲಯದ ಯಶವಂತಪುರ ಆರ್ ಟಿಒ ಕಚೇರಿ ಮುಂಭಾಗದ ಮಾರ್ಕೆಟ್‌ನಲ್ಲಿ ಇರುವ 32 ಅಂಗಡಿಗಳಿಗೆ ಬೀಗ ಹಾಕಿ ಸೀಲ್ ಮಾಡಲಾಗಿದೆ.

ಆರ್‌ಟಿಒ ಕಚೇರಿ ಮುಂಭಾಗದಲ್ಲಿ ಒಟ್ಟು 42 ಅಂಗಡಿಗಳು ಟ್ಯಾಕ್ಸ್ ಕಟ್ಟದೇ ಬಾಕಿ ಉಳಿಸಿಕೊಂಡಿದ್ದವು. ಈ ಪೈಕಿ ಸೆಂಟ್ರಲ್ ಮುಸ್ಲಿಂ ಅಸೋಸಿಯೇಷನ್‌ಗೆ ಸೇರಿದ 32 ಅಂಗಡಿಗಳಿಗೆ ಸೇರಿದಂತೆ ಇನ್ನುಳಿದ ಅಂಗಡಿಗಳಿಗೆ ನೋಟಿಸ್ ನೀಡಲಾಗಿತ್ತು. ಆದರೆ ಟ್ಯಾಕ್ಸ್ ಪಾವತಿ ಮಾಡಿರಲಿಲ್ಲ. ಪುಟ 2

# ಯುಟ್ಯೂಬ್ ನೋಡಿ ರೋಗಿಗೆ ಇಸಿಜಿ ಟೆಸ್ಟ್ ಮಾಡಿದ ಲ್ಯಾಬ್ ಅಟೆಂಡೆಂಟ್

**ನವದೆಹಲಿ:** ಯುಟ್ಯೂಬ್, ಗೂಗಲ್ ನೋಡಿಕೊಂಡೇ ಹೆಚ್ಚಿನವರು ಹೊಸ ಹೊಸ ವಿಷಯಗಳನ್ನು ಕಲಿಯುತ್ತಿರುತ್ತಾರೆ. ಇಲ್ಲಿ ಅಡುಗೆಯಿಂದ ಹಿಡಿದು ಆಟ ಪಾಠದ ವರೆಗೂ ಎಲ್ಲಾ ಮಾಹಿತಿಗಳು ಲಭ್ಯವಿದೆ. ಕೆಲವರು ಯುಟ್ಯೂಬ್ ನೋಡಿಕೊಂಡು ಒಳ್ಳೆ ಒಳ್ಳೆಯ ವಿಷಯಗಳನ್ನು ಕಲಿತರೆ, ಇನ್ನೂ ಯುಟ್ಯೂಬ್ ನೋಡಿ ಕಳ್ಳತನ ಮಾಡುವುದು, ಆಪರೇಷನ್ ಮಾಡುವುದು, ಬಾಂಬ್ ತಯಾರಿಸುವುದನ್ನು ಕಲಿತವರು ಕೂಡಾ ಇದ್ದಾರೆ. ಈ ಘಟನೆಗಳ ಸುದ್ದಿಗಳು ಈ ಹಿಂದೆ ವೈರಲ್ ಆಗಿದ್ದವು. ಇದೀಗ ಅಂತಹದ್ದೇ ಘಟನೆಯೊಂದು ನಡೆದಿದ್ದು, ವೈದ್ಯರು ಮತ್ತು ಲ್ಯಾಬ್ ಟೆಕ್ನಿಷಿಯನ್ ರಜೆಯಲ್ಲಿ ಇದ್ದ ಕಾರಣ ಆಸ್ಪತ್ರೆಗೆ ಬಂದ ರೋಗಿಗೆ ಲ್ಯಾಬ್ ಅಟೆಂಡರ್ ಯುಟ್ಯೂಬ್ ನೋಡಿ ಇಸಿಜಿ ಮಾಡಿದ್ದಾನೆ. ಸದ್ಯ ಈ ವಿಡಿಯೋ ಸಿಕ್ಕಾಪಟ್ಟೆ ವೈರಲ್ ಆಗಿದೆ.



ಈ ಆಘಾತಕಾರಿ ಘಟನೆ ರಾಜಸ್ಥಾನದ ಜೋಧ್‌ಪುರದ ಸರ್ಕಾರಿ ಆಸ್ಪತ್ರೆಯಲ್ಲಿ ನಡೆದಿದ್ದು, ದೀಪಾವಳಿಯ ಪ್ರಯುಕ್ತ ವೈದ್ಯರು ಮತ್ತು ಲ್ಯಾಬ್ ಸಿಬ್ಬಂದಿಗಳು ರಜೆಯಲ್ಲಿದ್ದ ಕಾರಣ ಆಸ್ಪತ್ರೆಗೆ ಬಂದ ರೋಗಿಗೆ ಯುಟ್ಯೂಬ್ ನೋಡಿಕೊಂಡು ಅಟೆಂಡರ್ ಇಸಿಜಿ ಟೆಸ್ಟ್ ಮಾಡಿದ್ದಾನೆ. ಅಕ್ಟೋಬರ್ 31 ರಂದು ಈ ಘಟನೆ ನಡೆದಿದ್ದು, ರೋಗಿಯ ಸಂಬಂಧಿ ನಿಮಗೆ ತಿಳಿದಿಲ್ಲ ಅಂದ್ರೆ, ದಯವಿಟ್ಟು ಈ ಎಡವಟ್ಟು ಕೆಲಸಕ್ಕೆ ಪುಟ 2

# ಸಿದ್ದರಾಮಯ್ಯ ಇರೋವರೆಗೂ ಸಿಎಂ ಬದಲಾವಣೆ ಚರ್ಚೆ ಇಲ್ಲ

**ಬೆಂಗಳೂರು:** ಸಿದ್ದರಾಮಯ್ಯ ಇರುವವರೆಗೂ ಸಿಎಂ ಬದಲಾವಣೆ ಚರ್ಚೆಯೇ ಇಲ್ಲ ಎಂದು ಸಚಿವ ಮಹದೇವಪ್ಪ ತಿಳಿಸಿದ್ದಾರೆ.



ಉಪಚುನಾವಣೆ ಫಲಿತಾಂಶ ಸಿಎಂ ಸ್ಥಾನದ ಮೇಲೆ ಪರಿಣಾಮ ಬೀರುತ್ತಾ ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, 136 ಸ್ಥಾನ ನಾವು ಇದ್ದೇವೆ. ಒಂದು ಸ್ಥಾನಕ್ಕೆ ಈಗ ಚುನಾವಣೆ ನಡೆಯುತ್ತಿದೆ. ಒಂದು ಸ್ಥಾನದಿಂದ ಸಿಎಂ ಸ್ಥಾನಕ್ಕೆ ಯಾಕೆ ಪರಿಣಾಮ ಬೀರುತ್ತದೆ. ಮುಖ್ಯಮಂತ್ರಿ ಸ್ಥಾನ ಯಾಕೆ ಅಲ್ಲಾಡುತ್ತದೆ. ಕೋಳಿವಾಡ ಹೇಳಿಕೆ ಅವರ ವೈಯಕ್ತಿಕ. ಹರಿಯಾಣ ಸೋಲಿಗೆ ಬೇರೆ ಕಾರಣ ಇದೆ. ಸಿಎಂ ಬದಲಾವಣೆ ಚರ್ಚೆಯೇ ಇಲ್ಲ ಎಂದರು. ಸಿದ್ದರಾಮಯ್ಯ ಇರುವವರೆಗೂ ಸಿಎಂ ಬದಲಾವಣೆಯ ಯಾವುದೇ ಮಾತು ಇಲ್ಲ. ಕಾಂಗ್ರೆಸ್ ಮುಂದೆ ಸಿಎಂ ಬದಲಾವಣೆ ವಿಷಯ ಇಲ್ಲ. ಸಿದ್ದರಾಮಯ್ಯ ಸಿಎಂ ಆಗಿದ್ದಾರೆ. ಅವರೇ ಮುಂದುವರೆಯತ್ತಾರೆ ಎಂದು ಸ್ಪಷ್ಟಪಡಿಸಿದರು.

# 'ನಾ ಡ್ರೈವರ್' ಖ್ಯಾತಿಯ ಮಾಳು ನಿಪನಾಳನಿಂದ ಹಲ್ಲೆ?

**ಬೆಳಗಾವಿ:** ಉತ್ತರ ಕರ್ನಾಟಕ ಭಾಗದಲ್ಲಿ ಇತ್ತೀಚೆಗೆ ಜಾನಪದ ಹಾಡುಗಳು ಭಾರೀ ಸದ್ದು ಮಾಡುತ್ತಿವೆ. ಅದರಲ್ಲೂ 'ನಾ ಡ್ರೈವರ್' ಹಾಡು ಕೇವಲ ಉತ್ತರ ಕರ್ನಾಟಕ ಮಾತ್ರವಲ್ಲ ಕರ್ನಾಟಕದಾದ್ಯಂತ ಸಖತ್ ಹವಾ ಕ್ರಿಯೇಟ್ ಮಾಡಿತ್ತು.



ಈ ಹಾಡಿನ ಜೊತೆಗೆ ಹಾಡು ಹಾಡಿದ ಗಾಯಕ ಮಾಳು ನಿಪನಾಳ ಕೂಡ ಸೆಲೆಬ್ರಿಟಿಯಾಗಿ ಹೊರಹೊಮ್ಮಿದ್ದಾರೆ. ಆದರೆ ಇದೀಗ ಅವರ ಮೇಲೆ ಗಂಭೀರ ಆರೋಪವೊಂದು ಕೇಳಿಬಂದಿದೆ. ಹೌದು, ಕುಡಿದ ಮತ್ತಲ್ಲಿ ಮಾಳು ನಿಪನಾಳ ಗ್ಯಾಂಗ್ ಮಹಿಳೆಯರು ಎನ್ನದೇ ಹಲ್ಲೆ ಮಾಡಿದೆ ಎಂದು ಗಂಭೀರ ಆರೋಪ ಮಾಡಿದ್ದಾರೆ.

**ನಿಪನಾಳ ಗ್ರಾಮದ ಬಳಿ ಘಟನೆ:** ಬೆಳಗಾವಿ ಜಿಲ್ಲೆಯ ರಾಯಬಾಗ ತಾಲೂಕಿನ ನಿಪನಾಳ ಗ್ರಾಮದ ಬಳಿ ಬೈಕ್ ಮೇಲೆ ತೆರಳುತ್ತಿದ್ದ ಮೂವರ ಮೇಲೆ ಹಲ್ಲೆ ನಡೆಸಲಾಗಿದೆ ಎಂದು ಹೇಳಲಾಗುತ್ತಿದೆ. ಶೇಖರ ಹಕ್ಯಾಗೋಳ, ಅಶ್ವಿನಿ ಈರಿಗಾರ, ರೂಪಾ ಹಕ್ಯಾಗೋಳ ಎಂಬುವವರು ಹಲ್ಲೆಗೊಳಗಾದವರು ಎಂದು ತಿಳಿದುಬಂದಿದೆ. ಇವರು ಚಿಕ್ಕೋಡಿ ತಾಲೂಕಿನ ಕೇರೂರು ಗ್ರಾಮದವರಾಗಿದ್ದು, ಶೇಖರ ಹಕ್ಯಾಗೋಳ ತಲೆಗೆ ಗಂಭೀರ ಗಾಯವಾಗಿದೆ ಮತ್ತು ಓರ್ವ ಮಹಿಳೆಯ ಕೈಗೆ ಗಂಭೀರ ಗಾಯವಾಗಿದೆ. ಗಾಯಾಳುಗಳಿಗೆ ಚಿಕ್ಕೋಡಿ ಪಟ್ಟಣದ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.

ಕುಡಿದ ಮತ್ತಿನಲ್ಲಿದ್ದ ಮಾಳು ನಿಪನಾಳ ಸೇರಿ 10 ಜನರ ಗ್ಯಾಂಗ್ ರ್‍ಯಾಶ್ ಡ್ರೈವಿಂಗ್ ಮಾಡಿಕೊಂಡು ಹೋಗಿದ್ದಾರೆ. ಆಗ ಹಲ್ಲೆಗೊಳಗಾದ ಮೂವರು, ನೋಡಿಕೊಂಡು ಕಾರು ಚಲಾಯಿಸಿ ಎಂದಿದ್ದಕ್ಕೆ ಮೂವರ ಮೇಲೆ ಹಲ್ಲೆ ಮಾಡಿದ್ದಾರೆ ಎಂಬ ಆರೋಪ ಕೇಳಿಬಂದಿದೆ.

### ಪತಿ ನಿಖಿಲ್ ಪರ ಮತಬೇಟೆಗಿಳಿದ ಪತ್ನಿ ರೇವತಿ

# ರಂಗೇರಿದ ಚನ್ನಪಟ್ಟಣ ಉಪಕಣ

**ರಾಮನಗರ:** ಚನ್ನಪಟ್ಟಣ ಉಪಚುನಾವಣೆ ಅಖಾಡ ರಂಗೇರಿದೆ. ಉಭಯ ನಾಯಕರು ಪ್ರಚಾರ ಕಾರ್ಯದಲ್ಲಿ ತೊಡಗಿದ್ದಾರೆ. ಎನ್‌ಡಿಎ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ಹಾಗೂ ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿ ಪ್ರತ್ಯೇಕವಾಗಿ ಹಳ್ಳಿ, ಹಳ್ಳಿಗೆ ಭೇಟಿ ನೀಡಿ ಮತಯಾಚನೆ ಮಾಡುತ್ತಿದ್ದಾರೆ.

**ಮತಬೇಟೆಗಿಳಿದ ನಿಖಿಲ್ ಪತ್ನಿ:** ಸೋಮವಾರವಾದ ಇಂದು ಸಹ 10ಕ್ಕೂ ಹೆಚ್ಚು ಗ್ರಾಮದಲ್ಲಿ ಪುತ್ರನ ಪರ ಮತಯಾಚನೆ ನಡೆಸಲಿದ್ದರೆ, ನಿಖಿಲ್ 15 ಹಳ್ಳಿಗಳಲ್ಲಿ ಪ್ರಚಾರ ಕಾರ್ಯ ಹಮ್ಮಿಕೊಂಡಿದ್ದಾರೆ. ಚನ್ನಪಟ್ಟಣದ ಹೆಚ್.ಬ್ಯಾಡರಳ್ಳಿ, ಬೊಮ್ಮನಾಯಕನಹಳ್ಳಿ ಹಾಗೂ ಬೇವೂರು ಗ್ರಾ.ಪಂ ವ್ಯಾಪ್ತಿಯಲ್ಲಿ ಮತಯಾಚನೆ ನಡೆಸುತ್ತಿದ್ದಾರೆ. ಇದರೊಂದಿಗೆ ಪತ್ನಿ ರೇವತಿ ಕೂಡ ನಿಖಿಲ್ ಪರವಾಗಿ ಮತಬೇಟೆಗಿಳಿದಿದ್ದಾರೆ. ಮೈತ್ರಿ ಅಭ್ಯರ್ಥಿ ನಿಖಿಲ್ ಪರ ಬೆಳ್ಳಂ ಬೆಳಗ್ಗೆಯಿಂದಲೇ ಪತ್ನಿ ರೇವತಿ ಪ್ರಚಾರ ಶುರು ಮಾಡಿದ್ದಾರೆ. ಚನ್ನಪಟ್ಟಣದ ಮಹಿಳಾ ಕಾಲೇಜು ಮುಂಭಾಗ ವಿದ್ಯಾರ್ಥಿಗಳಿಗೆ ಕರಪತ್ರ ಹಂಚಿ ನಿಖಿಲ್‌ಗೆ ಮತ ನೀಡುವಂತೆ ಮನವಿ ಮಾಡಿದ್ದಾರೆ. ನಿಖಿಲ್ ಪತ್ನಿ ರೇವತಿ ಅವರಿಗೆ ಜೆಡಿಎಸ್ ಮಹಿಳಾ ಕಾರ್ಯಕರ್ತರು ಸಾಥ್ ನೀಡಿದ್ದಾರೆ.



ಇನ್ನೂ ಪ್ರಚಾರದ ವೇಳೆ ಮಾತನಾಡಿರುವ ನಿಖಿಲ್, ಕುಮಾರಸ್ವಾಮಿ ಎರಡು ಬಾರಿ ಈ ಕ್ಷೇತ್ರದಲ್ಲಿ ಗೆದ್ದಿದ್ದಾರೆ. ಸಾಕಷ್ಟು ಅಭಿವೃದ್ಧಿ ಕೆಲಸ ಮಾಡಿದ್ದಾರೆ. ರೈತರ ಸಾಲಮನ್ನಾ ಮಾಡಿದ ಕೀರ್ತಿ ಕುಮಾರಸ್ವಾಮಿ ಅವರಿಗೆ ಸಲ್ಲುತ್ತೆ. ದೇವೇಗೌಡರು ಕಳೆದ 30 ವರ್ಷಗಳಿಂದ ಹಿಂದೆ ನಿರ್ಣಯ ಮಾಡಿ ಇಗ್ಗಲೂರು ಡ್ಯಾಂ ಮಾಡಿದ್ರು. ಕೆಲವರು 17ಕೆರೆ ತುಂಬಿಸಿದ್ದೇವೆ ಅಂತ ಪ್ರಚಾರ ತೆಗೆದುಕೊಳ್ತಾರೆ. ಆದರೆ ಸದಾನಂದಗೌಡರವರ ಕಾಲದಲ್ಲಿ ಆ ಕೆರೆಗಳನ್ನ ತುಂಬಿಸಿದ್ದು. ವಿ. ಸೋಮಣ್ಣ ಅವರು ಅನುದಾನ ಕೊಟ್ಟು ಕೆರೆಗಳಿಗೆ ಮರುಜೀವ ನೀಡಿದ್ರು. ಕುಮಾರಸ್ವಾಮಿಯವರೂ ಸುಮಾರು 100ಕ್ಕೂ ಹೆಚ್ಚು ಕೆರೆಗಳನ್ನ ತುಂಬಿಸಿದ್ದಾರೆ ಎಂದು ಹೆಚ್‌ಡಿಕೆ ಸಾಧನೆಯನ್ನ ಬಣ್ಣಿಸಿದ್ರು.

ಈ ಹಿಂದೆ ಕುಮಾರಸ್ವಾಮಿ ಅವರು ಸಾರಾಯಿ, ಲಾಟರಿ ನಿಷೇಧ ಮಾಡಿದ್ರು. ಇತ್ತೀಚಿನ ಆನ್ಲೈನ್ ಗೇಮಗಳಿಗೆ ಯುವಕರು ಬಲಿ ಆಗ್ತಿದ್ದಾರೆ. ಇದಕ್ಕೆ ಕಡಿವಾಣ ಹಾಕಬೇಕು ಅಂದ್ರೆ ಮತ್ತೆ ಬಿಜೆಪಿ-ಜೆಡಿಎಸ್ ಮೈತ್ರಿ ಸರ್ಕಾರ ಅಧಿಕಾರಕ್ಕೆ ಬರಬೇಕು. ಚನ್ನಪಟ್ಟಣ ತಾಲೂಕಿನಲ್ಲಿ ಅತಿಹೆಚ್ಚು ಹಾಲು ಉತ್ಪಾದನೆ ಆಗುತ್ತೆ. ಸರ್ಕಾರ ರೈತರಿಗೆ ಸರಿಯಾದ ಬೆಂಬಲ ಬೆಲೆ ಕೊಡ್ತಿಲ್ಲ. ಹಾಗಾಗಿ ಈ ಬಾರಿ ಒಂದು ಅವಕಾಶ ಮಾಡಿಕೊಡಿ. ಈ ಚುನಾವಣೆಯ ಸ್ಪರ್ಧೆ ಅನಿರೀಕ್ಷಿತ. ಕಾಂಗ್ರೆಸ್ ಅಭ್ಯರ್ಥಿ ನಾಲ್ಕು ಬಾರಿ ಶಾಸಕರಾಗಿದ್ದಾರೆ. ನನಗೆ ಒಂದು ಅವಕಾಶ ಕೊಟ್ಟು ನೋಡಿ. ಈ ಭಾಗದಲ್ಲಿ ಒಂದು ಕೈಗಾರಿಕೆ ನಿರ್ಮಾಣ ಮಾಡಿ ನಿರುದ್ಯೋಗ ಸಮಸ್ಯೆ ನಿವಾರಣೆ ಮಾಡ್ತೇವೆ ಎಂದು ನಿಖಿಲ್ ಆಶ್ವಾಸನೆ ನೀಡಿದರು.

# ತಮಾಷೆ ಮಾಡಲು ಹೋಗಿ ಹಾರಿಹೋಯ್ತು ಯುವಕನ ಜೀವ!

**ಬೆಂಗಳೂರು:** ಭಾರತದ ಭವಿಷ್ಯದ ಪ್ರಜೆಗಳಾಗಿರುವ ಇಂದಿನ ಯುವ ಜನಾಂಗದವರು ಸಾಮಾಜಿಕ ಮಾಧ್ಯಮಗಳಿಗೆ ವ್ಯಸನಿಗಳಾಗುತ್ತಿದ್ದಾರೆ. ರೀಲ್ಸ್, ವಿಡಿಯೋ ಮಾಡುವುದು, ತಮಾಷೆ ಮಾಡುವ ಪ್ರಲೋಭನೆಯಲ್ಲಿ ಸಿಲುಕಿ ತಮ್ಮ ವಿವೇಚನೆಯನ್ನು ಕಳೆದುಕೊಂಡು ನಡೆದುಕೊಳ್ಳುತ್ತಿದ್ದಾರೆ. ಇದಕ್ಕೆ ತಾಜಾ ಉದಾಹರಣೆಯಾಗಿ ದೀಪಾವಳಿಯ ಸಂದರ್ಭದಲ್ಲಿ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆದ ಹಲವು ವಿಡಿಯೋಗಳನ್ನು ನಾವು ನೋಡಬಹುದು.

ದೀಪಾವಳಿಯ ಸಂಪ್ರದಾಯವಾಗಿ ಹಬ್ಬ ದಿನದಂದು ಪಟಾಕಿ ಹಚ್ಚಿ ಸಂಭ್ರಮಾಚರಣೆ ಮಾಡೋದು ಸಾಮಾನ್ಯ. ಆದರೆ ಇದೇ ವೇಳೆಯೇ ಹಲವರು ತಮಾಷೆ ನೆಪದಲ್ಲಿ ಜೀವನಕ್ಕೆ ಕುತ್ತು ತಂದುಕೊಳ್ಳುತ್ತಿದ್ದಾರೆ. ಪಟಾಕಿ ಹಚ್ಚುವ ಸಂದರ್ಭದಲ್ಲಿ ವಿವಿಧ ವಿನ್ಯಾಸಗಳನ್ನು ಮಾಡಲು ಹೋಗಿ ಗಾಯಗೊಂಡಿರುವವರನ್ನು ನಾವು ನೋಡಿರುತ್ತೇವೆ. ಇದೇ ರೀತಿ ಯುವಕನೋರ್ವ ತನ್ನ ಸ್ನೇಹಿತರೊಂದಿಗೆ ಸೇರಿ ಪಟಾಕಿ ಸಿಡಿಸಲು ಹೋಗಿ ಜೀವ ಕಳೆದುಕೊಂಡಿರುವ ಘಟನೆ ಬೆಂಗಳೂರಿನಲ್ಲಿ ನಡೆದಿದೆ. ಈ ಘಟನೆಗೆ ಸಂಬಂಧಿಸಿದ ವಿಡಿಯೋ ಸ್ಥಳದಲ್ಲಿದ್ದ ಸಿಸಿಟಿವಿಯಲ್ಲಿ ಸೆರೆಯಾಗಿದ್ದು, ಕೋಣನಕುಂಟೆಯ ವೀವರ್ಸ್ ಕಾಲೋನಿಯಲ್ಲಿ ಘಟನೆ ನಡೆದಿದೆ.

**ಅಸಲಿಗೆ ಆಗಿದ್ದೇನು?:** ರಾಜಧಾನಿ ಬೆಂಗಳೂರಿನಲ್ಲಿ ದಾರುಣ ಘಟನೆ ನಡೆದಿದ್ದು, ಪಟಾಕಿ ಸುಡುವ ಸಂದರ್ಭದಲ್ಲಿ ಯುವಕರ ತಮಾಷೆ ಒಂದು ಜೀವವನ್ನೇ ಬಲಿ ಪಡೆದುಕೊಂಡಿದೆ. ದೀಪಾವಳಿ ಹಬ್ಬದ ದಿನವೇ ಘಟನೆ ನಡೆದಿದ್ದು, ದುರ್ಘಟನೆಯಲ್ಲಿ ಶಬರೀಶ್ ಎಂಬ ಯುವಕ ಮೃತಪಟ್ಟಿದ್ದಾನೆ.



» **ಸ್ನೇಹಿತರಿಗೆ ಚಾಲೆಂಜ್, ಡಬ್ಬದ ಕೆಳಗೆ ಪಟಾಕಿ ಇಟ್ಟು ಮೇಲೆ ಕುಳಿತ ಭೂಪ**

ಹಬ್ಬದ ದಿನ ಮೃತ ಶಬರೀಶ್ ಹಾಗೂ ಸ್ನೇಹಿತರು ಪಟಾಕಿ ಹೊಡೆಯುತ್ತಿದ್ದರು. ಈ ವೇಳೆ ಪಟಾಕಿ ಇಟ್ಟು ಅದರ ಮೇಲೆ ಡಬ್ಬ ಇಟ್ಟು ಕೂರಲು ಚಾಲೆಂಜ್ ಮಾಡಿದ್ದರಂತೆ. ಮದ್ಯಪಾನ ಮಾಡಿದ್ದ ಶಬರೀಶ್ ಅದೇ ರೀತಿ ಮಾಡಿದ್ದನಂತೆ. ಪಟಾಕಿ ಸಿಡಿದ ರಭಸಕ್ಕೆ ತೀವ್ರ ಗಾಯಗೊಂಡಿದ್ದ ಶಬರೀಶ್ ಅನ್ನು ಕೂಡಲೇ ಆಸ್ಪತ್ರೆಗೆ ದಾಖಲಿಸಿದರೂ ಚಿಕಿತ್ಸೆ ಫಲಕಾರಿಯಾಗದೆ ಆತನ ಆಸ್ಪತ್ರೆಯಲ್ಲಿ ಸಾವನ್ನಪ್ಪಿದ್ದಾನೆ.

ಕೋಣನಕುಂಟೆಯ ವೀವರ್ಸ್ ಕಾಲೋನಿಯಲ್ಲಿ ಘಟನೆ ನಡೆದಿದ್ದು, ಘಟನೆ ಸಂಬಂಧ ಕೋಣನಕುಂಟೆ ಪೊಲೀಸರು ಆರು ಮಂದಿಯನ್ನು ಬಂಧಿಸಿದ್ದಾರೆ. ಬಂಧಿತ ನವೀನ್, ದಿನಕರ್, ಸತ್ಯವೇಲು, ಕಾರ್ತಿಕ್, ಸತೀಶ್, ಸಂತೋಷ್ ಮೇಲೆ ಪೊಲೀಸರು ಕೇಸ್ ದಾಖಲು ಮಾಡಿದ್ದಾರೆ. ಕೋಣನಕುಂಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲು ಮಾಡಲಾಗಿದೆ.

# ಕಾನೂನುಬಾಹಿರವಾಗಿ ರೈತರ ಒಂದಿಂಚು ಜಾಗವನ್ನು ವಕ್ಫ್ ವಶಪಡಿಸಿಕೊಳ್ಳಲು ಬಿಡಲ್ಲ

**ಬೆಂಗಳೂರು:** ರೈತರ ಒಂದಿಂಚು ಜಾಗವನ್ನ ಕಾನೂನುಬಾಹಿರವಾಗಿ ವಕ್ಫ್ ವಶಪಡಿಸಿಕೊಳ್ಳಲು ನಾನು ಬಿಡೋದಿಲ್ಲ ಎಂದು ಸಚಿವ ಎಂಬಿ ಪಾಟೀಲ್ ತಿಳಿಸಿದ್ದಾರೆ.



ವಕ್ಫ್ ವಿಚಾರವಾಗಿ ಬಿಜೆಪಿ ಪ್ರತಿಭಟನೆಗೆ ಪ್ರತಿಕ್ರಿಯೆ ನೀಡಿದ ಅವರು, ವಕ್ಫ್ ವಿಚಾರವಾಗಿ ಬಿಜೆಪಿ ಪ್ರತಿಭಟನೆ ಮಾಡಿ ರಾಜಕೀಯ ಮಾಡುತ್ತಿದ್ದಾರೆ. ಬೊಮ್ಮಾಯಿ ಸಿಎಂ ಆಗಿದ್ದಾಗ ಏನು ಹೇಳಿದ್ದಾರೆ ಎಲ್ಲಾ ನೋಡಿದ್ದಾರೆ. ಬಿಜೆಪಿ ಅವಧಿಯಲ್ಲಿ ನೋಟಿಸ್ ಕೊಟ್ಟಿದ್ದಾರೆ. ಬಿಜೆಪಿ ಅವಧಿಯಲ್ಲಿ ವಕ್ಫ್ ಆಸ್ತಿ ಎಂದು ಹೆಸರು ಬಂದಿತ್ತು. ಈಗಾಗಲೇ ಸಿಎಂ ಕ್ಲಿಯರ್ ಮಾಡಿದ್ದಾರೆ. ಯಾವ ರೈತರ ಜಮೀನು ಸರ್ಕಾರ ಪಡೆಯೋದಿಲ್ಲ ಎಂದು ತಿಳಿಸಿದರು.

ನಮ್ಮ ಜಿಲ್ಲೆಯಲ್ಲಿ ಟಾಸ್ಕ್ ಫೋರ್ಸ್ ಮಾಡಿದ್ದೇವೆ. ಎಲ್ಲಾ ದಾಖಲಾತಿ ತೆಗೆದು ರೈತರ ಜಾಗ ಇದ್ದರೆ ರೈತರಿಗೆ ಕೊಡುತ್ತೇವೆ. ವಕ್ಫ್ ಆಸ್ತಿ ಇದ್ದರೆ ಅವರಿಗೆ ಕೊಡುತ್ತೇವೆ. ಸರ್ಕಾರದ ಜಾಗ ಇದ್ದರೆ ಸರ್ಕಾರ ಪಡೆಯುತ್ತದೆ. ಬಿಜೆಪಿ ಅವರು ಜನರನ್ನು ಕೆರಳಿಸುವ ಕೆಲಸ ಮಾಡುತ್ತಿದ್ದಾರೆ. ಒಂದು ಇಂಚು ರೈತರ ಆಸ್ತಿ ಕಾನೂನುಬಾಹಿರವಾಗಿ ವಕ್ಫ್ ಆಸ್ತಿ ಆಗಲು ನಾನು ಬಿಡೋದಿಲ್ಲ ಎಂದು ಸ್ಪಷ್ಟಪಡಿಸಿದರು.

ಶಾಸಕ ಯತ್ನಾಳ್ ಅವರಿಂದ ಅಹೋರಾತ್ರಿ ಧರಣಿ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಯತ್ನಾಳ್ ಮೊದಲು ಜೆಡಿಎಸ್‌ನಲ್ಲಿ ಇದ್ದವರು. ಯತ್ನಾಳ್ ಹಿಂದೆ ಟಿಪ್ಪು ಸುಲ್ತಾನ್ ಡ್ರೆಸ್ ಹಾಕಿದ್ದರು. ನಮ್ಮ ಜೊತೆಗೆ ದರ್ಗಾಗೆ ಬಂದಿದ್ದಾರೆ. ನಾವು ರಾಜಕೀಯ ಮಾಡಲ್ಲ. ಅವರು ರಾಜಕೀಯ ಮಾಡುತ್ತಿದ್ದಾರೆ. ನಾವು ಯಾವುದೇ ಧರ್ಮದವರು, ಜಾತಿಯವರು ಇದ್ದರೂ ಯಾರಿಗೂ ಅನ್ಯಾಯ ಮಾಡಲು ಬಿಡಲ್ಲ. ಈಗಾಗಲೇ ಸಿಎಂ ಅವರು ಹೇಳಿದ್ದಾರೆ. ನಾನು ಹೇಳಿದ್ದೇನೆ, ಕಂದಾಯ ಸಚಿವರು ಹೇಳಿದ್ದಾರೆ ಎಂದರು.

# 2,000 ಜನ ವಾಸಿಸುವ ಇಡೀ ಗ್ರಾಮದ ಮೇಲೆ ವಕ್ಫ್ ವಕ್ರದೃಷ್ಟಿ



**ಬೀದರ್:** ರೈತರ ಜಮೀನಾಯ್ತು, ಮಠ, ಮಂದಿರವಾಯ್ತು ಇದೀಗ ಸರ್ಕಾರಿ ಶಾಲೆ ಹಾಗೂ ಗ್ರಾಮಸ್ಥರ ಮನೆಗಳ ಮೇಲೆಯೂ ವಕ್ಫ್ ವಕ್ರದೃಷ್ಟಿ ಬಿದಿದ್ದು ಇಡೀ ಗ್ರಾಮಕ್ಕೆ ಗ್ರಾಮವೇ ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯ ಸುಪರ್ದಿಗೆ ಸೇರಿಸಲಾಗಿದೆ.

ಬೀದರ್ ತಾಲೂಕಿನ ಧರ್ಮಾಪುರ ಗ್ರಾಮದ 2024ರ ಪಹಣಿ ಕಂಡು ಗ್ರಾಮಸ್ಥರು ತಬ್ಬಿಬ್ಬಾಗಿದ್ದು ಗ್ರಾಮದ ಸರ್ಕಾರಿ ಜಮೀನಿನ ಸರ್ವೆ ನಂಬರ್ 87ರ 26 ಎಕರೆ ಜಾಗಕ್ಕೆ ವಕ್ಫ್ ಸೇರಿದ್ದು ಜಾಗಕ್ಕೆ ನೀಷೇದ ಮಾಡಲಾಗಿದೆ.

ಸರ್ಕಾರಿ ಶಾಲೆ, ಮನೆಗಳು, ದೇವಸ್ಥಾನ, ಅಂಗನವಾಡಿಗಳು ಸೇರಿದಂತೆ ಇಡೀ ಗ್ರಾಮವನ್ನು ಪಹಣಿಯಲ್ಲಿ ವಕ್ಫ್ ಬೋರ್ಡ್‌ಗೆ ಸೇರಿಸಲಾಗಿದ್ದು ವಕ್ಫ್ ರಾದ್ಧಾಂತಕ್ಕೆ ರೈತರಷ್ಟೇ ಅಲ್ಲ, ಗ್ರಾಮಗಳ ನಿವಾಸಿಗಳು ಕಂಗಾಲಾಗಿದ್ದಾರೆ. 2013-14ರಿಂದ ಈಚೆಗೆ 26 ಎಕರೆ ಪ್ರದೇಶದ ಗ್ರಾಮದ ಪಹಣಿಯಲ್ಲಿ ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಹೆಸರು ಸೇರಿಸಲಾಗಿದ್ದು 200 ಕುಟುಂಬಗಳ 2000ಕ್ಕೂ ಅಧಿಕ ಜನರು ಬೀದಿಗೆ ಬಿದ್ದಿದ್ದಾರೆ.

ಜಮೀರ್ ಖಾನ್ ಈಗೀಗ ನಿಜಾಮನಾಗಿದ್ದು, ಸಿದ್ದರಾಮಯ್ಯ ಸೂಚನೆ ನೀಡಿದರೂ ಇನ್ನೂ ಪಹಣಿ ಬದಲಾವಣೆ ಮಾಡಿಲ್ಲ. ಯಾವುದೇ ಕಾರಣಕ್ಕೂ ಮನೆ ಖಾಲಿ ಮಾಡುವುದಿಲ್ಲ, ಮನೆಗಾಗಿ ಉಗ್ರ ಹೋರಾಟ ಮಾಡುತ್ತೇವೆ ಎಂದು ಗ್ರಾಮಸ್ಥರು ಸರ್ಕಾರಕ್ಕೆ ಎಚ್ಚರಿಕೆ ನೀಡಿದ್ದಾರೆ.

## ನಾಳೆ ಸಿದ್ದರಾಮಯ್ಯ ವಿಚಾರಣೆ

ಈಗಾಗಲೇ ಎ2 ಪಾರ್ವತಿ ಸಿದ್ದರಾಮಯ್ಯ, ಎ3 ಮಲ್ಲಿಕಾರ್ಜುನ ಹಾಗೂ ಎ4 ದೇವರಾಜು ಸೇರಿ ಹಲವರ ವಿಚಾರಣೆಯನ್ನು ಲೋಕಾಯುಕ್ತ ವಿಚಾರಣೆ ನಡೆಸಿದೆ. ಇನ್ನು ಮುಡಾದ ಸೈಟ್ ಬಗ್ಗೆಯೂ ಸಹ ಲೋಕಾಯುಕ್ತ ಮಹತ್ವದ ದಾಖಲೆಗಳನ್ನು ಕಲೆಹಾಕಿದೆ. ಅಲ್ಲದೇ ಸಿಎಂ ಕುಟುಂಬಕ್ಕೆ ಹಂಚಿಕೆಯಾಗಿದ್ದ ಸೈಟ್‌ಗಳಿಗೂ ಲೋಕಾಯುಕ್ತ ಅಧಿಕಾರಿಗಳು ಭೇಟಿ ನೀಡಿ ಪರಿಶೀಲಿಸಿದ್ದಾರೆ.

ಸಿದ್ದರಾಮಯ್ಯನವರನ್ನು ವಿಚಾರಣೆಗೊಳಪಡಿಸುತ್ತಿಲ್ಲ. ಹಾಗೇ ಅವರನ್ನು ಬಂಧಿಸಿ ವಿಚಾರಣೆ ನಡೆಸಬೇಕೆಂದು ದೂರುದಾರ ಸ್ನೇಹಮಣಿ ಕೃಷ್ಣ ಆಗ್ರಹಿಸುತ್ತಿದ್ದರು. ಅಲ್ಲದೇ ಲೋಕಾಯುಕ್ತ ಅಧಿಕಾರಿಗಳು ಸರಿಯಾಗಿ ತನಿಖೆ ಮಾಡುತ್ತಿಲ್ಲ ಎಂದು ಗಂಭೀರ ಆರೋಪ ಮಾಡಿದ್ದರು.

ಇದೀಗ ಕೊನೆಗೂ ಎ1 ಆರೋಪಿಯಾಗಿರುವ ಸಿದ್ದರಾಮಯ್ಯನವರ ವಿಚಾರಣೆಗೆ ಬರುವಂತೆ ನೋಟಿಸ್ ನೀಡಿದೆ. ಈ ಮೂಲಕ ಮುಡಾ ಹಗರಣ ಪ್ರಕರಣ ಕ್ಲೈಮ್ಯಾಕ್ಸ್ ಹಂತಕ್ಕೆ ಬಂದಿದೆ. ಮತ್ತೊಂದೆಡೆ ಇಡಿ ಅಧಿಕಾರಿಗಳು ಸಹ ಈ ಪ್ರಕರಣದಲ್ಲಿ ಪ್ರವೇಶ ಮಾಡಿದ್ದು, ಈಗಾಗಲೇ ಮುಡಾದ ಮಾಜಿ ಆಯುಕ್ತರ ನಿವಾಸಗಳ ಮೇಲೆ ದಾಳಿ ಮಾಡಿದ್ದಾರೆ ಅಲ್ಲದೇ ಸಿದ್ದರಾಮಯ್ಯನವರ ಆಪ್ತ ಪಾಪಣ್ಣ ನಿವಾಸದ ಮೇಲೂ ಸಹ ದಾಳಿ ಮಾಡಿ ಮಹತ್ವದ ದಾಖಲೆಗಳನ್ನು ವಶಕ್ಕೆ ಪಡೆದುಕೊಂಡಿದೆ.

## ಹೆಚ್‌ಡಿಕೆ ವಿರುದ್ಧ ಎಫ್‌ಐಆರ್!

**ಏನಿದು ಪ್ರಕರಣ:** ನಿಯಮ ಉಲ್ಲಂಘನೆ ಮಾಡಿ ಸಾಯಿ ಮಿನರಲ್ಸ್ ಕಂಪನಿಗೆ ಗಣಿ ಗುತ್ತಿಗೆ ಮಂಜೂರು ಮಾಡಿದ ಆರೋಪದ ಮೇಲೆ ಹೆಚ್ ಡಿ ಕುಮಾರಸ್ವಾಮಿ ಅವರ ವಿರುದ್ಧ ಪ್ರಾಸಿಕ್ಯೂಷನ್ ಗೆ ಅನುಮತಿ ಕೋರಿ ಲೋಕಾಯುಕ್ತ ಎಸ್ ಐಟಿ ಎಡಿಜಿಪಿ ಚಂದ್ರಶೇಖರ್ ಅವರು ರಾಜ್ಯಪಾಲರಿಗೆ ಪತ್ರ ಬರೆದಿದ್ದರು.

ಇದಕ್ಕೆ, ಕೇಂದ್ರ ಸಚಿವ ಹೆಚ್ ಡಿ ಕುಮಾರಸ್ವಾಮಿ ಪ್ರತಿಕ್ರಿಯಿಸಿ, ಹೇಗಾದರೂ ಮಾಡಿ ಒಮ್ಮೆಯಾದರೂ ನನ್ನನ್ನು ಜೈಲಿಗೆ ಕಳುಹಿಸಬೇಕು ಎಂದು ಸಂಚು ಹೂಡಿದ್ದಾರೆ. ಅಧಿಕಾರಿ ಯಾವ ಹಿನ್ನೆಲೆಯಿಂದ ಬಂದವರು ಅಕ್ರಮ ಹಣ ಸಂಪಾದನೆ ಮಾಡುವವರಿಗೆ ರಕ್ಷಣೆ ಕೊಡಿ ಎಂದು ನಿಮ್ಮನ್ನು ಐಪಿಎಸ್ ಆಫೀಸರ್ ಮಾಡಿದ್ದಾರಾ ನಾನು ಬೇಲ್ ತಗೊಂಡೆ, ತನಿಖೆಗೆ ಮಾಡಬೇಡಿ ಎಂದು ಹೇಳಿಲ್ಲ. ನೀವು ಏನ್ ಮಾಡಿದ್ದೀರಿ ನಿಮ್ಮ ವಿರುದ್ಧವೇ ಕೇಸ್ ಇದೆ, ಆರೋಪಿ ನಂಬರ್ 2. ಹೈಕೋರ್ಟ್ ನಲ್ಲಿ ಅಧಿಕಾರಿ ತಡೆಯಾಜ್ಞೆ ತೆಗೆದುಕೊಂಡಿದ್ದಾರೆ ಎಂದು ವಾಗ್ದಾಳಿ ಮಾಡಿದ್ದರು.

ಈ ಬಳಿಕ ಎಡಿಜಿಪಿ ಚಂದ್ರಶೇಖರ್ ತಮ್ಮ ಸಿಬ್ಬಂದಿಗೆ ಪತ್ರ ಬರೆದು, ಹೆಚ್ ಡಿ ಕುಮಾರಸ್ವಾಮಿ ಅವರು ನನ್ನ ಮೇಲೆ ಸಾಕಷ್ಟು ಸುಳ್ಳು ಆರೋಪ ಮಾಡಿದ್ದಾರೆ. ನಮ್ಮನ್ನು ಕುಗ್ಗಿಸುವ ಪ್ರಯತ್ನ ಮತ್ತು ಭಯ ಹುಟ್ಟಿಸುವ ಉದ್ದೇಶ ಹೊಂದಿದ್ದಾರೆ. ಅವರು ಎಷ್ಟೇ ಉನ್ನತ ಸ್ಥಾನದಲ್ಲಿದ್ದರೂ ಅವರೊಬ್ಬ ಆರೋಪಿ. ಇಂತಹ ಆರೋಪ ಮತ್ತು ಬೆದರಿಕೆಗಳಿಗೆ ನಾವು ನಿರಾಶೆಗೊಳ್ಳಬಾರದರು ಎಂದು ಪತ್ರದಲ್ಲಿ ಬರೆದಿದ್ದರು.

ಹಂದಿಗಳೊಂದಿಗೆ ಎಂದಿಗೂ ಜಗಳಕ್ಕೆ ಇಳಿಯಬೇಡಿ. ಹಂದಿಗಳ ಜೊತೆಗೆ ಜಗಳಕ್ಕೆ ಇಳಿದರೆ ನಾವು ಕೊಳಕಾಗುತ್ತೀವಿ. ಯಾಕೆಂದರೆ ಹಂದಿಗಳು ಕೊಳಕನ್ನೇ ಇಷ್ಟಪಡುತ್ತವೆ ಎಂದು ಪತ್ರದಲ್ಲಿ ಜಾರ್ಜ್ ಬರ್ನಾಡ್ ಶಾ ಅವರ ಹೇಳಿಕೆ ಉಲ್ಲೇಖಿಸಿದ್ದರು. ಈ ಬಳಿಕ ಎಡಿಜಿಪಿ ಚಂದ್ರಶೇಖರ್ ಅವರು ಸಂಜಯನಗರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದರು.

## ದೇವೇಗೌಡರ ಮತಬೇಟೆ

ದೇವೇಗೌಡರು ಇಂತಹ ಇಳಿವಯಸ್ಸಿನಲ್ಲೂ ಮೊಮ್ಮಗನ ಪರವಾಗಿ ನಿರಂತರವಾಗಿ ಪ್ರಚಾರ ನಡೆಸಲಿದ್ದಾರೆ. ಮತ್ತೊಂದು ಕಡೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಸಹ ಮೈತ್ರಿ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ಪರವಾಗಿ ಮತಭಿಕ್ಷೆ ಕೇಳಲಿದ್ದಾರೆ. ಚನ್ನಪಟ್ಟಣ ನಗರದಲ್ಲಿ ರೋಡ್ ಶೋ ಮಾಡಲಿದ್ದಾರೆ.

**ಪತ್ನಿ ರೇವತಿಯಿಂದ ಪತಿ ನಿಖಿಲ್ ಪರವಾಗಿ ಮತಬೇಟೆ!:** ಮೈತ್ರಿ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ಪರ ಪತ್ನಿ ರೇವತಿ ಅವರು ನಿನ್ನೆ ಪ್ರಚಾರ ನಡೆಸಿದರು. ಯುವಮತದಾರರನ್ನು ಸೆಳೆಯುವ ಪ್ಲಾನ್ ನಿಂದಾಗಿ, ಚನ್ನಪಟ್ಟಣದ ಮಹಿಳಾ ಕಾಲೇಜು ಮುಂಭಾಗ ರೇವತಿ ಮತಯಾಚನೆ ಮಾಡಿದರು. ಈ ವೇಳೆ ವಿದ್ಯಾರ್ಥಿಗಳಿಗೆ ಕರಪತ್ರ

### ಮೊದಲನೇ ಪುಟದಿಂದ...

ಹಂಚಿ ನಿಖಿಲ್ ಕುಮಾರಸ್ವಾಮಿಗೆ ಮತ ನೀಡುವಂತೆ ಪತ್ನಿ ರೇವತಿ ಮತ್ತು ಜೆಡಿಎಸ್ ಮಹಿಳಾ ಕಾರ್ಯಕರ್ತರು ಮನವಿ ಮಾಡಿದ್ದಾರೆ.

ಚನ್ನಪಟ್ಟಣದಲ್ಲಿ ಕಣ್ಣೀರಾಕುತ್ತಾ ನಿಖಿಲ್ ಪ್ರಚಾರ!

ಚನ್ನಪಟ್ಟಣ ಕನ್ನಮಂಗಲ ಗ್ರಾಮದಲ್ಲಿ ಪ್ರಚಾರದ ವೇಳೆ ನಿಖಿಲ್ ಕುಮಾರಸ್ವಾಮಿ ಕಣ್ಣೀರು ಹಾಕುತ್ತಾ ಮತಯಾಚಿಸಿದ್ದರು. ಎರಡು ಚುನಾವಣೆಯಲ್ಲಿ ಪೆಟ್ಟು ತಿಂದಿದ್ದೇನೆ. ರಾಜಕೀಯ ಷಡ್ಯಂತ್ರಕ್ಕೆ ಬಲಿ ಆಗಿರುವೆ ಅಂತೆಲ್ಲ ನೋವು ಹೇಳಿಕೊಂಡಿದ್ದರು. ನಿಖಿಲ್ ಕಣ್ಣೀರು ಅಸ್ತ್ರವನ್ನೇ ಬಳಸಿಕೊಂಡು ಯೋಗೇಶ್ವರ್ ಪ್ರಚಾರ ಮಾಡುತ್ತಿದ್ದಾರೆ.

ನಿಖಿಲ್ ಕುಮಾರಸ್ವಾಮಿ ಕಣ್ಣೀರಿಗೆ ಅವರಪ್ಪ-ಅಮ್ಮ ಕಾರಣ ಅಂದಿರುವ ಡಿಕೆ ಸುರೇಶ್, ಕುಮಾರಣ್ಣನ ನೋಟು, ಯೋಗೇಶಣ್ಣಂಗೆ ಓಟು ಅಂತ ಕರೆಕೊಟ್ಟಿದ್ದಾರೆ. ಇತ್ತ ನಿಖಿಲ್ ಕಣ್ಣೀರನ್ನ ಕಾಂಗ್ರೆಸ್ ಪಕ್ಷದ ಸಚಿವರು ಕೂಡ ಟೀಕಿಸುತ್ತಿದ್ದಾರೆ.

ಕಾಂಗ್ರೆಸ್ ನಾಯಕರ ಟೀಕೆಗಳಿಗೆ ನಯವಾಗಿಯೇ ಟಾಂಗ್ ನೀಡಿರುವ ಕೇಂದ್ರ ಸಚಿವ ಎಚ್.ಡಿ ಕುಮಾರಸ್ವಾಮಿ, ಕಟುಕರಿಗೆ ಕಣ್ಣೀರು ಬರಲ್ಲ, ನಾನು ಕೂಡ ಕಣ್ಣೀರು ಹಾಕಿದ್ದೇನೆ. ಜನರ ಕಷ್ಟಕ್ಕೆ ಕಣ್ಣೀರು ಹಾಕಿದ್ದೇನೆ. ಜನರ ಕಷ್ಟ ನೋಡಿ ಕಣ್ಣೀರು ಬರುತ್ತೆ, ಆದರೆ ಕೆಲ ಕಟುಕ ರಾಜಕಾರಣಿಗಳಿಗೆ ಕಣ್ಣೀರು ಬರಲ್ಲ. ಅವರಿಗೆ ಭಯ ಭಕ್ತಿ ಇಲ್ಲ ಎಂದು ಹೇಳಿದ್ದಾರೆ.

**ನಿಖಿಲ್ ಗೆಲುವಿನ ಭವಿಷ್ಯ ಹೇಳಿದ ಕೇರಳ ಜ್ಯೋತಿಷಿ:** ನಿಖಿಲ್ ಗೆಲುವಿನ ಬಗ್ಗೆ ಟೆನ್ಷನ್‌ನಲ್ಲಿರುವ ತಾತಾ ಹೆಚ್‌ಡಿಡಿ, ನಿಖಿಲ್ ರಾಜಕೀಯ ಜೀವನದ ಬಗ್ಗೆ ಎಚ್‌ಡಿಡಿ ಕೇರಳ ಮೂಲದ ಜ್ಯೋತಿಷಿಯೊಬ್ಬರ ಬಳಿ ಭವಿಷ್ಯ ಕೇಳಿದ್ದಾರಂತೆ. ನಿಖಿಲ್‌ಗೆ ರಾಜಯೋಗವಿದೆ, ಚನ್ನಪಟ್ಟಣ ಉಪಚುನಾವಣೆಯಲ್ಲಿ ನಿಖಿಲ್ ಗೆದ್ದೇ ಗೆಲ್ತಾರೆ ಅಂತ ಜ್ಯೋತಿಷಿ ಹೇಳಿದ್ದಾರಂತೆ.

ಅತ್ತ ಕಾಂಗ್ರೆಸ್ ಅಭ್ಯರ್ಥಿ ಯೋಗೇಶ್ವರ್ ಸಹ ವಿವಿಧ ಗ್ರಾಮಗಳಲ್ಲಿ ಪ್ರಚಾರ ಮಾಡಲಿದ್ದಾರೆ. ಸಿಪಿವೈ ಪರವಾಗಿ ಡಿಕೆ ಬ್ರದರ್ಸ್ ಅಖಾಡದಲ್ಲಿದ್ದಾರೆ. ಇತ್ತ ಎನ್‌ಡಿಎ ಅಭ್ಯರ್ಥಿ ಪರವಾಗಿ ಇಡೀ ಕುಟುಂಬವೇ ಪ್ರಚಾರಕ್ಕೆ ಇಳಿದಿದೆ. ಮೊದಮೊದಲು ಸಿಪಿ ಯೋಗೇಶ್ವರ್‌ಗೆ ಟಕ್ಕರ್ ಕೊಡಲು ನಿಖಿಲ್‌ಗೆ ಸಾಧ್ಯಾನಾ ಎನ್ನುವ ಪರಿಸ್ಥಿತಿ ಎದುರಾಗಿತ್ತು. ಆದರೆ ಚನ್ನಪಟ್ಟಣದ ಚಿತ್ರಣ ಕ್ಷಣಕ್ಷಣಕ್ಕೂ ಬದಲಾಗುತ್ತಿದೆ. ಗೆಲುವಿನ ಮಾಲೆ ಯಾರಿಗೆ ಎನ್ನುವುದೇ ಇದೀಗ ಯಕ್ಷ ಪ್ರಶ್ನೆಯಾಗಿದೆ.

## ಹದ್ದುಗಳು ವಿಲವಿಲ..!

ಬೆಂಗಳೂರಿನಲ್ಲಿ 250 ಕ್ಕೂ ಹೆಚ್ಚು ಅವಘಡಗಳು ಜರುಗಿದೆ. ಮಿಂಟೋ ಆಸ್ಪತ್ರೆ ಸೇರಿ ನಾರಾಯಣ ನೇತ್ರಾಲಯ, ಕಿಮ್ಸ್, ಮೋದಿ ಕಣ್ಣಿನ ಆಸ್ಪತ್ರೆ, ಶಂಕರ್ ಐ ಹಾಸ್ಪಿಟಲ್ ನಲ್ಲಿ ಪ್ರಕರಣಗಳು ದಾಖಲಾಗಿದ್ದು, ಮಕ್ಕಳೇ ಹೆಚ್ಚು ಪಟಾಕಿ ಅವಘಡಕ್ಕೆ ಸಾಕ್ಷಿಯಾಗಿದ್ದಾರೆ.

ಈ ವರ್ಷ ಪಟಾಕಿ ನಿಯಂತ್ರಣಕ್ಕೆ ಸರ್ಕಾರ ಸಾಕಷ್ಟು ಸರ್ಕಸ್ ಮಾಡಿತ್ತು. ಪ್ರತ್ಯೇಕ ಗೈಡ್ ಲೈನ್ಸ್ ಬಿಡುಗಡೆ ಮಾಡಿತ್ತು. ರಾತ್ರಿ 10 ಗಂಟೆ ನಂತರ ಪಟಾಕಿ ಹೊಡೆದರೆ ಕೇಸ್ ಎಂದು ಪೊಲೀಸ್ ಇಲಾಖೆ ವಾರ್ನ್ ಮಾಡಿತ್ತು. ಆದ್ರೆ ಅದ್ಯಾವುದು ವರ್ಕ್ ಔಟ್ ಆಗಿಲ್ಲ.

## ಗೋಡೆಯಲ್ಲಾ ಛಿದ್ರ, ಛಿದ್ರ!

ಕೊಠಡಿಯಲ್ಲಿ ಪಾರ್ಟಿ ಮಾಡುತ್ತಿದ್ದವರು ಹೊರಗೆ ಓಡಿ ಬಂದು ಪ್ರಾಣ ಉಳಿಸಿಕೊಂಡಿದ್ದಾರೆ. ಈ ಸ್ಫೋಟ ಸಂಭವಿಸುವ ವೇಳೆ ಮನೆಯಲ್ಲಿ ಮಕ್ಕಳ ಸಹಿತ 8 ಮಂದಿ ಮನೆಯಲ್ಲಿದ್ದರು ಎಂದು ತಿಳಿದು ಬಂದಿದೆ.

ಸಿಲಿಂಡರ್ ಸ್ಫೋಟದ ಬಳಿಕ ತಕ್ಷಣವೇ ಅಗ್ನಿ ಶಾಮಕ ಇಲಾಖೆಗೆ ಮಾಹಿತಿ ನೀಡಿದ್ದಾರೆ. ಆಗ ಸ್ಥಳಕ್ಕೆ ಬಂದ ಅಗ್ನಿಶಾಮಕ ಇಲಾಖೆಯ ಸಿಬ್ಬಂದಿ ಕಾರ್ಯಾಚರಣೆ ನಡೆಸಿದ್ದಾರೆ. ಅಷ್ಟೇ ಅಲ್ಲದೇ ಸಂಭವನೀಯ ಅನಾಹುತವೊಂದನ್ನು ತಪ್ಪಿಸಿದ್ದಾರೆ ಎಂದು ತಿಳಿಸಿದ್ದಾರೆ.

## ಮೋದಿ ಖಂಡನೆ

ಇಂತಹ ಹಿಂಸಾಚಾರದಲ್ಲಿ ತೊಡಗಿರುವವರ ವಿರುದ್ಧ ಕಾನೂನು ಕ್ರಮ ಜರುಗಿಸುವುದನ್ನು ನಾವು ನಿರೀಕ್ಷಿಸುತ್ತೇವೆ ಎಂದು ವಕ್ತಾರ ರಣಧೀರ್ ಜೈಸ್ವಾಲ್ ಹೇಳಿದ್ದಾರೆ. ಕೆನಡಾದಲ್ಲಿರುವ ತನ್ನ ನಾಗರಿಕರ ಮತ್ತು ಭದ್ರತೆಯ ಬಗ್ಗೆ ಭಾರತ ಸರ್ಕಾರವು ಆಳವಾದ ಕಾಳಜಿ ಹೊಂದಿದೆ ಎಂದು ಜೈಸ್ವಾಲ್ ತಿಳಿಸಿದ್ದಾರೆ.

## ಲ್ಯಾಬ್ ಅಟೆಂಡೆಂಟ್

ಕೈ ಹಾಕಬೇಡಿ ಎಂದು ಹೇಳಿದರೂ ಅವರ ಮಾತನ್ನು ಕೇಳದೆ ಅಟೆಂಡರ್ ಯುಟ್ಯೂಬ್ ನೋಡಿ ಎಲೆಕ್ಟ್ರೋಕಾರ್ಡಿಯೋಗ್ರಾಮ್ (ಇಸಿಜಿ) ಪರೀಕ್ಷೆಯನ್ನು ಮಾಡಿದ್ದಾನೆ.

ಭವಾನಿ ಸಿಂಗ್ ಎಂಬವರು ಈ ವಿಡಿಯೋವನ್ನು ತಮ್ಮ ಎಕ್ಸ್ ಖಾತೆಯಲ್ಲಿ ಹಂಚಿಕೊಂಡಿದ್ದಾರೆ. ವೈರಲ್ ವಿಡಿಯೋದಲ್ಲಿ ಯುಟ್ಯೂಬ್‌ನಲ್ಲಿ ಇಸಿಜಿ ಹೇಗೆ ಮಾಡುವುದು ಎಂಬುದನ್ನು ನೋಡಿ ಆಸ್ಪತ್ರೆ ಸಹಾಯಕ ರೋಗಿಯೊಬ್ಬರಿಗೆ ಇಸಿಜಿ ಪರೀಕ್ಷೆ ಮಾಡಲು ಮುಂದಾಗುತ್ತಿರುವ ದೃಶ್ಯವನ್ನು ಕಾಣಬಹುದು. ರೋಗಿಯ ಕುಟುಂಬಸ್ಥರು ಇದರ ಬಗ್ಗೆ ಸರಿಯಾದ ಜ್ಞಾನವಿಲ್ಲದೆ ನೀವು ಸ್ಕ್ಯಾನ್ ಮಾಡಿದರೆ ಅವನ ಪ್ರಾಣಕ್ಕೆ ಕಂಟಕವಾಗಬಹುದು ಎಂದು ಹೇಳಿದರೂ ಲ್ಯಾಬ್ ಟೆಕ್ನಿಷಿಯನ್ ದೀಪಾವಳಿ ರಜೆಯ ನಿಮಿತ್ತ ಮನೆಗೆ ಹೋಗಿದ್ದಾರೆ, ಇಸಿಜಿಗೆ ಬೇಕಾದ ಯಂತ್ರಗಳನ್ನು ಸರಿಯಾಗಿ ಅಳವಡಿಸಲಾಗಿದೆ, ಇದರಿಂದ ಯಾವುದೇ ತೊಂದರೆಯಾಗುವುದಿಲ್ಲ ಎಂದು ಹೇಳಿ ಅಟೆಂಡರ್ ರೋಗಿಗೆ ಯುಟ್ಯೂಬ್ ನೋಡಿ ಇಸಿಜಿ ಮಾಡಿದ್ದಾನೆ. ಈ ವಿಡಿಯೋ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆದ ನಂತರ ಜೋಧ್‌ಪುರ ವೈದ್ಯಕೀಯ ಕಾಲೇಜಿನ ಮುಖ್ಯಸ್ಥ ಬಿಎಸ್ ಜೋಧಾ ಅವರು ಈ ಬಗ್ಗೆ ತನಿಖೆಯನ್ನು ಮಾಡಲಾಗುವುದು ಮತ್ತು ಆತನ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ. ಹಾಗೂ ಇಸಿಜಿ ಪರೀಕ್ಷೆಯು ಜೀವಕ್ಕೆ ಯಾವುದೇ ಅಪಾಯವನ್ನು ಉಂಟು ಮಾಡುವುದಿಲ್ಲ. ತಪ್ಪಾದ ಇಸಿಜಿ ಪಾಯಿಂಟ್ ಪ್ಲೇಸ್‌ಮೆಂಟ್ ರೋಗಿಗೆ ಯಾವುದೇ ಅಪಾಯವನ್ನು ಉಂಟು ಮಾಡುವುದಿಲ್ಲ ಆದ್ರೆ ಇದು ತಪ್ಪು ರಿಸಲ್ಟ್ ಅನ್ನು ನೀಡುತ್ತದೆ ಎಂಬ ಮಾಹಿತಿಯನ್ನು ಕೂಡಾ ನೀಡಿದ್ದಾರೆ.

## 32 ಅಂಗಡಿಗಳಿಗೆ ಬೀಗ

ಒಂದೂವರೆ ಕೋಟಿ ರೂಪಾಯಿ ಬಾಕಿ ಇದ್ದರೂ ತೆರಿಗೆ ಪಾವತಿಸಿರಲಿಲ್ಲ, ಹೀಗಾಗಿ ಸೆಂಟ್ರಲ್ ಮುಸ್ಲಿಂ ಅಸೋಸಿಯೇಷನ್ ಗೆ ಸೇರಿದ 32 ಅಂಗಡಿಗಳಿಗೆ ಸೀಲ್ ಹಾಕಲಾಗಿದೆ. ಇನ್ನುಳಿದ ಅಂಗಡಿಗಳು ಖಾಸಗಿ ಒಡೆತನದ್ದಾಗಿರುವುದರಿಂದ ತೆರಿಗೆ ಪಾವತಿ ಮಾಡಿಸಿಕೊಳ್ಳಲಾಗಿದ್ದು, ಆ ಅಂಗಡಿಗಳಿಗೆ ಸೀಲ್ ಹಾಕಿಲ್ಲ.

ಆದರೆ ಎಸ್‌ಎಂಎಗೆ ಸೇರಿದ ಅಂಗಡಿಗಳ ಮಾಲೀಕರು ಈ ನವೆಂಬರ್ ತಿಂಗಳೊಳಗಾಗಿ ತೆರಿಗೆ ಪಾವತಿಸದಿದ್ದರೆ ಮೂರು ಪಟ್ಟು ಹಣ ಕಟ್ಟಬೇಕಾಗುತ್ತದೆ ಎಂಬುದಾಗಿ ಎಚ್ಚರಿಕೆ ನೀಡಲಾಗಿದೆ ಎಂದು ಬಿಬಿಎಂಪಿ ಪಶ್ಚಿಮ ವಲಯ ಆಯುಕ್ತೆ ಅರ್ಚನಾ ತಿಳಿಸಿದ್ದಾರೆ.

ಸೆಂಟ್ರಲ್ ಮುಸ್ಲಿಂ ಅಸೋಸಿಯೇಷನ್‌ಗೆ ಸೇರಿದ ಅಂಗಡಿಯ ಬಾಡಿಗೆದಾರರು ತಿಂಗಳು, ತಿಂಗಳು ಬಾಡಿಗೆ ಕಟ್ಟಿಕೊಂಡು ಹೋಗುತ್ತಿದ್ದಾರಂತೆ. ಆದರು ಕೂಡ ಎಸ್‌ಎಂಎ ಟ್ಯಾಕ್ಸ್ ಕಟ್ಟದೇ ನಿರ್ಲಕ್ಷ್ಯ ವಹಿಸಿರುವುದರಿಂದ 32 ಕುಟುಂಬಗಳು ಬೀದಿಗೆ ಬಿದ್ದಿವೆ.

ತೆರಿಗೆ ಕಟ್ಟದೇ ಇರುವ ಅಂಗಡಿಗಳಿಗೆ ಬೀಗ ಹಾಕುವ ಕೆಲಸವನ್ನು ಬಿಬಿಎಂಪಿ ಮಾಡುತ್ತಾ ಇದ್ದು ತೆರಿಗೆ ಪಾವತಿಸಿದ ಬಳಿಕ ಸೀಲ್ ಓಪನ್ ಮಾಡಲಿದೆ. ಪಶ್ಚಿಮ ವಲಯದಲ್ಲಿ ಸಾಕಷ್ಟು ಅಂಗಡಿಗಳಿಗೆ ಬೀಗ ಹಾಕಿ ಬಿಸಿ ಮುಟ್ಟಿಸಲು ಮುಂದಾಗಿದೆ.

## ಚ.ಪಟ್ಟಣ ನಂ.1

ಚನ್ನರಾಯಪಟ್ಟಣದಲ್ಲಿ ಸೋಮವಾರ ಬೆಳಗ್ಗೆ 8 ಗಂಟೆಗೆ ವಾಯು ಗುಣಮಟ್ಟ ಸೂಚ್ಯಂಕ 8 ಇತ್ತು. ಮತ್ತೊಂದು ಸಂತಸದ ವಿಷಯ ಎಂದರೆ ಕರ್ನಾಟಕದ ಶಿಲ್ಪಕಲೆಯ ತವರೂರು ಬೇಲೂರು ಪಟ್ಟಣ 3 ಸ್ಥಾನದಲ್ಲಿದೆ. ಹಾಸನ ನಗರ ಮತ್ತು ಮಣಿಪುರದ ರಾಜಧಾನಿ ಇಂಫಾಲ್ ಕೂಡ ದೇಶದ ಶುದ್ಧ ಗಾಳಿ ಹೊಂದಿರುವ ನಗರಗಳಲ್ಲಿ ಟಾಪ್ 10 ಪಟ್ಟಿಯಲ್ಲಿವೆ. ನೆರೆಯ ಆಂಧ್ರಪ್ರದೇಶದ ಮದನಪಲ್ಲಿ ಸ್ವಚ್ಛಗಾಳಿ ಹೊಂದಿರುವ ಟಾಪ್ 10 ನಗರಗಳಲ್ಲಿ 10 ನೇ ಸ್ಥಾನದಲ್ಲಿದೆ.

## ಕೊಲೆ

ಸುತ್ತಮುತ್ತ ಎಷ್ಟೇ ಹುಡುಕಾಡಿದರು ಮಗು ಪತ್ತೆಯಾಗಿರಲಿಲ್ಲ. ಈ ಬಗ್ಗೆ ಸೂರ್ಯನಗರ ಪೊಲೀಸರಿಗೆ ದೂರು ನೀಡಲಾಗಿತ್ತು. ಪೊಲೀಸರ ಪರಿಶೀಲನೆ ವೇಳೆ ಮನೆಯ ಸಿಂಟೆಕ್ಸ್ ನೀರಿನ ಟ್ಯಾಂಕ್‌ನಲ್ಲಿ ಮಗುವಿನ ಶವ ಪತ್ತೆಯಾಗಿದೆ. ಮಗುವಿನ ಪೋಷಕರು ಅಂತರ್ಜಾತಿ ವಿವಾಹವಾಗಿದ್ದರು. ಅಂತರ್ಜಾತಿ ವಿವಾಹದ ವೈಷಮ್ಯಕ್ಕೆ ಮಗುವನ್ನು ಕೊಂದಿರುವ ಆರೋಪ ಮಾಡಲಾಗಿದೆ. ಈ ಬಗ್ಗೆ ಸೂರ್ಯನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ನಿಖಿಲ್ ವಿರುದ್ಧ ಕಾಂಗ್ರೆಸ್ ನಾಯಕರು ಮೌನವಾಗಿದ್ದರ ಹಿಂದಿದೆ ಹೀಗೊಂದು ತಂತ್ರ!

**ರಾಮನಗರ:** ಚನ್ನಪಟ್ಟಣ ಉಪಚುನಾವಣೆಯಲ್ಲಿ ಹೇಗಾದರೂ ಗೆಲುವು ಸಾಧಿಸಬೇಕೆಂದು ಒಂದೆಡೆ ಕಾಂಗ್ರೆಸ್ ನಾಯಕರು ಪಣತೊಟ್ಟಿದ್ದರೆ, ಮೈತ್ರಿ ನಾಯಕರೂ ಸಹ ನಿಖಿಲ್? ಕುಮಾರಸ್ವಾಮಿಯನ್ನು ಈ ಬಾರಿ ಗೆಲ್ಲಿಸಬೇಕೆಂದು ಓಡಾಡುತ್ತಿದ್ದಾರೆ. ಆದರೆ, ಚುನಾವಣಾ ಪ್ರಚಾರದ ಕಣದಲ್ಲಿ ಎಲ್ಲೂ ಯೋಗೇಶ್ವರ್ ವಿರುದ್ಧ ನಿಖಿಲ್ ಆಗಲೀ, ನಿಖಿಲ್ ವಿರುದ್ಧ ಕಾಂಗ್ರೆಸ್ ನಾಯಕರಾಗಲೀ ವೈಯಕ್ತಿಕ ವಾಗ್ದಾಳಿ ನಡೆಸಿಲ್ಲ! ಕಾಂಗ್ರೆಸ್ ನಾಯಕರಂತೂ ನಿಖಿಲ್ ವಿಚಾರದಲ್ಲಿ ಮಾತನಾಡಲು ಬಹಳ ಎಚ್ಚರಿಕೆ ವಹಿಸುತ್ತಿದ್ದಾರೆ. ಇದಕ್ಕೆ ಬಲವಾದ ಕಾರಣ ಇದೆಯಂತೆ.



ರಾಜಕೀಯ ತಂತ್ರಗಾರಿಕೆಯ ಭಾಗವಾಗಿಯೇ ನಿಖಿಲ್ ಕುಮಾರಸ್ವಾಮಿ ವಿರುದ್ಧ ಯಾವುದೇ ಟೀಕೆ ಮಾಡದಿರಲು, ಮಾತನಾಡದಿರಲು ಕಾಂಗ್ರೆಸ್ ನಾಯಕರು ನಿರ್ಧರಿಸಿದ್ದಾರೆ ಎನ್ನಲಾಗಿದೆ. ನಿಖಿಲ್ ಎರಡು ಬಾರಿ ಈಗಾಗಲೇ ಸೋತಿದ್ದಾರೆ. ರಾಮನಗರ ಹಾಗೂ ಮಂಡ್ಯದಲ್ಲಿ ಸೋಲನುಭವಿಸಿದ್ದಾರೆ. ಒಂದು ವೇಳೆ ನಿಖಿಲ್ ಕುಮಾರಸ್ವಾಮಿ ವಿರುದ್ಧ ಮಾತನಾಡಿದರೆ ಅವರ ಬಗ್ಗೆ ಜನರಲ್ಲಿ ಅನುಕಂಪ ಹೆಚ್ಚಾಗುವ ಸಾಧ್ಯತೆ ಇದೆ ಎಂಬುದು ಕಾಂಗ್ರೆಸ್ ಲೆಕ್ಕಾಚಾರ.

**ನಿಖಿಲ್ ತಂತ್ರಕ್ಕೆ ಕಾಂಗ್ರೆಸ್ ಪ್ರತಿ ತಂತ್ರ:** ಮತ್ತೊಂದೆಡೆ, ಪ್ರಚಾರದ ವೇಳೆ ರಾಜಕೀಯವಾಗಿ ನಿಖಿಲ್ ಈವರೆಗೆ ಯಾರನ್ನೂ ಗುರಿಯಾಗಿಸಿಲ್ಲ. ರಾಜಕಾರಣಕ್ಕೆ ಬಂದಾಗಿನಿಂದಲೂ ಹಿರಿಯ ನಾಯಕರ ಬಗ್ಗೆ ಗೌರವ ಇಟ್ಟುಕೊಂಡೇ ಮಾತನಾಡುತ್ತಿದ್ದಾರೆ. ವಿರೋಧ ಪಕ್ಷದ ನಾಯಕರಿಗೆ ಗೌರವಯುತವಾಗಿ ಸಂಬೋಧಿಸುತ್ತಾರೆ. ಯಾವುದೇ ಟೀಕೆ ಟಿಪ್ಪಣಿಗಳಿದ್ದರೂ ವಿರೋಧ ಪಕ್ಷದ ಯೋಜನೆ, ಕಾರ್ಯಗಳಿಗೆ ಮಾತ್ರ ಸೀಮಿತವಾಗಿರಿಸಿ ಮಾತನಾಡುತ್ತಾರೆ. ವೈಯಕ್ತಿಗವಾಗಿ ನಿಖಿಲ್ ಕುಮಾರಸ್ವಾಮಿ ವಯಕ್ತಿವಾಗಿ ಯಾರನ್ನೂ ಟೀಕಿಸಿಲ್ಲ.

ಚನ್ನಪಟ್ಟಣ ಉಪಚುನಾವಣೆ ಪ್ರಚಾರದ ಮೊದಲ ದಿನದಿಂದಲೂ ನಿಖಿಲ್ ಬಹಳ ಪರಿಪಕ್ವವಾಗಿ ಮಾತನಾಡುತ್ತಿದ್ದಾರೆ. ಹೀಗಾಗಿಯೇ ನಿಖಿಲ್ ಕುಮಾರಸ್ವಾಮಿ ವಿರುದ್ಧ ಕಾಂಗ್ರೆಸ್ ಪಾಳಯ ಮೌನವಾಗಿದೆ. ಜನರ ಅನುಕಂಪ ಯಾವುದೇ ಕಾರಣಕ್ಕೂ ನಿಖಿಲ್ ಪರವಾಗದಂತೆ ಕಾಂಗ್ರೆಸ್ ತಂತ್ರ ರೂಪಿಸುತ್ತಿದೆ ಎಂದು ವಿಶ್ಲೇಷಿಸಲಾಗುತ್ತಿದೆ.

# ಉಡುಪಿಯಲ್ಲಿ ಸುಲ್ತಾನಪುರ ಎಂದು ಒಂದು ಹಳ್ಳಿಯನ್ನೇ ನಿರ್ಮಾಣ ಮಾಡಿದ್ದಾರೆ

**ವಿಜಯಪುರ:** ಉಡುಪಿಯಲ್ಲಿ ಸುಲ್ತಾನಪುರ ಎಂದು ಒಂದು ಹಳ್ಳಿಯನ್ನೆ ನಿರ್ಮಾಣ ಮಾಡಿದ್ದಾರೆ. ಇದು ಖಂಡನೀಯ ಎಂದು ಸಂಸದೆ ಶೋಭಾ ಕರಂದ್ಲಾಜೆ ವಾಗ್ದಾಳಿ ನಡೆಸಿದ್ದಾರೆ. ಜಿಲ್ಲೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದಿಶಾಂಕ ಆಪ್‌ನಲ್ಲಿ ಹಿಂದೂ ಹಳ್ಳಿ ಸುಲ್ತಾನಪುರ ಎಂದು ಕಾಣಿಸುತ್ತಿದೆ. ಸಿದ್ದರಾಮಯ್ಯ ಸರ್ಕಾರ ಏನು ಮಾಡುವುದಕ್ಕೆ ಹೊರಟಿದೆಯೋ ಗೊತ್ತಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

1974ರ ವಕ್ಫ್ ನೋಟಿಫಿಕೇಶನ್ ರದ್ದಾಗಬೇಕು. ಇದಕ್ಕಾಗಿ ಬಿಜೆಪಿ ಸುಮ್ಮನಿರಲ್ಲ, ಹೋರಾಟ ಮಾಡುತ್ತೇವೆ. ರಾಜ್ಯದಲ್ಲಿ ಎಲ್ಲಿ ನೋಡಿದರೂ ವಕ್ಫ್ ಆಸ್ತಿ ಎಂದೇ ಆಗಿ ಬಿಟ್ಟಿದೆ. ವಕ್ಫ್ ಆಸ್ತಿ ವಿವಾದ ಇದು ಕಾಂಗ್ರೆಸ್ ನಡೆಸುತ್ತಿರುವ ಲ್ಯಾಂಡ್ ಟೆರರಿಸಂ, ವಕ್ಫ್ ಬೋರ್ಡ್ ಲ್ಯಾಂಡ್ ಜಿಹಾದ್ ಮಾಡುತ್ತಿದೆ ಎಂದು ಕಿಡಿಕಾರಿದ್ದಾರೆ.

ಹಿಂದೂ ದೇವಾಲಯಗಳು, ಮಠಗಳು, ರೈತ ಜಮೀನು ಒಂದು ಉಳಿದಿಲ್ಲ. ಇದರ ವಿರುದ್ಧ ವಿಜಯಪುರದಿಂದಲೇ ನಾನು ವಕ್ಫ್ ಹೋರಾಟ ಪ್ರಾರಂಭಿಸುತ್ತಿದ್ದೇನೆ. ಇಂದು ರೈತರೊಂದಿಗೆ ಹೋರಾಟದಲ್ಲಿ ಭಾಗಿಯಾಗುತ್ತೇನೆ. ಶಾಸಕ ಬಸನಗೌಡ ಪಾಟೀಲ ಯತ್ನಾಳ್ ನೇತೃತ್ವದಲ್ಲಿ ನಡೆಯುತ್ತಿರುವ ಅನಿರ್ದಿಷ್ಟ ಅವಧಿಯ ಅಹೋರಾತ್ರಿ ಧರಣಿಯಲ್ಲಿ ಭಾಗಿಯಾಗುತ್ತೇನೆ ಎಂದು ತಿಳಿಸಿದರು.

# ಅಪಘಾತದ ಸ್ಥಳದಿಂದ 2 ದಿನ ಕದಲದೆ ಅಚ್ಚರಿ ಮೂಡಿಸಿದ ಹರಕೆ ಕೋಳಿ

**ಮಂಗಳೂರು:** ದಕ್ಷಿಣ ಕನ್ನಡ ಜಿಲ್ಲೆಯ ಕಡಬ (ಏಚಿಜಚಿಛ) ತಾಲೂಕಿನ ಪುಳಿಕುಕ್ಕು ಎಂಬಲ್ಲಿ ಭಾನುವಾರ (ನ.03) ಚಲಿಸುತ್ತಿದ್ದ ಸ್ಕೂಟಿಯ ಮೇಲೆ ಮರ ಬಿದಿತ್ತು. ಪರಿಣಾಮ, ಸ್ಕೂಟಿಯಲ್ಲಿದ್ದ ಎಡಮಂಗಲ ಗ್ರಾಮದ ದೇವಸ್ಯ ನಿವಾಸಿ ಸೀತಾರಾಮ ಗೌಡ ಎಂಬುವರು ಸ್ಥಳದಲ್ಲೇ ಮೃತಪಟ್ಟಿದ್ದರು. ಸೀತಾರಾಮ ಅವರು ತಮ್ಮ ಮನೆಯಲ್ಲಿ ನಡೆಯಲಿದ್ದ ದೈವದ ಹರಕೆಗಾಗಿ ಕೋಳಿ ತೆಗೆದುಕೊಂಡು ಹೋಗುತ್ತಿದ್ದಾಗ ಅವಘಡ ಸಂಭವಿಸಿತ್ತು.

ಘಟನೆಯ ವೇಳೆ ಕೋಳಿಗೆ ಹಗ್ಗದಿಂದ ಕಾಲುಗಳನ್ನು ಕಟ್ಟಿದ್ದರಿಂದ ಮೃತದೇಹದ ಬಳಿಯೇ ಬಿದ್ದಿತ್ತು. ಬಳಿಕ ಸ್ಥಳದಲ್ಲಿದ್ದವರು ಕೋಳಿಯ ಕಾಲಿಗೆ ಕಟ್ಟಲಾಗಿದ್ದ ಹಗ್ಗವನ್ನು ಬಿಚ್ಚಿದ್ದರು. ಆಗ ಹತ್ತಿರದ ಕಾಡಿನೊಳಗೆ ಹೋಗಿದ್ದ ಕೋಳಿ, ಘಟನಾ ಸ್ಥಳದಲ್ಲಿ ಜಮಾಯಿಸಿದ್ದ ಜನರು ಚದುರಿದ ಬಳಿಕ ಮತ್ತೆ ಬಂದಿದೆ. ಮರಬಿದ್ದು ನಜ್ಜುಗುಜ್ಜಾಗಿದ್ದ ಸೀತಾರಾಮ ಅವರ ಸ್ಕೂಟಿಯ ಮೇಲೆ ಬಂದು ಕುಳಿತಿದೆ. ಜನರು ಹತ್ತಿರ ಬಂದಾಗ ಪಕ್ಕದ ಮರದ ರೆಂಬೆಯ ಮೇಲೆ ಆಶ್ರಯ ಪಡೆಯುತ್ತಿದೆ.



ಕೋಳಿ ಎರಡು ದಿನ ಕಳೆದರೂ ಘಟನಾ ಸ್ಥಳ ಬಿಟ್ಟು ಕದಲದೆ ಜನರ ಸೋಜಿಗಕ್ಕೆ ಕಾರಣವಾಗಿದೆ. ದೈವದ ಹರಕೆಗೆಂದು ತೆಗೆದುಕೊಂಡು ಹೋಗುತ್ತಿದ್ದ ಕೋಳಿಯಾದ ಕಾರಣದಿಂದ ಅಚ್ಚರಿ ಮೂಡಿದೆ.

# ತಲಾದಾಯದಿಂದ ದೇಶದ ಅಭಿವೃದ್ಧಿ



**ಹುಳಿಯಾರು:** ದೇಶದ ತಲಾದಾಯದ ಮೂಲಕ ದೇಶದ ಅಭಿವೃದ್ಧಿಯನ್ನು ನಿರ್ಧರಿಸಬಹುದು ಹಾಗೂ ವಿಶ್ವದ ನಿರುದ್ಯೋಗ, ಬಡತನ ಮುಂತಾದ ಸಮಸ್ಯೆಗಳಿಗೆ ಅರ್ಥಶಾಸ್ತ್ರದ ಮೂಲಕ ಪರಿಹಾರ ಕಂಡುಕೊಳ್ಳಬಹುದು ಎಂದು ಬುಕ್ಕಾಪಟ್ಟಣ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾಂಶುಪಾಲರಾದ ಎಸ್.ಆರ್. ಹನುಮಂತರಾಯ ತಿಳಿಸಿದರು.

ಹುಳಿಯಾರಿನ ಬಿಎಂಎಸ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜ್‌ನ ಅರ್ಥಶಾಸ್ತ್ರ ವಿಭಾಗದ ಸಮೃದ್ಧಿ ವೇದಿಕೆ ಉದ್ಘಾಟಿಸಿ ಅವರು ಮಾತನಾಡಿ ಇಂದು ಅರ್ಥಶಾಸ್ತ್ರಕ್ಕೆ ಹೆಚ್ಚು ಆದ್ಯತೆ ನೀಡಲಾಗುತ್ತಿದೆ. ಐಎಎಸ್ ರೀತಿ ಐಇಎಸ್ ಕೂಡ ಇರುವುದು ನಿದರ್ಶನವಾಗಿದೆ ಎಂದರು.

ಉಪನ್ಯಾಸಕರಾದ ಡಾ.ಬಿ.ಕೆ.ಸರಸ್ವತಿ ಮಾತನಾಡಿ ಅರ್ಥಶಾಸ್ತ್ರ ವಿಭಾಗದಲ್ಲಿ ಸಮೃದ್ಧಿ ವೇದಿಕೆ ಸ್ಥಾಪಿಸಿರುವುದರಿಂದ ಹೊಸಹೊಸ ಅನ್ವೇಷಣೆಗಳೇನು, ಯಾರು ನೊಬೈಲ್ ಪಡೆದರು ಎಂಬುದನ್ನು ತಿಳಿಯಲು, ಚರ್ಚಿಸಲು ಸಹಕಾರಿಯಾಗಿದೆ ಎಂದರಲ್ಲದೆ ವಿದ್ಯಾರ್ಥಿಗಳು ವಿಭಾಗದಿಂದ ನಡೆಯುವ ಚರ್ಚೆಗೆ ಪೂರ್ವ ಸಿದ್ಧತೆ ಮಾಡಿಕೊಂಡು ಬಂದರೆ ಹೆಚ್ಚೆಚ್ಚು ವಿಷಯಗಳನ್ನು ಸಂಗ್ರಹಿಸಲು ಸಾಧ್ಯ ಎಂದರು.

ಈ ಕಾರ್ಯಕ್ರಮದಲ್ಲಿ ಉನ್ನತ ವಿದ್ಯಾಭ್ಯಾಸಕ್ಕೆ ಅವಕಾಶ ಪಡೆದ ಪ್ರತಿಭಾವಂತ ವಿದ್ಯಾರ್ಥಿಗಳಾದ ರಂಜಿತಾ. ಆರ್, ಯಶಸ್ವಿನಿ. ಎಸ್. ಸಿ, ರಚನಶ್ರೀ, ಚಂದನ. ಡಿ. ಆರ್ ಅವರುಗಳನ್ನು ಪುರಸ್ಕರಿಸಲಾಯಿತು.

ಪ್ರಾಚಾರ್ಯ ವೀರಣ್ಣ ಎಸ್. ಸಿ. ಅಧ್ಯಕ್ಷತೆ ವಹಿಸಿದ್ದರು. ಪ್ರೊ.ಮಂಜುನಾಥ್ ಕೆ.ಎಸ್. ಪ್ರೊ.ಮಲ್ಲಿಕಾರ್ಜುನ್, ಪ್ರೊ. ಜಗದೀಶ್, ಉಪನ್ಯಾಸಕರುಗಳಾದ ಜಯಪ್ರಕಾಶ್ ಕೆ, ಶಂಕರ್ ಕೆ.ಎಂ, ತಿಪ್ಪೇಸ್ವಾಮಿ, ಕುಮಾರಸ್ವಾಮಿ, ಕುಮಾರಸ್ವಾಮಿ ಕೆ.ಸಿ, ಚಂದ್ರಹಾಸ ಹಾಗೂ ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಊರಿನ ಧಾರ್ಮಿಕ ಕಾರ್ಯಕ್ಕಾಗಿ ಸ್ವಚ್ಛತೆಗೆ ಮುಂದಾಗ ಗ್ರಾಪಂ ಸದಸ್ಯ



**ಹುಳಿಯಾರು:** ಊರಿನ ಧಾರ್ಮಿಕ ಕಾರ್ಯಕ್ರಮಕ್ಕಾಗಿ ಗ್ರಾಮ ಪಂಚಾಯ್ತಿ ಸದಸ್ಯನೇ ಸ್ವಚ್ಚತೆಗೆ ಇಳಿಯುವ ಮೂಲಕ ಮಾದರಿಯಾದ ಘಟನೆ ಹುಳಿಯಾರು ಹೋಬಳಿಯ ಸೀಗೆಬಾಗಿ ಗ್ರಾಮದಲ್ಲಿ ನಡೆದಿದೆ.

ಸೀಗೆಬಾಗಿ ಗ್ರಾಮದಲ್ಲಿ ನೂತನವಾಗಿ ಈಶ್ವರ ದೇವಸ್ಥಾನ ನಿರ್ಮಿಸಿದ್ದು ಇದರ ಲೋಕಾರ್ಪಣೆಯನ್ನು ಭಾನುವಾರ ಮತ್ತು ಸೋಮವಾರ ಆಯೋಜಿಸಲಾಗಿತ್ತು. ನಿಮಿತ್ತ ಕಳಸ ಸ್ಥಾಪನೆಗಾಗಿ ವಿವಿಧ ಧಾರ್ಮಿಕ ಕೈಂಕರ್ಯಗಳ ಜೊತೆಗೆ ಸಂಗೀತ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಈ ಕಾರ್ಯಕ್ರಮಕ್ಕೆ ಊರಿನವರೆಲ್ಲರ ಜೊತೆಗೆ ಅಕ್ಕಪಕ್ಕದ ನೂರಾರು ಭಕ್ತರು ಆಗಮಿಸುವವರಿದ್ದರು. ಆದರೆ ಊರಿನ ಮಧ್ಯದಲ್ಲಿರುವ ಕರುವಗಲ್ಲು ಬಳಿ ಕೆಸರು ನಿಂತು ಅನೈರ್ಮಲ್ಯ ತಾಣವಾಗಿತ್ತು. ಇದು ಮಡಿಯಿಂದ ಮಾಡುವ ಧಾರ್ಮಿಕ ಚಟುವಟಿಕೆಗಳಿಗೆ ತೊಡಕಾಗಿತ್ತು. ಗ್ರಾಪಂ ಸ್ಕ್ಯಾವೆಂಜರ್ಸ್ ಕರೆಸಿ ಕ್ಲೀನ್ ಮಾಡಿಸಲು ದೀಪಾವಳಿ, ರಾಜ್ಯೋತ್ಸವ, ಭಾನುವಾರ ಹೀಗೆ ಸಾಲುಸಾಲು ರಜೆ ಇತ್ತು.

ಹಾಗಾಗಿ ಗ್ರಾಪಂ ಸದಸ್ಯ ಗಂಗಾಧರ್ ಅವರೇ ಖುದ್ದು ಕೂಲಿಕಾರರೊಂದಿಗೆ ಗ್ರಾಮ ಸ್ವಚ್ಚತೆಗೆ ಇಳಿದರು. ಗುದ್ದಲಿ ಹಿಡಿದು ಊರಿನ ಪ್ರಮುಖ ಸ್ಥಳದಲ್ಲಿದ್ದ ಕೆಸರನ್ನು ತೆರವು ಮಾಡಲು ಶ್ರಮಿಸಿದರು. ಇದರಿಂದ ಸೋಮವಾರ ದೇವರುಗಳು ಕರುಗಲ್ಲು ಪ್ರದಕ್ಷಿಣೆ ಹಾಕಿ ಸಾಂಗವಾಗಿ ಈಶ್ವರ ದೇವಸ್ಥಾನದ ಕೆಲಸ ಕಾರ್ಯಗಳು ಜರುಗಿದವು.

## ಬೆಳೆ ಹಾನಿಯಾದರೈತರ ಪಟ್ಟಿ ಪ್ರಕಟ: ಆಕ್ಷೇಪಣೆ ಸಲ್ಲಿಸಿ

**ರಾಮನಗರ:** ಸರ್ಕಾರದಆದೇಶದಂತೆ2024-25ನೇ ಸಾಲಿನ ಹಿಂಗಾರು ಹಂಗಾಮಿನಲ್ಲಿ(ಅಕೋಬರ್ ಮಾಹೆಯಲ್ಲಿ)ರಾಮನಗರಜಿಲ್ಲೆಯಲ್ಲಿಉಂಟಾದ ಪ್ರವಾಹ, ಅತಿವೃಷ್ಠಿಯಿಂದಬೆಳೆ ಹಾನಿಯ ಪರಿಹಾರವನ್ನುಪಾವತಿಸಲು ಅನುಕೂಲವಾಗುವಂತೆಬೆಳೆ ಹಾನಿಗೀಡಾದರೈತರ ಪಟ್ಟಿಯನ್ನುಜಿಲ್ಲಾಧಿಕಾರಿಗಳ ಕಚೇರಿ,ಉಪ ವಿಭಾಗಾಧಿಕಾರಿಗಳ ಕಚೇರಿ, ತಹಶೀಲ್ದಾರರಕಚೇರಿ/ ಗ್ರಾಮ ಪಂಚಾಯಿತಿಕಚೇರಿ/ ರೈತ ಸಂಪರ್ಕ ಕೇಂದ್ರಗಳಲ್ಲಿ 2024ರ ಅಕ್ಟೋಬರ್ 30ರಂದು ಪ್ರಕಟಿಸಲಾಗಿದೆ. ಈ ಕುರಿತುಯಾವುದಾದರೂ ಆಕ್ಷೇಪಣೆಗಳಿದ್ದಲ್ಲಿ ಸಂಬಂಧಿಸಿದ ತಹಶೀಲ್ದಾರರು, ಕೃಷಿ ಇಲಾಖೆ, ತೋಟಗಾರಿಕಾ ಇಲಾಖೆಗಳ ತಾಲ್ಲೂಕು ಕಚೇರಿಗಳಲ್ಲಿ 7 ದಿನಗಳೊಳಗಾಗಿ ಸಲ್ಲಿಸುವಂತೆಜಿಲ್ಲಾಧಿಕಾರಿಯವರು ತಿಳಿಸಿದ್ದಾರೆ.

## 9 ರಂದುರಾಷ್ಟ್ರೀಯ ಕಾನೂನು ಸೇವೆಗಳ ದಿನಾಚರಣೆ

**ರಾಮನಗರ:** ರಾಷ್ಟ್ರೀಯ ಕಾನೂನು ಸೇವೆಗಳ ದಿನಾಚರಣೆ ಅಂಗವಾಗಿ ಇದೇನ.9ರ ಬೆಳಿಗ್ಗೆ 9.45ಕ್ಕೆ ರಾಮನಗರಜಿಲ್ಲಾ ನ್ಯಾಯಾಯದಆವಣದಲ್ಲಿಪ್ರಧಾನಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದಅಧ್ಯಕ್ಷರಾದ ನ್ಯಾ. ಬಿ.ವಿ. ರೇಣುಕಾಅವರುಮೊಬೈಲ್ ವ್ಯಾನ್/ ಆಟೋ ಮೂಲಕ ಹಮ್ಮಿಕೊಳ್ಳಲಾಗಿರುವ ಕಾನೂನು ಅರಿವ-ನೆರವುಜಾಗೃತಿಜಾಥಾಗೆಚಾಲನೆ ನೀಡುವರು. ನಂತರಬೆಳಿಗ್ಗೆ 10.45ಕ್ಕೆ ನಗರದಎಂ.ಎಚ್. ಕಾಲೇಜಿನಲ್ಲಿರಾಷ್ಟ್ರೀಯ ಕಾನೂನು ಸೇವೆಗಳ ದಿನಾಚರಣೆಕಾರ್ಯಕ್ರಮವನ್ನುಆಯೋಜಿಸಲಾಗಿದೆ.

## ಸುಗಂಧ ಸಂಗೀತಕಾರ್ಯಕ್ರಮ

**ರಾಮನಗರ:** ಕೇಂದ್ರ ಸರ್ಕಾರದ ಪ್ರವಾಸೋದ್ಯಮ ಸಚಿವಾಲಯ, ಕೇಂದ್ರ ಸಂಸ್ಕೃತಿ ಸಚಿವಾಲಯ, ಪ್ರವಾಸೋದ್ಯಮ ಇಲಾಖೆ ಮತ್ತು ಸಂಗೀತ ನಾಟಕಅಕಾಡೆಮಿಯ ಸಹಯೋಗದೊಂದಿಗೆರಾಜ್ಯದಸಂಗೀತ ಮತ್ತು ಸಾಂಸ್ಕೃತಿಕ ಪರಂಪರೆಯಆಚರಣೆಯಾದ ಮೈಸೂರುಸಂಗೀತ ಸುಗಂಧ ಉತ್ಸವವನ್ನು-20 24ರಕಾರ್ಯಕ್ರಮವನ್ನುನ.8 ರಿಂದ 10 ರವರೆಗೆ ಮೈಸೂರಿನಲ್ಲಿಆಯೋಜಿಸಲಾಗುತ್ತಿದೆ. ಈಕಾರ್ಯಕ್ರಮದ ಅಂಗವಾಗಿ ರಾಮನಗರಜಿಲ್ಲೆಯಚನ್ನಪಟ್ಟಣ ತಾಲ್ಲೂಕಿನ ಶ್ರೀ ಅಪ್ರಮೇಯ ಸ್ವಾಮಿದೇವಾಲಯದಲ್ಲಿಇತ್ತೀಚೆಗೆ ಖ್ಯಾತಗಾಯಕಟಿ.ವಿ. ರಾಮಪ್ರಸಾದ್ಮತ್ತುತಂಡದವರಿಂದ ಸುಗಂಧ ಸಂಗೀತಕಾರ್ಯಕ್ರಮವನ್ನುಆಯೋಜಿಸಲಾಗಿತ್ತು. ಈ ಸಂದರ್ಭದಲ್ಲಿಪ್ರವಾಸೋದ್ಯಮಇಲಾಖೆಯ ಸಹಾಯಕ ನಿರ್ದೇಶಕರವಿ ಕುಮಾರ್ಎಚ್.ಡಿ., ಭಾರತೀಯ ಪ್ರವಾಸೋದ್ಯಮ ಮಂತ್ರಾಲಯಅಧಿಕಾರಿಚಂದ್ರನಾಯ್ಕ, ಕೇಂದ್ರ ಸಂಸ್ಕೃತಿ ಸಚಿವಾಲಯದಅಧಿಕಾರಿ ವಿಜಯ್ ಸಿಂಗ್ ಹಾಗೂ ಇತರೆಗಣ್ಯರು ಉಪಸ್ಥಿತರಿದ್ದರು.

## 8 ರವರೆಗೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳ ಆಯೋಜನೆ

**ಮೈಸೂರು:** ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರ ಹಾಗೂ ಪ್ರವಾಸೋದ್ಯಮ ಇಲಾಖೆಯ ವತಿಯಿಂದ ನಾಡಹಬ್ಬ ಮೈಸೂರು ದಸರಾ ಅಂಗವಾಗಿ ನವೆಂಬರ್ 4 ರಿಂದ 8 ರವರೆಗೆ ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರದ ಪಿ.ಕಾಳಿಂಗರಾವ್ ಗಾನಮಂಟಪದಲ್ಲಿ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ನವೆಂಬರ್ 5 ರಂದು ಬೆಳಿಗ್ಗೆ 6 ರಿಂದ 7.15 ಗಂಟೆಯವರೆಗೆ ಚಾಮುಂಡಿಪುರಂನ ಅರುಣೋದಯ ವಿಕಲಚೇತನ ಆಶ್ರಮದವರಿಂದ ಸಾಮೂಹಿಕ ನೃತ್ಯ ಪ್ರದರ್ಶನ, ಬೆಳಿಗ್ಗೆ 7.15 ರಿಂದ 8.15 ಗಂಟೆಯವರೆಗೆ ಹೂಟಗಳ್ಳಿಯ ಶ್ರೀನಿವಾಸ್ ಅವರಿಂದ ನಾದಸ್ವರ ಮತ್ತು ಸ್ಯಾಕ್ಸೋಫೋನ್ ಹಾಗೂ ಬೆಳಿಗ್ಗೆ 8.30 ರಿಂದ 9.30 ಗಂಟೆಯವರೆಗೆ ರಾಘವೇಂದ್ರ, ರತ್ನಾಕರ್ ರವರಿಂದ ಆರ್ಕೆಸ್ಟ್ರಾ. ನವೆಂಬರ್ 6 ರಂದು ಬೆಳಗ್ಗೆ 6 ರಿಂದ 7 ಗಂಟೆಯವರೆಗೆ ವರಕೂಡಿನ ರಾಜು ಅವರಿಂದ ತಂಬೂರಿ ಕಥೆ, ಬೆಳಿಗ್ಗೆ 7 ರಿಂದ 9.30 ಗಂಟೆಯವರೆಗೆ ಉಪ್ಪುಂದ ರಾಜೇಶ್ ಪಡಿಯಾರ್ ಅವರಿಂದ ಸುಗಮ ಸಂಗೀತ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ನವೆಂಬರ್ 7 ರಂದು ಬೆಳಗ್ಗೆ 6 ರಿಂದ 7.15 ಗಂಟೆಯವರೆಗೆ ನಂಜನಗೂಡಿನ ಸಪ್ತಸ್ವರ ಸಂಗೀತ ಶಾಲೆಯ ವತಿಯಿಂದ ಸಂಗೀತ ಕಾರ್ಯಕ್ರಮ, ಬೆಳಿಗ್ಗೆ 7.15 ರಿಂದ 9.30 ಗಂಟೆಯವರೆಗೆ ವೀಣಾ ಶಾರದಾ ಸಾಂಸ್ಕೃತಿಕ ಕಲಾತಂಡದಿಂದ ಚಲನಚಿತ್ರ ಗೀತೆಗಳು ಹಾಗೂ ನವೆಂಬರ್ 8 ರಂದು ಬೆಳಗ್ಗೆ 6 ರಿಂದ 7.15 ಗಂಟೆಯವರೆಗೆ ವರಲಕ್ಷ್ಮೀ ಸುಗಮ ಸಂಗೀತ ಅವರಿಂದ ಸುಗಮ ಸಂಗೀತ ಮತ್ತು ಬೆಳಿಗ್ಗೆ 7.15 ರಿಂದ 9.30 ಗಂಟೆಯವರೆಗೆ ನಯನ ಕಲಾನಿಕೇತನ ಸಾಂಸ್ಕೃತಿಕ ಸಂಘದ ವತಿಯಿಂದ ಸಾಮಾಜಿಕ ನಾಟಕವನ್ನು ಆಯೋಜಿಸಲಾಗಿದೆ ಎಂದು ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರದ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗೊರೂರು ನೆನಪುಗಳು ಕೃತಿ ಕಾಲಘಟ್ಟದ ಕೈಗನ್ನಡಿ



**ಬೆಂಗಳೂರು:** ಉತ್ತಮ ಕೃತಿಯೊಂದು ಕಾಲಘಟ್ಟದ ಕನ್ನಡಿಯಾಗಿದ್ದು ಅಂದಿನ ಸಂಸ್ಕೃತಿಯ ದಾಖಲೆಯಾಗಿರುತ್ತದೆ ಎಂದು ಲೇಖಕ ಗೊರೂರು ಶಿವೇಶ್ ಅಭಿಪ್ರಾಯಪಟ್ಟರು.

ಅವರು ಹಾಸನದ ಹಾಸನಾಂಬ ಥಿಯಸಾಫಿಕಲ್ ಸೊಸೈಟಿಯ ಗ್ರಂಥಾಲಯ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ 323ನೇ ಮನೆ ಮನೆ ಕವಿಗೋಷ್ಠಿ ಕಾರ್ಯಕ್ರಮದಲ್ಲಿ ಗೊರೂರು ಸೋಮಶೇಖರವರ ಬದುಕು ಬರಹ, ಅವರ ಗೊರೂರು ನೆನಪುಗಳು ಹಾಗೂ ಬಸವಣ್ಣನ ಪುರಾತ ದಾಸಿಮಯ್ಯ ಕೃತಿಗಳ ಕುರಿತು ಮಾತನಾಡಿದರು.

ಗೊರೂರು ರಾಮಸ್ವಾಮಿ ಅಯ್ಯಂಗಾರ್ ರ ನಂತರದ ಕಾಲಘಟ್ಟದ ಗ್ರಾಮೀಣ ಬದುಕನ್ನು ಕಟ್ಟಿ ಕೊಟ್ಟಿರುವ ಗೊರೂರು ನೆನಪುಗಳು ನಮ್ಮೂರಿನ ರಸಿಕರಷ್ಟೇ ಮಹತ್ವದ ಕೃತಿಯಾಗಿದ್ದು ಗ್ರಾಮೀಣ ಬದುಕಿನ ಶ್ರೀಮಂತಿಕೆಯನ್ನು ಗೊರೂರು ಸೋಮಶೇಖರರು ಪಡಿಮುಡಿಸಿದ್ದಾರೆ. ಕೃತಿಯಲ್ಲಿ ಮಾದರಿ ಗ್ರಾಮವೊಂದರ ಜಾನಪದ ,ಸಾಮಾಜಿಕ ಸಾಂಸ್ಕೃತಿಕ ಅಂಶಗಳ ಪ್ರಸ್ತುತಿ ಇದ್ದು ಗೊರೂರಿನ ಅಣೆಕಟ್ಟಿನ ನಿರ್ಮಾಣ ಸಂದರ್ಭ ಮುಳುಗಡೆಯಾದವರ ಚಿತ್ರಣ ಮನಮಿಡಿಯುವಂತೆ ಮೂಡಿಬಂದಿದೆ . ಜಾನಪದರ ವನದೇವತೆ ಬಂದಮ್ಮನ ಐತಿಹ್ಯ, ಜಾನಪದ ಹಿನ್ನೆಲೆ, ಆಚರಣೆಯ ಕುರಿತಾಗಿ ವಿಶ್ಲೇಷಣಾತ್ಮಕವಾಗಿ ದಾಖಲಿಸಿದ್ದಾರೆ.

ಅವರ ಮತ್ತೊಂದು ಮಹತ್ವದ ಕೃತಿ ಬಸವಣ್ಣನ ಪುರಾತ ದಾಸಿಮಯ್ಯ, ಸಂಶೋಧನಾತ್ಮಕ ಬರಹಗಳ ಸಂಗ್ರಹವಾಗಿದ್ದು ಕೃತಿಯಲ್ಲಿ ಜೇಡರ ದಾಸಿಮಯ್ಯ ಮತ್ತು ದೇವರ ದಾಸಿಮಯ್ಯ ಇಬ್ಬರೂ ಬೇರೆಯಲ್ಲ, ಒಬ್ಬರೇ ಎಂಬುದನ್ನು ವಿಶ್ಲೇಷಿಸಿದ್ದಾರೆ ಎಂದರು.

ಮುಖ್ಯ ಅತಿಥಿಗಳಾಗಿದ್ದ ನಿವೃತ್ತ ಪ್ರಾಂಶುಪಾಲ ಡಾ. ಎಂ ಆರ್ ಚಂದ್ರಶೇಖರ್ ಮಾತಾಡಿ ಗೊರೂರಿನ ಎ ಎನ್ ವಿ ಪ್ರಥಮ ದರ್ಜೆ ಕಾಲೇಜು ಸ್ಥಾಪನೆಯಲ್ಲಿ ಪ್ರಮುಖ ಪಾತ್ರ ವಹಿಸಿದ್ದ ಗೊರೂರು ಸೋಮಶೇಖರರು ಎಸ್. ಆರ್ ನಿಂಗಪ್ಪನವರು ಅಧ್ಯಕ್ಷರಾಗಿದ್ದ ಸಂದರ್ಭದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿಗಳಾಗಿ ಅನೇಕ ಸಾಹಿತ್ಯಾತ್ಮಕ ಕಾರ್ಯಕ್ರಮಗಳನ್ನು ಆಯೋಜಿಸಿದ್ದರು ಎಂದರು

ಕಾರ್ಯಕ್ರಮದಲ್ಲಿ ಆರ್. ರಾಮಶಂಕರಬಾಬು, ಸುಶೀಲಾ ಸೋಮಶೇಖರ್, ಚಂದ್ರಕಾಂತ ಪಡೆಸೂರು, ಜಮುನಾ ಗೊರೂರು, ಕಟ್ಟೇಮನೆ ನಾಗೇಂದ್ರ, ,ಕೆ. ಎನ್. ಚಿದಾನಂದ, ಲಲಿತ ಎಸ್. ,ಜಿ.ಆರ್ ಶ್ರೀಕಾಂತ್ ಕವಿತೆ ವಾಚಿಸಿದರು. ಗಾಯಕರಾದ ಧನಲಕ್ಷ್ಮಿ, ಪೊಲೀಸ್ ನಂಜಪ್ಪ, ಗೋಪಾಲಕೃಷ್ಣ ಕನ್ನಡ ಗೀತೆಗಳು ಹಾಡಿದರು. ಈ ಬಾರಿ ಜಿಲ್ಲಾಡಳಿತದ ವತಿಯಿಂದ ರಾಜ್ಯೋತ್ಸವ ಪ್ರಶಸ್ತಿ ವಿಜೇತರಾದ ಯಾಕೂಬ್ ಗೊರೂರು, ಬ್ಯಾಟಾಚಾರ್ ರನ್ನು ಮನೆ ಮನೆ ಕವಿಗೋಷ್ಠಿ ವತಿಯಿಂದ ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿದ ಗೊರೂರು ಶಿವೇಶ್, ಎಂ.ಆರ್ ಚಂದ್ರಶೇಖರ್ ಹಾಗೂ ಗಾಯಕ ಶ್ರೀಕಾಂತ್ ರವರನ್ನು ಗೌರವಿಸಲಾಯಿತು.

ಮನೆ ಮನೆ ಕವಿಗೋಷ್ಠಿ ಸಂಚಾಲಕ ಸಾಹಿತಿ ಗೊರೂರು ಅನಂತರಾಜು, ಪಾಪಣ್ಣ ಶೆಟ್ಟಿ.ಎನ್, ಕಾಂತಾಮಣಿ ಜಿ. ಬಿ, ಶಕುಂತಲ, ಎ. ಎಸ್. ಕುಮಾರ್ ಬಿ. ಎಸ್. ಪರಮೇಶ್, ಎನ್. ಕೆ. ಶ್ರೀನಿವಾಸ ಶೆಟ್ಟಿ ಜಯದೇವಪ್ಪ ಮುಂತಾದವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಚಂದ್ರಕಾಂತ ಪಡೆಸೂರ್ ಕಾರ್ಯಕ್ರಮವನ್ನು ನಿರೂಪಿಸಿದರು.

# ಕವಿಕಾವ್ಯ ಕುಂಚ ಗಾಯನ ನೃತ್ಯ ವಿಮರ್ಶೆ



**ಬೆಂಗಳೂರು:** ಕರ್ನಾಟಕ ರಾಜ್ಯ ಬರಹಗಾರರ ಸಂಘ, ಹೂವಿನಹಡಗಲಿ ಹಾಸನ ಜಿಲ್ಲಾ ಘಟಕ ವತಿಯಿಂದ ಕನ್ನಡ ರಾಜ್ಯೋತ್ಸವ ಪ್ರಯುಕ್ತ ಭಾನುವಾರ ಹಾಸನ ನಗರದ ಅರಳಿಕಟ್ಟೇ ವೃತ್ತದ ಬಳಿ ಇರುವ ಸಂಸ್ಕೃತ ಭವನದಲ್ಲಿ ಹಾಸನ ಜಿಲ್ಲಾಮಟ್ಟದ ಕವಿಕಾವ್ಯ ಕುಂಚ ಗಾಯನ ನೃತ್ಯ ವಿಮರ್ಶೆ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಕಾರ್ಯಕ್ರಮದಲ್ಲಿ ಪ್ರಧಾನ ಭಾಷಣ ಮಾಡಿದ ಹಾಸನ ಆಕಾಶವಾಣಿ ನಿರ್ದೇಶಕ ವಿಜಯ ಅಂಗಡಿ ಮಾತನಾಡಿ ಪ್ರಕೃತಿ ಎಂಬುದು ನಮಗೆ ಪ್ರಥಮ ಗುರು. ಕವಿ, ಸಾಹಿತಿ, ವೈದ್ಯರು ಒಳಗೊಂಡು ಎಲ್ಲರಿಗೂ ಪಾಠ ಕಲಿಸುತ್ತದೆ. ಪ್ರಕೃತಿಯಿಂದ ಎಲ್ಲಾ ಸಾಹಿತ್ಯ, ಕಥೆ, ಕವನ, ಚಿತ್ರಗಳು ಸೃಷ್ಟಿಯಾಗುತ್ತವೆ. ನಿಸರ್ಗ ಇಲ್ಲದೆ ನಾವುಗಳಿಲ್ಲ ಆದರೆ ನಾವು ಇಲ್ಲದಿದ್ದರೂ ನಿಸರ್ಗ ಇರುತ್ತದೆ ಎಂದರು.

ಸಾಹಿತಿ ಗೊರೂರು ಅನಂತರಾಜು ಪ್ರಸ್ತಾವಿಕವಾಗಿ ಮಾತನಾಡಿ ಬಹಳ ವರ್ಷಗಳ ಹಿಂದೆ ಹಲ್ಮಿಡಿ ಗ್ರಾಮದಲ್ಲಿ ನಡೆದ ಹೊಯ್ಸಳೋತ್ಸವದಲ್ಲಿ ಕವಿಕಾವ್ಯ, ಕುಂಚ, ಸಂಗೀತ ಗಾಯನ ನೃತ್ಯ ಕಾರ್ಯಕ್ರಮ ಆಯೋಜಿಸಲಾಗಿತ್ತು. ಹೊಯ್ಸಳೋತ್ಸವ ಕಾರ್ಯಕ್ರಮ ಪ್ರತಿವರ್ಷ ನಡೆದುಕೊಂಡು ಬಂದಿದ್ದರೆ ಎಷ್ಟೋ ಕವಿ ಕಲಾವಿದರು ಚಿತ್ರಕಾರರಿಗೆ ವೇದಿಕೆ ಒದಗಿ ಅವರ ಪ್ರತಿಭೆ ಹೊರಬರುತ್ತಿತ್ತು. ಈ ದಿಶೆಯಲ್ಲಿ ಸಂಘ ಹಮ್ಮಿಕೊಂಡಿರುವ ಕಾರ್ಯಕ್ರಮದಲ್ಲಿ ಜಿಲ್ಲೆಯ ಪ್ರತಿಭಾನ್ವಿತ ಹೆಸರಾಂತ ಕವಿಗಳು, ಕಲಾವಿದರು, ಗಾಯಕರು, ವಿಮರ್ಶಕರು ಮತ್ತು ಯುವ ಪ್ರತಿಭೆಯ ನೃತ್ಯಪಟುಗಳನ್ನು ಒಂದೇ ವೇದಿಕೆಯಲ್ಲಿ ಸಮ್ಮಿಲನಗೊಳಿಸಲಾಗಿದೆ. ಪ್ರಸಿದ್ಧರ ಜೊತೆಗೆ ಉದಯೋನ್ಮುಖ ಕವಿಗಳು, ಉತ್ತಮ ಕಂಠ ಸಿರಿಯ ಗಾಯಕರ ಜೊತೆಗೆ ಗಾಯನ ಕ್ಷೇತ್ರದಲ್ಲಿ ಎಲೆಮರೆಕಾಯಿಯಂತಿರುವ ಗಾಯಕರು, ಪರಿಣಿತ ಚಿತ್ರಕಲಾವಿದರ ಜೊತೆಗೆ ವಿದ್ಯಾರ್ಥಿ ಚಿತ್ರಕಲಾವಿದರು ಪಾಲ್ಗೊಂಡು ಹಳೆ ಬೇರು ಹೊಸ ಚಿಗುರು ನಾಣ್ಣುಡಿಗೆ ಅನುಸಾರ ಕಾರ್ಯಕ್ರಮ ಆಯೋಜಿಸಲಾಗಿದೆ. ಕರ್ನಾಟಕ ರಾಜ್ಯ ಬರಹಗಾರರ ಸಂಘದ ರಾಜ್ಯ ಘಟಕದ ಕರೆಗೆ ಸ್ಪಂಧಿಸಿ ರಾಜ್ಯದ 26 ಜಿಲ್ಲೆಗಳಲ್ಲಿ ಒಂದೆ ದಿನ ಕವಿಗೋಷ್ಠಿ ಉಪನ್ಯಾಸ, ಪ್ರತಿಭೆಗಳಿಗೆ ಸನ್ಮಾನ ಕಾರ್ಯಕ್ರಮ ನಡೆಸಿವೆ. ಹಾಸನ ಜಿಲ್ಲೆಯಲ್ಲಿ ಹೊಯ್ಸಳೋತ್ಸವ ಮತ್ತೆ ಪ್ರಾರಂಭವಾಗಿ ಕವಿ ಕಲಾವಿದರಿಗೆ ಸೂಕ್ತ ವೇದಿಕೆ ಒದಗಿಬರಲಿ ಎಂಬುದು ಕಾರ್ಯಕ್ರಮದ ಸದುದ್ದೇಶವಾಗಿದೆ ಎಂದರು.

ವೇದಿಕೆಯಲ್ಲಿ ಹಾಸನ ಜಿಲ್ಲಾ ಘಟಕದ ಅಧ್ಯಕ್ಷ ಉಡುವೇರೆ ಡಿ. ಸುಂದರೇಶ್, ನಿ. ತಹಸೀಲ್ದಾರ್ ರುದ್ರಪ್ಪಾಜಿರಾವ್, ಗಾಯಕರು ಗ್ಯಾರಂಟಿ ರಾಮಣ್ಣ, ಚಿತ್ರಕಲಾವಿದರು ಶಂಕರಪ್ಪ ಕಲ್ಯಾಡಿ, ಬಿ.ಎಸ್.ದೇಸಾಯಿ, ಆರ್.ಶಿವಕುಮಾರ್. ನೇತ್ರಾವತಿ, ಎಂ.ಆರ್.ಚಂದ್ರಶೇಖರ್, ಶೈಲಜಾ ಹಾಸನ, ಕಲಾವತಿ ಮಧುಸೂಧನ್ ಇದ್ದರು. ದಿಬ್ಬೂರು ರಮೇಶ್ ಪ್ರಾರ್ಥಿಸಿದರು. ಗಿರಿಜಾ ನಿರ್ವಾಣಿ ನಿರೂಪಿಸಿದರು. ಕಾರ್ಯಕ್ರಮದಲ್ಲಿ 37 ಕವಿಗಳು ರಚಿತ ಕವಿತೆಗಳನ್ನು 25ಕ್ಕೂ ಗಾಯಕರು ವೇದಿಕೆಯಲ್ಲಿ ರಾಗ ಸಂಯೋಜಿಸಿ ಹಾಡಿದರು. ಗಾಯನ ಕಾರ್ಯಕ್ರಮ ನಡೆಯುವಾಗ ಚಿತ್ರ ಕಲಾವಿದರು ಸಭಿಕರೆದುರು ಚಿತ್ರ ಬಿಡಿಸಿ ಪ್ರಶಂಸೆಗೆ ಪಾತ್ರರಾದರು. ಹಾಡಲ್ಪಟ್ಟ ಕವಿತೆಗಳನ್ನು ಡಾ.ಬರಾಳು ಶಿವರಾಂ, ಜಿ.ಎನ್.ಅನುಸೂಯ, ಗೊರೂರು ಶಿವೇಶ್, ಜಿ.ಎಸ್.ಶಿವಶಂಕರಪ್ಪ, ಕೊಟ್ರೇಶ್ ಎಸ್.ಉಪ್ಪಾರ್, ಸಿ.ಎನ್. ಚಿದಾನಂದ, ಜಿ.ಟಿ.ಲೋಕೇಶ್, ಎನ್.ಎಲ್. ಚನ್ನೇಗೌಡ, ಗೊರೂರು ಅನಂತರಾಜು ಸೊಗಸಾಗಿ ವಿಮರ್ಶಿಸಿದರು.

# ಪಟಾಕಿ ಹಣ ಉಳಿಸಿ ಬಡವರಿಗೆ ಉಡುಗೊರೆ ನೀಡಿ

**ಚಿತ್ರದುರ್ಗ:** ದೀಪಾವಳಿ ಹಬ್ಬದಂದು ಖರ್ಚು ಮಾಡುವ ಪಟಾಕಿ ಹಣವನ್ನು ಸಂಗ್ರಹಿಸಿ, ಬಡ ಮಕ್ಕಳಿಗೆ, ಅನಾಥ ಮಕ್ಕಳಿಗೆ, ಉಡುಗೊರೆಗಳನ್ನು ನೀಡಿ, ದೀಪಾವಳಿಯನ್ನು ವಿಭಿನ್ನವಾಗಿ ಆಚರಿಸಬಹುದು. ಅದರಲ್ಲಾಗುವ ಮನ ಸಂತೋಷವನ್ನು ನಾವು ಪಟಾಕಿ ಹಚ್ಚುವುದರಿಂದ ಗಳಿಸಲು ಸಾಧ್ಯವಿಲ್ಲ, ಹಾಗೂ ಮಾಲಿನ್ಯವನ್ನು ಸಹ ತಡೆಯಲು ಅನುಕೂಲಕರವಾಗುವುದು. ಈ ನಿಟ್ಟಿನಲ್ಲಿ ಪೋಷಕರು ತಮ್ಮ ಮಕ್ಕಳನ್ನು ಪಟಾಕಿ ಬಳಕೆಯಿಂದ ವಿಮೋಕ್ತಿ ಗೊಳಿಸಿ, ಪರಿಸರ ಜ್ಞಾನವನ್ನು ತುಂಬಬೇಕು ಎಂದು ಕರ್ನಾಟಕ ಜ್ಞಾನ-ವಿಜ್ಞಾನ ಸಮಿತಿಯ ರಾಜ್ಯ ಉಪಾಧ್ಯಕ್ಷರು ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷರಾದ ಬಾ. ಎಚ್ ಕೆ ಎಸ್ ಸ್ವಾಮಿಯವರು ಕರೆ ನೀಡಿದ್ದಾರೆ . ಬಹಳಷ್ಟು ಜನರಿಗೆ ಬಡವರು ಎಲ್ಲಿ ಸಿಗುತ್ತಾರೆ, ಬಡವರು ಹೇಗಿರುತ್ತಾರೆ, ಅವರಿಗೆ ಹಣ ನೀಡುವುದು ಹೇಗೆ? ವಸ್ತು ನೀಡುವುದು ಹೇಗೆ? ಆಹಾರ ನೀಡುವುದು ಹೇಗೆ? ಎಂದು ಹುಡುಕುತ್ತಿರುತ್ತಾರೆ. ಅಂತವರಿಗೆ ಸ್ಲಂ ಗಳಲ್ಲಿ ವಾಸ ಮಾಡುತ್ತಿರುವ ಮಕ್ಕಳನ್ನು ತೋರಿಸಿ, ಬಡವರನ್ನು ಗುರುತಿಸಿ, ಅವರಿಗೆ ಬೇಕಾದಂತ ಉಡುಪುಗಳನ್ನ, ಶಿಕ್ಷಣಕ್ಕೆ ಬೇಕಾದಂತ ಬ್ಯಾಗು, ಪುಸ್ತಕ, ಬಳಪ, ನೋಟ್ ಪುಸ್ತಕಗಳನ್ನ, ಕ್ರೀಡಾ ಸಾಮಗ್ರಿಗಳನ್ನ ವಿತರಣೆ ಮಾಡಿ, ಅವರನ್ನು ಸಹ ನಮ್ಮ ಮಟ್ಟಕ್ಕೆ ತೆಗೆದುಕೊಂಡು ಬರುವುದರ ಕಡೆ ಹಬ್ಬಗಳನ್ನ ಬಳಸಿಕೊಳ್ಳಬೇಕು ಎಂದರು.

ಹಬ್ಬಗಳ ಉದ್ದೇಶವೇ ನಮ್ಮ ಸಂತೋಷವನ್ನು ಇತರರೊಂದಿಗೆ ಹಂಚಿಕೊಂಡು, ಎಲ್ಲರನ್ನೂ ಸಮಾನತೆಗೆ ಸೆಳೆದು ತರುವುದೇ ಹಬ್ಬಗಳ ಉದ್ದೇಶವಾಗಿದೆ. ಆದರೆ ನಾವಿಂದು ನಮ್ಮ ಸ್ವಾರ್ಥಕ್ಕಾಗಿ, ಹೆಚ್ಚು ಹಬ್ಬಗಳನ್ನು ಬಳಕೆ ಮಾಡಿಕೊಳ್ಳುತ್ತಾ, ನಮ್ಮ ಆನಂದಕ್ಕಾಗಿ ನಾವು ಕೋಟ್ಯಾಂತರ ರೂಪಾಯಿಗಳನ್ನು ಖರ್ಚು ಮಾಡುತ್ತಿದ್ದೇವೆ. ಅದೇ ಹಣವನ್ನು ಉಳಿತಾಯ ಮಾಡಿ, ಬಡವರಿಗೆ ಸ್ವಲ್ಪ ಮಟ್ಟಿಗಾದರೂ ಸಹಾಯ ಮಾಡುವಂತಹ ಕಾರ್ಯವನ್ನ ಆಯೋಜನೆ ಮಾಡಿದರೆ, ಭೂಮಿಯಲ್ಲಿರುವ ಎಲ್ಲಾ ಬಡತನವನ್ನು ನಿಗ್ರಹಿಸಲು ಸಾಧ್ಯವಾಗುತ್ತದೆ ಎಂದರು. ದೀಪಾವಳಿಯಲ್ಲಿ ದೀಪ ಹಚ್ಚುವ ನಾವು, ಸ್ಲಂಗಳಲ್ಲಿ ದೀಪವಿಲ್ಲದೆ ಬಾಳುತ್ತಿರುವ ಜನರನ್ನ ನಾವು ಗಮನಿಸುತ್ತಲೆ ಇಲ್ಲ, ಅಲ್ಲಿರುವ ವಿದ್ಯಾರ್ಥಿಗಳು ದೀಪವಿಲ್ಲದೆ ದಿನಕ್ಕೊಂದು ಕ್ಯಾಂಡಲ್ಗಳನ್ನ ಬಳಕೆ ಮಾಡಿ, ಓದಿ, ಶಾಲೆಗಳಿಗೆ ತೆರಳುತ್ತಿರುವ ದೃಶ್ಯವನ್ನು, ನೂರಾರು ದೀಪಗಳನ್ನು ಬೆಳಗುವಂತಹ ಮಕ್ಕಳಿಗೆ ತೋರಿಸಬೇಕಾಗುತ್ತದೆ. ನಾವು ಆದಷ್ಟು ನಮ್ಮಲ್ಲಿರುವ ನೈಸರ್ಗಿಕ ಸಂಪತ್ತನ್ನು ಬಡವರಿಗೂ ಹಂಚುವುದರ ಬಗ್ಗೆ ಜಾಗೃತಿ ಮೂಡಿಸಬೇಕಾಗಿದೆ ಎಂದರು. ರಸ್ತೆಯಲ್ಲಿ ಬಿದ್ದ ಪಟಾಕಿಗಳನ್ನ ಆಯ್ದುಕೊಂಡು ಹೋಗಿ ಬಡಮಕ್ಕಳು ಪಟಾಕಿ ಹಚ್ಚುವ ದೃಶ್ಯವನ್ನು ನೋಡಿದರೆ ಮನ ಕರಗುತ್ತದೆ. ಅವರಿಗೆ ಪಟಾಕಿಕೊಳ್ಳಲು ಸಹ ಹಣವಿಲ್ಲದೆ, ಬೇರೆಯವರ ಹಚ್ಚುವ ಪಟಾಕಿಗಳಲ್ಲಿ ಆನಂದ ಅನುಭವಿಸುತ್ತಿರುತ್ತಾರೆ. ಹಾಗಾಗಿ ಶ್ರೀಮಂತರ ಮಕ್ಕಳುಗಳು ಬಡ ಮಕ್ಕಳಿಗೆ ಸ್ವಲ್ಪಮಟ್ಟಿಗಾದರೂ ಸಹಾಯ ಮಾಡಿ, ಅವರಿಗೆ ಪಟಾಕಿಯ ಅನುಭವವನ್ನು ತಂದುಕೊಡಲು ಒಂದೆರಡು ಪಟಾಕಿಗಳನ್ನ ಅವರಿಗೂ ನೀಡಿ, ಅವರ ಮನಸ್ಸನ್ನ ಗೆದ್ದು, ಅವರನ್ನು ಸಹ ಪರಿಸರ ಸ್ನೇಹಿ ಪಟಾಕಿ ಹಬ್ಬದ ಬಗ್ಗೆ ಜಾಗೃತಿ ಮೂಡಿಸಬಹುದು ಎಂದರು.

# ಸರಗೂರು ಪಟ್ಟಣ ಪಂಚಾಯಿತಿ ಉಪಚುನಾವಣೆಯ ವೇಳಾಪಟ್ಟಿ

**ಮೈಸೂರು:** ಸರಗೂರು ಪಟ್ಟಣ ಪಂಚಾಯಿತಿ ವಾರ್ಡ್ ಸಂಖ್ಯೆ 04 ರ ಸದಸ್ಯ ಸ್ಥಾನವು ಖಾಲಿಯಿರುವುದರಿಂದ ಖಾಲಿ ಸ್ಥಾನವನ್ನು ತುಂಬಲು ಚುನಾವಣೆ ನಡೆಸಬೇಕಾಗಿದ್ದು, ಈ ಹಿನ್ನೆಲೆ ಉಪ ಚುನಾವಣೆಯ ಸಂಬಂಧ ಕಾರ್ಯಕ್ರಮಗಳ ವೇಳಾಪಟ್ಟಿಯನ್ನು ಪ್ರಕಟ ಮಾಡಲಾಗಿದೆ. ಪರಿಶಿಷ್ಟ ಜಾತಿಗೆ ಸೇರಿದ ಅರ್ಹ ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಬಹುದಾಗಿದೆ. ಚುನಾವಣಾ ಅಧಿಸೂಚನೆಯನ್ನು ನವೆಂಬರ್ 04 ರಂದು ಹೊರಡಿಸಲಾಗಿದ್ದು, ನಾಮಪತ್ರ ಸಲ್ಲಿಸಲು ನವೆಂಬರ್ 11 ಕೊನೆಯ ದಿನವಾಗಿರುತ್ತದೆ. ನವೆಂಬರ್ 12 ರಂದು ನಾಮಪತ್ರಗಳ ಪರಿಶೀಲನೆ ನಡೆಯಲಿದ್ದು, ಉಮೇದುವಾರಿಕೆಗಳನ್ನು ಹಿಂಪಡೆಯಲು ನವೆಂಬರ್ 14 ಕೊನೆಯ ದಿನವಾಗಿರುತ್ತದೆ. ಮತದಾನ ಅವಶ್ಯವಿದ್ದರೆ, ಮತದಾನವನ್ನು ನವೆಂಬರ್ 23 ರಂದು ಬೆಳಿಗ್ಗೆ 7 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ನಡೆಸಲಾಗುವುದು. ಮರು ಮತದಾನ ಅವಶ್ಯವಿದ್ದರೆ, ಮತದಾನವನ್ನು ನವೆಂಬರ್ 25 ರಂದು ಬೆಳಿಗ್ಗೆ 7 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ನಡೆಸಲಾಗುತ್ತದೆ. ಮತಗಳ ಎಣಿಕೆಯು ನವೆಂಬರ್ 26 ರಂದು ಬೆಳಿಗ್ಗೆ 8 ಗಂಟೆಯಿಂದ ತಾಲ್ಲೂಕು ಕೇಂದ್ರ ಸ್ಥಳದಲ್ಲಿ ನಡೆಯಲಿದೆ. ಚುನಾವಣೆಗೆ ಸ್ಪರ್ಧಿಸಲು ಬಯಸುವ ಅಭ್ಯರ್ಥಿಗಳು ನಾಮಪತ್ರಗಳನ್ನು ಸಂಬಂಧಪಟ್ಟ ತಾಲ್ಲೂಕು ಕಛೇರಿಯಲ್ಲಿ ವೇಳಾಪಟ್ಟಿಯಂತೆ ಚುನಾವಣಾಧಿಕಾರಿಗಳಿಗೆ ಸಲ್ಲಿಸಬಹುದು. ಚುನಾವಣೆಗೆ ಸಂಬಂಧಿಸಿದಂತೆ ನವೆಂಬರ್ 04 ರಿಂದ 26 ರರವರೆಗೆ ಸದಾಚಾರ ಸಂಹಿತೆಯು ಜಾರಿಯಲ್ಲಿದ್ದು, ಚುನಾವಣಾ ನೀತಿ ಸಂಹಿತೆಯು ಉಪ ಚುನಾವಣೆ ನಡೆಯುವ ನಗರ ಸ್ಥಳೀಯ ಸಂಸ್ಥೆಗಳ ವಾರ್ಡುಗಳ ವ್ಯಾಪ್ತಿಯಲ್ಲಿ ಮಾತ್ರ ಜಾರಿಯಲ್ಲಿರುತ್ತದೆ. ನವೆಂಬರ್ 09 ಎರಡನೇ ಶನಿವಾರವಾಗಿದ್ದು, ನೆಗೋಷಿಯಬಲ್ ಇನ್ ಸ್ಟುಮೆಂಟ್ ಆಕ್ಟ್ ಅಡಿ ಸಾರ್ವತ್ರಿಕ ರಜಾ ದಿನವೆಂದು ಘೋಷಿಸಲ್ಪಟ್ಟಿದೆ. ಹಾಗಾಗಿ ಸದರಿ ದಿನದಂದು ಯಾವುದೇ ನಾಮಪತ್ರವನ್ನು ಸ್ವೀಕರಿಸದಂತೆ ಚುನಾವಣಾಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ.

ಅರ್ಹ ಮತದಾರನು, ಚುನಾವಣೆಯಲ್ಲಿ ಸ್ಪರ್ಧಿಸಿದ ಅಭ್ಯರ್ಥಿಗಳ ಪೈಕಿ ಯಾವೊಬ್ಬ ಅಭ್ಯರ್ಥಿಯ ಪರವಾಗಿ ತನ್ನ ಮತವನ್ನು ಚಲಾಯಿಸಲು ಇಚ್ಚಿಸದಿರುವ ಸಂದರ್ಭದಲ್ಲಿ ಆತನು ಮೇಲಿನ ಯಾರೊಬ್ಬರಿಗೂ ಇಲ್ಲ ಎಂದು ಮತ ಚಲಾಯಿಸಲು ಅವಕಾಶ ಕಲ್ಪಿಸಲಾಗಿದೆ ನಗರ ಸ್ಥಳೀಯ ಸಂಸ್ಥೆಗಳ ಉಪಚುನಾವಣೆ ಸಂಬಂಧ ಯಾವುದೇ ಮಾಹಿತಿಗಳು ಹಾಗೂ ದೂರುಗಳ ನಿರ್ವಹಣೆಗಾಗಿ ನಿಯಂತ್ರಣ ಕೊಠಡಿಗಳನ್ನು ಸ್ಥಾಪಿಸಲಾಗಿದೆ. ಯಾವುದೇ ದೂರು ಅಥವಾ ಮಾಹಿತಿಯನ್ನು ನೀಡಲು ಜಿಲ್ಲಾಧಿಕಾರಿಗಳ ಕಛೇರಿಯ ಕಂಟ್ರೋಲ್ ರೂಂ ನಂ: 1077, ಹುಣಸೂರು ಉಪವಿಭಾಗದ ಉಪವಿಭಾಗಾಧಿಕಾರಿಗಳ ದೂ.ಸಂ: 08222-255325 ಹಾಗೂ ಸರಗೂರು ತಾಲ್ಲೂಕು ಕಛೇರಿಯ ದೂ.ಸಂ: 08228-296100 ಅನ್ನು ಸಂಪರ್ಕಿಸಬಹುದು.

# ಮಗು ಪತ್ತೆ: ಪೋಷಕರ ಸುಳಿವಿಗೆ ಸಹಕರಿಸಲು ಮನವಿ

**ಚಾಮರಾಜನಗರ:** ಗುಂಡ್ಲುಪೇಟೆ ಪಟ್ಟಣದ ಸೂರ್ಯಬೇಕರಿ ಬಳಿ ಸಿರಿಸ್ತಿ ಎಂಬ ಹೆಣ್ಣು ಮಗು ದೊರೆತಿದ್ದು, ಇವರ ಪೋಷಕರ ಪತ್ತೆಗೆ ಸಹಕರಿಸುವಂತೆ ಕೋರಲಾಗಿದೆ.

ಸುಮಾರು 5 ವರ್ಷದ ಸಿರಿಸ್ತಿ ಬಿಹಾರ ಮೂಲದ ಮಗುವಾಗಿದ್ದು, ಕಪ್ಪು ಮೈಬಣ್ಣ, ದುಂಡು ಮುಖ ಹೊಂದಿರುತ್ತಾಳೆ. ಮಗುವು ತಂದೆಯ ಹೆಸರು ವಿನೋದ್ ಚೌಧರಿ, ತಾಯಿಯ ಹೆಸರು ಪೂಲ ಕುಮಾರಿ ಎಂದು ತಿಳಿಸಿದೆ. ಮಗುವಿನ ಪೋಷಕರ ಸುಳಿವು ದೊರೆತಲ್ಲಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಮೊದಲನೇ ಮಹಡಿ ರೂ.ನಂ 127, ಜಿಲ್ಲಾಡಳಿತ ಭವನ, ಚಾಮರಾಜನಗರ-571313, ದೂ.ಸಂ 08226-222354, ಮೊ.ಸಂ 9902956010 ಹಾಗೂ ಮಕ್ಕಳ ಕಲ್ಯಾಣ ಸಮಿತಿ, ಬಾಲಕಿಯರ ಸರ್ಕಾರಿ ಬಾಲ ಮಂದಿರ, ಹೌಸಿಂಗ್ ಬೋರ್ಡ್ ಕಾಲೋನಿ, ಚಾಮರಾಜನಗರ-571313, ದೂ.ಸಂ 08226-225711, ಮೊ.ಸಂ 9483930393 ವಿಳಾಸವನ್ನು ಸಂಪರ್ಕಿಸಬಹುದು. ಮಕ್ಕಳ ಸಹಾಯವಾಣಿ-1098 ಹಾಗೂ ಗುಂಡ್ಲುಪೇಟೆ ಪಟ್ಟಣ ಪೊಲೀಸ್ ಠಾಣೆ ದೂ.ಸಂ 08229-222229, ಮೊ.ಸಂ 9480805651 ಅನ್ನು ಸಂಪರ್ಕಿಸುವಂತೆ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕರ್ನಾಟಕ ಸರ್ಕಾರ

**ಉಪನಿರ್ದೇಶಕರ ಕಚೇರಿ, ಶಾಲಾ ಶಿಕ್ಷಣ ಇಲಾಖೆ, ಚಾಮರಾಜನಗರ ಜಿಲ್ಲೆ**

Office Of Deputy Director Of School Education Department, Chamarajanagara District.
E-mail Id: ddpi.edu.karcmn@nic..in
Telephone No: 082226-222406

**ಸಂಖ್ಯೆ: ಬಿ5/22/ಜಿ.ಪಂ.ಅ/ಸಾ.ಸ.ಬ/1035/2024-25 ದಿನಾಂಕ: 28-10-2024**

**ಟೆಂಡರ್ ಪ್ರಕಟಣೆ**

2024-25ನೇ ಸಾಲಿಗೆ ಜಿಲ್ಲಾ ಪಂಚಾಯತ್ ಕಾರ್ಯಕ್ರಮದಡಿ 7.00 ಲಕ್ಷ ವೆಚ್ಚದಲ್ಲಿ ಆಯ್ದ 14 ಸರ್ಕಾರಿ ಪ್ರೌಢ ಶಾಲೆಗಳಿಗೆ All In One Computer And LCD Projector ಖರೀದಿ ಮಾಡಲು ಅರ್ಹ ಏಜೆನ್ಸಿಯವರಿಂದ ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಟೆಂಡರ್ ಅರ್ಜಿಯನ್ನು ದಿನಾಂಕ 28-10-2024 ರಿಂದ 11-11-2024ರವರೆಗೆ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಉಪನಿರ್ದೇಶಕರು (ಆಡಳಿತ), ಶಾಲಾ ಶಿಕ್ಷಣ ಇಲಾಖೆ, ಚಾಮರಾಜನಗರ ಜಿಲ್ಲೆ ಇಲ್ಲಿ ಕಚೇರಿ ಅವಧಿಯಲ್ಲಿ ವಿಚಾರಿಸಬಹುದಾಗಿದೆ ಹಾಗೂ ದೂರವಾಣಿ ಸಂಖ್ಯೆ: 08226-222406ಗೆ ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿರುತ್ತದೆ.

**ಉಪನಿರ್ದೇಶಕರು (ಆಡಳಿತ)**
**ಶಾಲಾ ಶಿಕ್ಷಣ ಇಲಾಖೆ**
**ಚಾಮರಾಜನಗರ ಜಿಲ್ಲೆ**

**ಸಂ.ವಾಸಾಸಂಇ: ಚಾನಗರ:379:2024-25**

**ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ**

ನಂ. 333/1, 1ನೇ ಮಹಡಿ, ವಿ.ಜಿ. ಕಾಂಪ್ಲೆಕ್ಸ್, ಸೂಲಿಬೆಲೆ ರಸ್ತೆ, ದೇವನಹಳ್ಳಿ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ-562 110.

ಸಂ. ಬಿಐಎಎಪಿಎ/ಟಿಪಿ/ಭೂಉನಿ/10/2024-25/1823 ದಿನಾಂಕ : 30-10-2024

**ಪ್ರಕಟಣೆ**

(ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 69 ರ ತಿದ್ದುಪಡಿ ಕಾಯ್ದೆಯಂತೆ)

ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರದ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆಗೆ ಸರ್ಕಾರದ ಆದೇಶ ಸಂಖ್ಯೆ : ನಅಇ 157 ಬಿಎಂಆರ್ 2005 ದಿನಾಂಕ : 27-01-2009 ಮತ್ತು ತಿದ್ದುಪಡಿ ಆದೇಶ ದಿನಾಂಕ : 29-01-2009 ರಂದು ಅನುಮೋದನೆ ನೀಡಲಾಗಿದ್ದು, ಐದು ವರ್ಷಗಳ ಅವಧಿಯು ಈಗಾಗಲೇ ಪೂರ್ಣಗೊಂಡಿದ್ದು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 69 (2) ರಂತೆ ಭೂಉಪಯೋಗ ರದ್ದಾಗಿರುತ್ತದೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 69 (4) ರನ್ವಯ ಈ ಕೆಳಕಂಡ ಜಮೀನುಗಳನ್ನು ವಸತಿ ಉದ್ದೇಶಕ್ಕಾಗಿ ಭೂಉಪಯೋಗ ನಿಗದಿಪಡಿಸಲು ಅರ್ಜಿದಾರರು ಕೋರಿರುತ್ತಾರೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 69 (3) ರ ಅಡಿಯಲ್ಲಿ ಈ ಕೆಳಕಂಡಂತೆ ಭೂಉಪಯೋಗ ನಿಗದಿಪಡಿಸುವ ಸಂಬಂಧ ಈ ಪ್ರಕಟಣೆ ಪ್ರಕಟವಾದ ದಿನಾಂಕದಿಂದ 15 ದಿನಗಳೊಳಗಾಗಿ ಆಕ್ಷೇಪಣೆಗಳನ್ನು ಲಿಖಿತವಾಗಿ ಸದಸ್ಯ ಕಾರ್ಯದರ್ಶಿಗಳು, ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ ದೇವನಹಳ್ಳಿ ಕಛೇರಿಗೆ ಸಲ್ಲಿಸಲು ತಿಳಿಸಲಾಗಿದೆ. ನಿಗದಿತ ಅವಧಿಯ ನಂತರ ಬರುವ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸುವುದಿಲ್ಲ.

| ಕ್ರ. ಸಂ. | ಅರ್ಜಿದಾರರ ಹೆಸರು | ತಾಲ್ಲೂಕು | ಹೋಬಳಿ | ಗ್ರಾಮದ ವಿವರ | ಸರ್ವೆ ನಂ. | ವಿಸ್ತೀರ್ಣ ಎ-ಗು | ಮಹಾ ಯೋಜನೆಯ ಪ್ರಕಾರ ಭೂ ಉಪಯೋಗ | ಭೂ ಉಪಯೋಗ ನಿಗದಿಪಡಿಸಲು ಕೋರಿರುವ ಉದ್ದೇಶ |
|---|---|---|---|---|---|---|---|---|
| 1 | ಶ್ರೀಮತಿ ಕೆಂಪಮ್ಮ ಎನ್ ಕೋಂ ಲೇ॥ ಆಂಜಿನಪ್ಪ ಕೆ. | ಯಲಹಂಕ | ಜಾಲ | ದೊಡ್ಡಜಾಲ ಅಮಾನಿಕೆರೆ | 99/2 | 0-28.08 ಪೈಕಿ 0-15.04 | ಉದ್ಯಾನವನ | ವಸತಿ |
| 2 | | ಯಲಹಂಕ | ಜಾಲ | ದೊಡ್ಡಜಾಲ ಅಮಾನಿಕೆರೆ | 100 | 0-38 ಪೈಕಿ 0-19 | ಉದ್ಯಾನವನ | ವಸತಿ |
| 3 | ಶ್ರೀ ಡಿ ವಿ ಎನ್ ರಾಜು ಬಿನ್ ಲೇ॥ ಡಿ.ಎನ್. ವೆಂಕಟೇಶ್ ಅಯ್ಯರ್ | ಯಲಹಂಕ | ಜಾಲ | ದೊಡ್ಡಜಾಲ ಅಮಾನಿಕೆರೆ | 99/3 | 0-25 ಪೈಕಿ 0-14 | ಉದ್ಯಾನವನ | ವಸತಿ |
| 4 | ಶ್ರೀಮತಿ ದೊಡ್ಡ ಹನುಮಕ್ಕ ಕೋಂ ಲೇ॥ ಮುನಿಅಣ್ಣಯ್ಯಪ್ಪ | ಯಲಹಂಕ | ಜಾಲ | ದೊಡ್ಡಜಾಲ ಅಮಾನಿಕೆರೆ | 101/5 | 0-17 | ಉದ್ಯಾನವನ | ವಸತಿ |

ಪ್ರಶ್ನಿತ ಜಮೀನುಗಳಲ್ಲಿ ಅನುಮೋದಿತ ಮಹಾಯೋಜನೆಯಂತೆ 24.0 ಮೀ ಅಗಲದ ಪ್ರಸ್ತಾಪಿತ ರಸ್ತೆ ಪಂಕ್ತೀಕರಣ ಇದ್ದು, ಪ್ರಸ್ತಾಪಿತ ರಸ್ತೆ ಪಂಕ್ತೀಕರಣವನ್ನು ಯಥಾವತ್ತಾಗಿ ಕಾಯ್ದಿರಿಸಬೇಕಾಗಿರುತ್ತದೆ.

ಸಹಿ/-
**ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು ಹಾಗೂ ಸದಸ್ಯ ಕಾರ್ಯದರ್ಶಿಗಳು, ಬಿ.ಐ.ಎ.ಎ.ಪಿ.ಎ, ದೇವನಹಳ್ಳಿ**

**ವಾಸಾಸಂಇ/ವಾಪ್ರ/2892/ಆಕಾರ್/2024-25**

# ಕೋಲಾರದಲ್ಲಿ ಹಲ್ಮಿಡಿ ಶಾಸನದ ಪ್ರತಿಕೃತಿ ಅನಾವರಣ

**ಕೋಲಾರ:** ರಾಜ್ಯೋತ್ಸವ ದಿನಾಚರಣೆ ಅಂಗವಾಗಿ ಇಂದು ನಗರದ ಗಾಂಧಿ ವನದಲ್ಲಿ ಮಾನ್ಯ ನಾಗರಾಭಿವೃದ್ಧಿ ಹಾಗೂ ನಗರಯೋಜನೆ ಸಚಿವರು ಮತ್ತು ಕೋಲಾರ ಜಿಲ್ಲಾ ಉಸ್ತುವಾರಿ ಸಚಿವರಾದ ಬಿ. ಎಸ್ ಸುರೇಶ ಅವರು ರಾಷ್ಟ್ರ ಧ್ವಜಾರೋಹಣ ಹಾಗೂ ನಾಡಧ್ವಜಾರೋಹಣ ನೆರವೇರಿಸಿ ಜನತೆಗೆ ಕನ್ನಡ ರಾಜ್ಯೋತ್ಸವದ ಸಂದೇಶವನ್ನು ನೀಡಿದರು. ಕೋಲಾರ ಜಿಲ್ಲೆಯು ಆಂಧ್ರಪ್ರದೇಶ ಮತ್ತು ತಮಿಳುನಾಡಿನ ಗಡಿಪ್ರದೇಶದಿಂದ ಕೂಡಿದೆ ಕನ್ನಡ ತೆಲುಗು ಮತ್ತು ತಮಿಳು ಭಾಷೆಗಳ ಮಿಶ್ರಣ ಇಲ್ಲಿದೆ ನಾವು ಇಲ್ಲಿನ ಮಣ್ಣಿನಲ್ಲಿ ಹುಟ್ಟಿ ನೀರು ಕುಡಿದಿದ್ದೇವೆ ಕನ್ನಡ ಭಾಷೆಗೆ ಮತ್ತು ನೆಲಕ್ಕೆ ಪ್ರೀತಿ, ಗೌರವದಿಂದ ಕಾಣುವಂತೆ ಮಾಡುವುದು ನಮ್ಮ ಜವಾಬ್ದಾರಿಯಾಗಬೇಕು ಎಂದರು. ಕೋಲಾರ ಜಿಲ್ಲೆ ಸೇರಿದಂತೆ ಕರ್ನಾಟಕವು ಸಂಪೂರ್ಣ ಕನ್ನಡಮಯವಾಗಲಿ. ಕನ್ನಡ ನೆಲ, ಜಲ, ಸಂಸ್ಕೃತಿ, ಭಾಷೆ, ಭೂಮಿ ಎಲ್ಲವೂ ಕನ್ನಡಮಯವಾಗಲಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಈಗಾಗಲೇ ಆದೇಶ ಮಾಡಿದ್ದಾರೆ ಮಕ್ಕಳಿಗೆ ಶಿಕ್ಷಣವು ಕನ್ನಡ ಮಾಧ್ಯಮದಲ್ಲಿ ನೀಡಬೇಕು ಪ್ರತಿಯೊಂದು ಭಾಷೆಯನ್ನೂ ಕಲಿಯಲಿ ಆದರೆ ಆಡಳಿತ ಭಾಷೆಯಾಗಿ ಮಾತ್ರ ಕನ್ನಡ ಆಗಿರಲಿ ಎಂದರು. ಈ ಸಂದರ್ಭದಲ್ಲಿ ಸಂಸದ ಎಂ.ಮಲ್ಲೇಶ್ ಬಾಬು ಮಾತನಾಡಿ ಕನ್ನಡ ರಾಜ್ಯೋತ್ಸವು ಹಬ್ಬದ ರೀತಿಯಲ್ಲಿ ಆಚರಣೆ ಮಾಡಬೇಕು ಮುಂದಿನ ವರ್ಷ ಕನಿಷ್ಠ ಒಂದು ತಿಂಗಳ ಕಾಲ ತಯಾರಿ ಮಾಡಿ ಅದ್ದೂರಿಯಾಗಿ ಆಚರಿಸೋಣ ಬಂಗಾರಪೇಟೆ ಕನ್ನಡ ಸಂಘವು



ಪ್ರತಿ ತಿಂಗಳು ಒಂದನೇ ತಾರೀಖು ಕನ್ನಡ ರಾಜ್ಯೋತ್ಸವ ಆಚರಣೆ ಮಾಡತ್ತಿದೆ ಇದರ ಬಗ್ಗೆ ಸರಕಾರದ ಗಮನಕ್ಕೆ ತಂದು ವಿಶೇಷ ಪ್ರೋತ್ಸಾಹ ನೀಡುವಂತೆ ಸಲಹೆ ನೀಡಿದರು. ಕಾರ್ಯಾಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಸಕ ಕೊತ್ತೂರು ಮಂಜುನಾಥ್ ಮಾತನಾಡಿ ಕೋಲಾರ ಜಿಲ್ಲೆಗೆ ತಮ್ಮದೇ ಆದ ಇತಿಹಾಸವಿದೆ ಮಾಸ್ತಿ ವೆಂಕಟೇಶ ಅಯ್ಯಂಗಾರ್ ಡಿವಿಜಿ, ಎಂ.ವಿ ಕೃಷ್ಣಪ್ಪ, ಪಟ್ಟಾಭಿರಾಮನ್, ಚನ್ನಯ್ಯ, ಸೇರಿದಂತೆ ಅನೇಕ ಮಹನೀಯರನ್ನು ಕೊಡುಗೆಯಾಗಿ ನೀಡಿದೆ ಇವತ್ತಿನ ಆಚರಣೆ ನೀರಸವೂ ಅಲ್ಲದ ಅದ್ದೂರಿಯೂ ಅಲ್ಲದ ಸಮಾರಂಭವಾಗಿದೆ. ಮುಂದಿನ ವರ್ಷ ಎಲ್ಲಾ ಜನಪ್ರತಿನಿಧಿಗಳು ಸಂಘ ಸಂಸ್ಥೆಗಳು, ಶಿಕ್ಷಣ ಸಂಸ್ಥೆಗಳು ಸೇರಿದಂತೆ ಸಾರ್ವಜನಿಕರನ್ನು ಆಚರಣಾ ಸಮಿತಿ ಸಭೆಗೆ ಆಹ್ವಾನಿಸಿ ಗಡಿ ಜಿಲ್ಲೆಯಲ್ಲಿ ಅದ್ದೂರಿಯಾಗಿ ರಾಜ್ಯಕ್ಕೆ ಮಾದರಿಯಾದ ರಾಜ್ಯೋತ್ಸವ ಮಾಡೋಣ ಎಂದರು ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಅನಿಲ್ ಕುಮಾರ್ ಮಾತನಾಡಿ ಕನ್ನಡ ರಾಜ್ಯೋತ್ಸವವನ್ನು ಕೇವಲ ಕರ್ನಾಟಕ ರಾಜ್ಯಕ್ಕೆ ಸೀಮಿತವಾಗಿಲ್ಲ ದೇಶಾದ್ಯಂತ ಸೇರಿದಂತೆ ವಿಶ್ವದಲ್ಲಿ ಸಹ ಆಚರಣೆ ಮಾಡುವ ದೊಡ್ಡ ಹಬ್ಬವಾಗಿದೆ ಯುಪಿಎ ಸರ್ಕಾರದಲ್ಲಿ ಕನ್ನಡಕ್ಕೆ ಶಾಸ್ತ್ರೀಯ ಸ್ಥಾನಮಾನವನ್ನು ನೀಡಲಾಗಿದೆ ಕನ್ನಡ ಭಾಷೆ ಉಳಿಸಲು ಪ್ರತಿಯೊಬ್ಬರೂ ಮುಂದಾಗಬೇಕು ಎಂದರು. ಜಿಲ್ಲಾಡಳಿತ ಭವನ ಆವರಣದಲ್ಲಿ ಹಲ್ಮಿಡಿ ಶಾಸನ ಪ್ರತಿಕೃತಿ ಅನಾವರಣ ಮಾಡಿದ ಉಸ್ತುವಾರಿ ಸಚಿವರು ವೇದಿಕೆ ಕಾರ್ಯಕ್ರಮಕ್ಕೂ ಮುನ್ನ ನಗರದ ಹೊರವಲಯದಲ್ಲಿರುವ ಜಿಲ್ಲಾಡಳಿತ ಭವನದ ಆವರಣದಲ್ಲಿ ಕನ್ನಡದ ಮೊಟ್ಟಮೊದಲ ಹಲ್ಮಿಡಿ ಶಾಸನದ ಪ್ರತಿಕೃತಿಯನ್ನು ನಗರಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು ಹಾಗೂ ಕೋಲಾರ ಜಿಲ್ಲಾ ಉಸ್ತುವಾರಿ ಸಚಿವರರಾದ ಬಿ. ಎಸ್ ಸುರೇಶ್ ಅವರು ಉದ್ಘಾಟಿಸಿ, ಪುಷ್ಪಾರ್ಚನೆ ನೆರವೇರಿಸಿದರು. ''ಕರ್ನಾಟಕ ಸಂಭ್ರಮ-50'ರ ಹಿನ್ನೆಲೆಯಲ್ಲಿ ಎಲ್ಲ ಜಿಲ್ಲಾ ಕೇಂದ್ರಗಳಲ್ಲಿ ಹಲ್ಮಿಡಿ ಶಾಸನದ ಪ್ರತಿಕೃತಿಯನ್ನು ಸ್ಥಾಪಿಸುವ ಮೂಲಕ ಈ ಸವಿನೆನಪನ್ನು ಶಾಶ್ವತವಾಗಿಡುವುದು ಯೋಜನೆಯ ಉದ್ದೇಶವಾಗಿದೆ. ಕನ್ನಡದ ಮೊದಲ ಶಿಲಾ ಶಾಸನ ಬೇಲೂರು ತಾಲೂಕಿನ ಹಲ್ಮಿಡಿಯಲ್ಲಿ 1936ರಲ್ಲಿ ಪತ್ತೆಯಾದ ಶಾಸನವನ್ನು ಕನ್ನಡ ಲಿಪಿಯಲ್ಲಿ ಲಭ್ಯವಾದ ಮೊಟ್ಟ ಮೊದಲ ಶಾಸನವೆಂದು ಪರಿಗಣಿಸಲಾಗಿದೆ. 16 ಸಾಲುಗಳ ಬರಹ ಇದರಲ್ಲಿತ್ತು. ಇದು ಕ್ರಿ.ಶಕ 450ರ ಸುಮಾರಿನದ್ದು ಎಂದು ಅಂದಾಜಿಸಲಾಗಿದೆ. ಇದರ ಬಗ್ಗೆ ಸಾಕಷ್ಟು ಅಧ್ಯಯನ-ಅವಲೋಕನಗಳು ನಡೆದಿದೆ. ಹೀಗಾಗಿ ಈ ಶಿಲಾ ಶಾಸನದ ಮಹತ್ವವನ್ನು ಶಾಶ್ವತವಾಗಿ ಜನರ ನೆನಪಿನಲ್ಲಿ ಉಳಿಯುವಂತೆ ಮಾಡುವ ನಿಟ್ಟಿನಲ್ಲಿ ಎಲ್ಲ ಜಿಲ್ಲಾ ಕೇಂದ್ರದಲ್ಲಿ ಪ್ರತಿಕೃತಿ ಸ್ವರೂಪದಲ್ಲಿ ಇರಿಸಲಾಗಿದೆ. ಸಮಾರಂಭದಲ್ಲಿ ವಿಧಾನ ಪರಿಷತ್ ಸದಸ್ಯ ಇಂಚರ ಗೋವಿಂದರಾಜು, ನಗರಸಭೆ ಅಧ್ಯಕ್ಷೆ ಲಕ್ಷ್ಮೀದೇವಮ್ಮ, ಉಪಾಧ್ಯಕ್ಷೆ ಸಂಗೀತಾ, ಮಾಜಿ ಜಿಪಂ ಅಧ್ಯಕ್ಷ ಸಿ.ಎಸ್. ವೆಂಕಟೇಶ್, ಗ್ಯಾರಂಟಿ ಅನುಷ್ಠಾನ ಅಧ್ಯಕ್ಷ ವೈ ಶಿವಕುಮಾರ್, ಕೋಮುಲ್ ನಿರ್ದೇಶಕ ಷಂಷೀರ್, ಜಿಲ್ಲಾಧಿಕಾರಿ ಅಕ್ರಂ ಪಾಷ , ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ನಿಖಿಲ್, ಡಿಎಫ್ಒ ಏಡುಕೊಂಡಲು, ಕಸಾಪ ಅಧ್ಯಕ್ಷ ಗೋಪಾಲಗೌಡ ಇದ್ದರು.

## ಹೊರ ರಾಜ್ಯದವರಿಗೆ ಕನ್ನಡ ಕಲಿಸಿ

**ಬೆಂಗಳೂರು:** ಹೊರರಾಜ್ಯದವರಿಗೆ ಕನ್ನಡ ಕಲಿಸಬೇಕು ಮತ್ತು ಅವರೊಂದಿಗೆ ಕನ್ನಡದಲ್ಲೇ ವ್ಯವಹರಿಸಿದಾಗ ಮಾತ್ರ ಕನ್ನಡ ಭಾಷೆಯ ಸಂರಕ್ಷಣೆ ಸಾಧ್ಯ ಎಂದು ಕೆನರಾ ಬ್ಯಾಂಕ್ ನ ಡೆಪ್ಯುಟಿ ಜನರಲ್ ಮ್ಯಾನೇಜರ್ ಬಿ ಪಾರ್ಶ್ವನಾಥ ರವರು ಕರೆ ನೀಡಿದರು. ಪಾರ್ಶ್ವನಾಥರವರು ಬೆಂಗಳೂರಿನ ಅಕ್ಷಯನಗರದ ವಿಂಡ್ಸರ್ ಟ್ರೋಯಿಕ ಅಪಾರ್ಟ್ ಮೆಂಟ್ ಕನ್ನಡ ಬಳಗ ದವರು ಕನ್ನಡ ಆಯೋಜಿಸಿದ್ದ ಧ್ವಜಾರೋಹಣ ಮತ್ತು ನಾಡು ಗೀತೆ ನಿತ್ಯೋತ್ಸವ ಸಮಾರಂಭದಲ್ಲಿ ಮಾತನಾಡುತ್ತಿದ್ದರು. ಇತರೆ ಭಾಷೆಗಳನ್ನು ಕಲಿಯುವುದು ತಪ್ಪೇನಿಲ್ಲ ಆದರೆ ನಮ್ಮ ನಾಡಿನಲ್ಲಿ ಕನ್ನಡೇತರರಿಗೆ ಕನ್ನಡ ಕಲಿಸದಿರುವುದು ಅತಿ ದೊಡ್ಡ ತಪ್ಪು ಎಂದರು. ಧ್ವಜಾರೋಹಣದ ನಂತರ ನಾಡು-ಗೀತೆ ನಿತ್ಯೋತ್ಸವ ಕಾರ್ಯಕ್ರಮಗಳು ಜರುಗಿದವು. ಈ ಕಾರ್ಯಕ್ರಮದಲ್ಲಿ ದಯಾನಂದ ಶೆಟ್ಟಿ, ಭಟ್ ಜೀ, ವಿಕಾಸ್ ರವರು ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದರು. ಮಧು ಪಾರ್ಶ್ವನಾಥ್ ರವರು ಕಾರ್ಯಕ್ರಮವನ್ನು ನಿರ್ವಹಿಸಿದರು.






ರೈತ ವಿರೋಧಿ ಕಾಂಗ್ರೆಸ್ ಸರ್ಕಾರದ ಲ್ಯಾಂಡ್ ಜಿಹಾದ್ ವಕ್ಫ್ ಅಕ್ರಮವನ್ನು ವಿರೋಧಿಸಿ ಬಿಜೆಪಿ ಕೇಂದ್ರ ಘಟಕದ ವತಿಯಿಂದ ಇಂದು ಕೆಂಗೇರಿ ತಾಲ್ಲೂಕು ಕಛೇರಿ ಎದುರು ಬೃಹತ್ ಪ್ರತಿಭಟನೆ ನಡೆಸಿದರು. ಪ್ರತಿಭಟನೆಯಲ್ಲಿ ಮಾಜಿ ಉಪ ಮುಖ್ಯಮಂತ್ರಿ ಡಾಕ್ಟರ್ ಅಶ್ವಥ್ ನಾರಾಯಣ್. ಮಾಜಿ ಸಚಿವ ಹಾಗೂ ಶಾಸಕ ಕೆ ಗೋಪಾಲಯ್ಯ. ಶಾಸಕರಾದ ಗರುಡಾಚಾರ್ .ರವಿ ಸುಬ್ರಮಣ್ಯ. ಬಿಜೆಪಿ ಉತ್ತರ ಘಟಕದ ಜಿಲ್ಲಾ ಅಧ್ಯಕ್ಷ ಎಸ್ ಹರೀಶ್ ಸೇರಿದಂತೆ ನೂರಾರು ಪಕ್ಷದ ಮುಖಂಡರುಗಳು ಹಾಗೂ ಕಾರ್ಯಕರ್ತರು ಪಾಲ್ಗೊಂಡಿದ್ದರು.

## ಪ್ರವೇಶಾತಿಗೆ ಅರ್ಜಿ ಆಹ್ವಾನ

**ಬೆಂಗಳೂರು:** ಬೆಂಗಳೂರು ನಗರ ವಿಶ್ವವಿದ್ಯಾನಿಲಯದಲ್ಲಿ ಸ್ನಾತಕೋತ್ತರ ಕೋರ್ಸುಗಳಿಗೆ ಪ್ರವೇಶಾತಿಯಲ್ಲಿ ಉಳಿದಿರುವ ಸೀಟುಗಳಿಗೆ ಎರಡನೇ ಸುತ್ತಿನ ಪ್ರವೇಶಾತಿಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿಗಳನ್ನು ವಿಶ್ವವಿದ್ಯಾನಿಲಯದ ಜಾಲತಾಣ: http://bcu.ac.inದಿಂದ ಡೌನ್‌ಲೋಡ್ ಮಾಡಿಕೊಂಡು ಸಂಬಂಧಪಟ್ಟ ಸ್ನಾತಕೋತ್ತರ ವಿಭಾಗಕ್ಕೆ ನವೆಂಬರ್ 04 ಒಳಗಾಗಿ ಹಾಗೂ 2.ದಂಡ ಶುಲ್ಕ ಸಹಿತ ಅರ್ಜಿಗಳನ್ನು ನವೆಂಬರ್ 05ರ ಒಳಗಾಗಿ ಸಲ್ಲಿಸುವುದು. ಅರ್ಹತಾ ಪಟ್ಟಿ ಮತ್ತು ಸಮಾಲೋಚನೆಯು ನವೆಂಬರ್ 07 ರಂದು ನಡೆಯಲಿರುವುದು. ಅರ್ಹತೆ, ಸೀಟ್ ಮ್ಯಾಟ್ರಿಕ್ ಮತ್ತು ಕೋರ್ಸುಗಳ ಶುಲ್ಕದ ಹೆಚ್ಚಿನ ಮಾಹಿತಿಗಾಗಿ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಜಾಲತಾಣ: http://bcu.ac.inನ್ನು ಸಂಪರ್ಕಿಸಿ.



ಕರ್ನಾಟಕ ರಾಜ್ಯೋತ್ಸವದ ಶುಭ ಸಂದರ್ಭದಂದು ಬೆಂಗಳೂರಿನ ಬ್ಯಾಂಕರ್ಸ್ ಕನ್ನಡಿಗರ ಬಳಗದವರು ಶಾಂತಿನಗರದ ಅಕ್ಕಿತಿಮ್ಮನಹಳ್ಳಿ ಸರಕಾರಿ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯ ಗ್ರಂಥಾಲಯಕ್ಕೆ ಕನ್ನಡ ಪುಸ್ತಕಗಳನ್ನು ಉಡುಗೊರೆಯಾಗಿ ನೀಡಿದರು. ಬಳಗದ ಸದಸ್ಯರಾದ ಎಂ ವೆಂಕಟೇಶ ಶೇಷಾದ್ರಿ, ಕೆ ಜಿ ಸಂಪತ್ ಕುಮಾರ್, ನಾಗೇಶ್ ಮತ್ತು ಶಾಲೆಯ ಮುಖ್ಯೋಪಧ್ಯಾಯಿನಿ ಹೆಚ್ ವಿ ಸುಮಂಗಲ ರವರು ಉಪಸ್ಥಿತರಿದ್ದರು.

# ಮಂಡ್ಯದ ಹೃದಯ ಭಾಗದಲ್ಲಿ ಅಂಬರೀಶ್ ಪ್ರತಿಮೆಯಾಗಲಿ

**ಮಂಡ್ಯ:** ಜಗತ್ತಿನ ಚಲನಚಿತ್ರ ಲೋಕದಲ್ಲಿ ಬೇಕಾದಷ್ಟು ಮಂದಿ ಕಲಾವಿದರಿರಬಹುದು, ಆದರೆ ಮನುಷ್ಯತ್ವವುಳ್ಳವರು ಬಹಳ ವಿರಳವಾಗಿದ್ದು, ಇಂಥ ಮಾನವೀಯ ಗುಣದ ಅಪರೂಪದ ಮೇರು ಕಲಾವಿದರಾಗಿ ಮಂಡ್ಯದ ಕೀರ್ತಿಯನ್ನು ಜಗದ್ವಿಖ್ಯಾತಿ ಮಾಡಿ ಹೋಗಿರುವ ಮಂಡ್ಯ ನೆಲದ ಹೃದಯವಂತ ಕಲಾವಿದ ಅಂಬರೀಶ್ ಅವರ ಪ್ರತಿಮೆಯನ್ನು ಮಂಡ್ಯದ ಹೃದಯ ಭಾಗದಲ್ಲಿರುವ ಜಿಲ್ಲಾಧಿಕಾರಿಗಳ ಕಚೇರಿ ಮುಂಭಾಗ ನಿರ್ಮಿಸಿ ಸಮಸ್ತ ಕನ್ನಡಿಗರ ಅಭಿಮಾನವನ್ನು ಹಾಗೂ ಮಂಡ್ಯದ ಮಗನ ಘನತೆಯನ್ನು ಎತ್ತಿ ಹಿಡಿಯಬೇಕೆಂದು ಮಂಡ್ಯ ಜಿಲ್ಲಾಡಳಿತವನ್ನು ಅಖಿಲ ಭಾರತ ಅಂಬರೀಶ್ ಅಭಿಮಾನಿಗಳ ಸಂಘದ ಸಂಸ್ಥಾಪಕ ಅಧ್ಯಕ್ಷರೂ ಆದ ಸಾಹಿತಿ ಬನ್ನೂರು ಕೆ.ರಾಜು ಮನವಿ ಮಾಡಿದರು.

ಜಿಲ್ಲೆಯ ನ್ಯಾಯ ನೀತಿ ಧರ್ಮ ಅಂಬಿ ಸೇನಾ ಸಮಿತಿಯಿಂದ ಮಂಡ್ಯದ ಸಂಜಯ ಚಿತ್ರ ಮಂದಿರ ವೃತ್ತದಲ್ಲಿ ಏರ್ಪಡಿಸಿದ್ದ ಸುವರ್ಣ ಕರ್ನಾಟಕ ರಾಜ್ಯೋತ್ಸವ ಹಾಗು ಅಂಬಿ ನೆನಪಿನೋತ್ಸವ ಸಮಾರಂಭವನ್ನು ನಾಡ ದೇವಿ ಶ್ರೀ ಭುವನೇಶ್ವರಿ ಮತ್ತು ನಾಡಿನ ಅಭಿಮಾನದ ಕಲಾವಿದ ಅಂಬರೀಶ್ ಅವರ ಅಲಂಕೃತ ಭಾವಚಿತ್ರಗಳಿಗೆ ಪುಷ್ಪಾರ್ಚನೆ ಮಾಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಅಂಬರೀಶ್ ದ್ವಿಶತಚಿತ್ರಗಳ ಅಭಿನಯದ ದಾಖಲೆಯ ಮಹಾನ್ ನಟರಾಗಿದ್ದುದರ ಜೊತೆಗೆ ರಾಜಕೀಯ ಮುತ್ಸದ್ಧಿಯೂ ಆಗಿ ಮಂಡ್ಯ ಲೋಕಸಭಾ ಕ್ಷೇತ್ರದಿಂದ ಸತತ ಮೂರು ಬಾರಿ ಸಂಸದರಾಗಿ ಅಭೂತಪೂರ್ವ ಹ್ಯಾಟ್ರಿಕ್ ಗೆಲುವಿನೊಡನೆ ಆಯ್ಕೆಯಾಗಿ ದಾಖಲೆಯ ಇತಿಹಾಸ ನಿರ್ಮಿಸಿ ಕೇಂದ್ರ ಮತ್ತು ರಾಜ್ಯ ಸಚಿವರಾಗಿಯೂ ಸೇವೆ ಸಲ್ಲಿಸಿ ನಾಡಿನ ಅದರಲ್ಲೂ ವಿಶೇಷವಾಗಿ ಮಂಡ್ಯದ ಸಮಗ್ರ ಅಭಿವೃದ್ಧಿಗೆ ತಮ್ಮನ್ನು ಅರ್ಪಿಸಿಕೊಂಡು ಅವರು ಬದುಕಿರುವ ತನಕವೂ ಮಂಡ್ಯದ ಜೀವವಾಗಿದ್ದರೆಂದರು.

ಇಂತಹ ಮೇರು ವ್ಯಕ್ತಿತ್ವ ಹಾಗೂ ಹೃದಯವಂತಿಕೆಯ ಅಂಬರೀಶ್ ದ್ವಿಶತಚಿತ್ರಗಳ ಅಭಿನಯದ ದಾಖಲೆಯ ಮಹಾನ್ ನಟರಾಗಿದ್ದುದರ ಜೊತೆಗೆ ಮಂಡ್ಯ ಎಂದರೆ, ಮಂಡ್ಯದ ಜನರೆಂದರೆ, ಮಂಡ್ಯದ ನೀರು, ಗಾಳಿ,



ಮಣ್ಣೆಂದರೆ ಪಂಚಪ್ರಾಣವಾಗಿ ಪ್ರೀತಿಸುತ್ತಾ, ಇದು ನನ್ನೂರು ಎಲ್ಲಾರು ನನ್ನೋರು, ಇರೋರು ಇಲ್ಲದೋರು ಎಲ್ಲಾರು ನನ್ನ ಬಂಧು ಬಾಂಧವರು ಎನ್ನುತ್ತಾ ತಮ್ಮ ಜನ್ಮಭೂಮಿ ಮಂಡ್ಯ ನೆಲವನ್ನು ಕರ್ಮ ಭೂಮಿ ಮಾಡಿಕೊಂಡು ನಾಡಿನ ಕಲಾ ಸೇವೆಯ ಜೊತೆ ಜೊತೆಯಲಿ ಮಂಡ್ಯ ಜನರ ಸೇವೆ ಮಾಡುತ್ತಾ ತಮ್ಮ ಬದುಕನ್ನು ಸಾರ್ಥಕಪಡಿಸಿಕೊಂಡವರು. ಮಂಡ್ಯದ ಮಣ್ಣಿನ ಸಹಜ ಗುಣವೆಂಬಂತೆ ಮತ್ತೊಬ್ಬರಿಗಾಗಿ ಮಿಡಿಯುತ್ತಿದ್ದ, ತುಡಿಯುತ್ತಿದ್ದ ಇಂತಹ ಬಣ್ಣದ ಲೋಕದ ಬಂಗಾರದಂಥ ಕಲಾವಿದ, ರಾಜಕೀಯ ರಂಗದ ನಿಸ್ವಾರ್ಥ ಜೀವಿ ಜಗತ್ತಿನಲ್ಲಿ ಮತ್ತೊಬ್ಬರು ಸಿಗಲಾರರು. ಈ ಮಹಾ ಚೇತನ ಮಂಡ್ಯದ ಮಣ್ಣಿನದೆನ್ನುವುದೇ ಒಂದು ಹೆಮ್ಮೆ. ಇವರ ಗೌರವದ ಸ್ಮರಣಾರ್ಥ ನಾಡಿನ ಬಹುತೇಕ ಕಡೆ ವೃತ್ತಗಳು, ರಸ್ತೆಗಳು, ಪುತ್ಥಳಿಗಳು ಇದ್ದರೂ ಕೂಡ ಅವರ ತವರು ಮಂಡ್ಯ ನಗರದಲ್ಲಿ ಕನಿಷ್ಠ ಒಂದು ರಸ್ತೆಯೂ ಇಲ್ಲದಿರುವುದು ಇಡೀ ಮಂಡ್ಯದ ಜನರಿಗೆ ಅಪಮಾನಕರವೆಂದ ಬನ್ನೂರು ರಾಜು ಅವರು, ಈಗಲಾದರೂ ಜಿಲ್ಲಾಡಳಿತ ಎಚ್ಚೆತ್ತುಕೊಂಡು ಅಂಬರೀಶ್ ಅವರ ಪ್ರತಿಮೆಯನ್ನು ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ನಿರ್ಮಿಸಿ ಮಂಡ್ಯಕ್ಕೆ ಗೌರವ ತರುವ ಕೆಲಸ ಮಾಡಬೇಕೆಂದು ಹೇಳಿದರು.

**ಸಾಹಿತ್ಯ ಸಮ್ಮೇಳನದಲ್ಲಿ ಅಂಬಿಗೊಂದು ವಿಶೇಷ ಗೌರವವಿರಲಿ:** ಅಧ್ಯಕ್ಷತೆ ವಹಿಸಿ ಮಾತನಾಡಿದ ನ್ಯಾಯ ನೀತಿ ಧರ್ಮ ಅಂಬರೀಶ್ ಸೇನಾ ಸಮಿತಿಯ ರಾಜ್ಯಾಧ್ಯಕ್ಷ ರೆಬಲ್ ರಮೇಶ್ ಗೌಡ ಅವರು, ಮುಂದಿನ ತಿಂಗಳು ಮಂಡ್ಯದಲ್ಲಿ ನಡೆಯಲಿರುವ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಪ್ರಚಾರ ರಥದಲ್ಲಿ ಅಂಬರೀಶ್ ಭಾವಚಿತ್ರ ಅಳವಡಿಸಬೇಕು ಹಾಗು ಸಮ್ಮೇಳನದ ವೇದಿಕೆ ಅಥವಾ ದ್ವಾರವೊಂದಕ್ಕೆ ಅವರ ಹೆಸರನ್ನಿಡಬೇಕು ಹಾಗು ಅಂಬರೀಶ್ ಬದುಕು,ಸಾಧನೆ, ಸಿದ್ಧಿಯನ್ನು ಕುರಿತಂತೆ ಸಾಹಿತ್ಯ ಗೋಷ್ಠಿಯೊಂದನ್ನು ಏರ್ಪಡಿಸಿ ಅಂಬಿಗೆ ಗೌರವ ತರಬೇಕೆಂದು ಹೇಳಿದ ಅವರು, ಅಂಬರೀಶ್ ಹೆಸರಿನಲ್ಲಿಯೇ ಮಂಡ್ಯದ ಘನತೆ ಮತ್ತು ಗೌರವವಿದೆ ಎಂದು ತಿಳಿಸಿದರು. ಸಮಿತಿಯ ಪ್ರಧಾನ ಕಾರ್ಯದರ್ಶಿ ಹೆಚ್. ಎನ್. ಸ್ವಾಮಿ, ಉಪಾಧ್ಯಕ್ಷ ಕುಮಾರ್ ಗೌಡ, ಕಾರ್ಯಕಾರಿ ಸಮಿತಿಯ ಕಾಚೋಹಳ್ಳಿ ನಂಜೇಗೌಡ, ಕೆಇಬಿ ಕಂಟ್ರಾಕ್ಟರ್ ಎಂ.ಎಸ್. ಸಿದ್ದರಾಜು, ರಾಜು ಹನಗನಹಳ್ಳಿ, ಮಂಡ್ಯ ಶಿವರಾಜ್ ಗೌಡ, ಶಶಿಕುಮಾರ್, ಜೂನಿಯರ್ ಅಂಬರೀಶ್ ಎಂದೇ ಖ್ಯಾತರಾದ ಮಂಡ್ಯ ಶಶಿಕುಮಾರ್ ಮತ್ತು ಸಿದ್ದರಾಜು, ಮಂಡ್ಯ ಉಮೇಶ್ ಡಿ.ಎಸ್. ವರದರಾಜು ಮುಂತಾದವರಿದ್ದರು. ಇದೇ ವೇಳೆ ಅಂಬರೀಶ್ ಸ್ಮರಣಾರ್ಥ ಕಾಚೋಹಳ್ಳಿ ನಂಜೇಗೌಡ ಮತ್ತು ರಾಜು ಹನಗನಹಳ್ಳಿ ಹಾಗೂ ಮಂಡ್ಯ ಉಮೇಶ್ ಅವರುಗಳಿಗೆ ಅಂಬರೀಶ್ ಹೆಸರಿನಲ್ಲಿ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು.

## 2024-25ನೇ ಸಾಲಿನ ಕೃಷಿ ಪ್ರಶಸ್ತಿಗೆ ಅರ್ಜಿ ಆಹ್ವಾನ

**ಬೆಂಗಳೂರು:** 2024-25ನೇ ಸಾಲಿನ ಹಿಂಗಾರು ಹಂಗಾಮಿನಲ್ಲಿ ಕೃಷಿ ಪ್ರಶಸ್ತಿಯಡಿ ಬೆಳೆ ಸ್ಪರ್ಧೆಗೆ ಭಾಗವಹಿಸಲಿಚ್ಚಿಸುವ ರೈತ ಮತ್ತು ರೈತ ಮಹಿಳೆಯರಿಂದ ಪ್ರತ್ಯೇಕವಾಗಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಎಲ್ಲಾ ಮಟ್ಟಗಳಿಗೂ ರಾಜ್ಯ / ಜಿಲ್ಲಾ / ತಾಲ್ಲೂಕು ಮಟ್ಟದ ಕೃಷಿ ಪ್ರಶಸ್ತಿಗೆ ಅನ್ವಯಿಸುವಂತೆ ನಿಗದಿತ ನಮೂನೆಯಲ್ಲಿ ಒಂದೇ ಅರ್ಜಿಯನ್ನು ಸಲ್ಲಿಸಬೇಕು. ಅಸಕ್ತ ರೈತ ಮತ್ತು ರೈತ ಮಹಿಳೆಯರು ಪ್ರತ್ಯೇಕವಾಗಿ ಕೃಷಿ ಇಲಾಖೆಯ K-KISAN Portal ನಲ್ಲಿ ಅಗತ್ಯ ದಾಖಲಾತಿಗಳೊಂದಿಗೆ ತಮ್ಮ FID (Fruits Identification) ಸಂಖ್ಯೆಯನ್ನು ಬಳಸಿಕೊಂಡು Citizen Login ಅಥವಾ RSK Login ಮೂಲಕ ಹತ್ತಿರದ ರೈತ ಸಂಪರ್ಕ ಕೇಂದ್ರ, / ಸಾರ್ವಜನಿಕ ಸೇವಾ ಕೇಂದ್ರದ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿರುತ್ತದೆ. 2024-25ನೇ ಸಾಲಿನ ಹಿಂಗಾರು ಹಂಗಾಮಿನಲ್ಲಿ ಕೃಷಿ ಪ್ರಶಸ್ತಿಯಡಿ ಬೆಳೆ ಸ್ಪರ್ಧೆಗೆ ಅರ್ಜಿ ಸಲ್ಲಿಸಲು ನವೆಂಬರ್ 30 ಕೊನೆಯ ದಿನಾಂಕ ಆಗಿರುತ್ತದೆ. ಸ್ಪರ್ಧಿಸಬಹುದಾದ ಬೆಳೆಗಳ ವಿವರಗಳು, ಅರ್ಜಿ ನಮೂನೆ ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿ ಅಥವಾ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರನ್ನು ಸಂಪರ್ಕಿಸಲು ತಿಳಿಸಿದೆ.

## ವ್ಯಕ್ತಿಯ ಪತ್ತೆಗೆ ಮನವಿ

**ಚಿಕ್ಕಬಳ್ಳಾಪುರ:** ಚಿಂತಾಮಣಿ ತಾಲ್ಲೂಕಿನ ಯಗವಮಿಂಡಿಗಲ್ ಗ್ರಾಮದ ನಿವಾಸಿ 65 ವರ್ಷದ ಎಂ.ಸಿ ನಾರಾಯಣಸ್ವಾಮಿ ರವರು ಜಿರಾಯ್ತಿ ಜೀವನ ಮಾಡಿಕೊಂಡಿದ್ದು, ಜುಲೈ 7 ರಂದು ಮನೆಯಿಂದ ಹೊರಗೆ ಹೋದವರು ಮತ್ತೆ ಮನೆಗೆ ವಾಪಾಸ್ಸು ಬಾರದೇ ನಾಪತ್ತೆಯಾಗಿದ್ದಾರೆ. ಚಹರೆ: ವಯಸ್ಸು 65 ವರ್ಷ, ಗೋಧಿ ಮೈ ಬಣ್ಣ, ಸಾಧಾರಣ ಮೈ ಕಟ್ಟು, ದುಂಡು ಮುಖ, 5.1 ಅಡಿ ಎತ್ತರ, ನೀಲಿ ಬಣ್ಣದ ಗೆರೆಗಳಿರುವ ಶರ್ಟ್, ಕಡು ನೀಲಿ ಬಣ್ಣದ ನಿಕ್ಕರ್, ಹಳದಿ ಬಣ್ಣದ ಟವಲ್ ಧರಿಸಿದ್ದು, ಕನ್ನಡ ಮತ್ತು ತೆಲುಗು ಮಾತನಾಡುತ್ತಾರೆ.ನಾಪತ್ತೆಯಾಗಿರುವ ಬಗ್ಗೆ ಕೆಂಚಾರ್ಲಹಳ್ಳಿ ಪೊಲೀಸ್ ಠಾಣೆಯಲ್ಲಿ ಅವರ ಹೆಂಡತಿ ದೂರು ನೀಡಿ ನಾಪತ್ತೆ ಆಗಿರುವ ಎಂ.ಸಿ ನಾರಾಯಣಸ್ವಾಮಿ ಅವರನ್ನು ಪತ್ತೆಮಾಡಿಕೊಡಬೇಕೆಂದು ಮನವಿ ಮಾಡಿದ್ದಾರೆ. ಈ ವ್ಯಕ್ತಿಯ ಬಗ್ಗೆ ಸುಳಿವು ಸಿಕ್ಕಲ್ಲಿ ಚಿಂತಾಮಣಿ ತಾಲ್ಲೂಕಿನ ಕೆಂಚಾರ್ಲಹಳ್ಳಿ ಪೊಲೀಸ್ ಠಾಣೆಯನ್ನು ಸಂಪರ್ಕಿಸಬಹುದೆಂದು ಪೊಲೀಸ್ ಸಬ್‌ಇನ್ಸ್ ಪೆಕ್ಟರ್ ಶಿವಕುಮಾರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯುತ್ ತಂತಿಗೆ ಆನೆ ಸಿಲುಕಿ ಸಾವು

**ಚಾಮರಾಜನಗರ:** ಚಾಮರಾಜನಗರ ಜಿಲ್ಲೆಯ ಕೊಳ್ಳೇಗಾಲ ತಾಲೂಕಿನ ಕೊತ್ತನೂರು ಸಮೀಪ ಚಪ್ಪದ ಹಳ್ಳ ಬಯಲು ಕಾಡಿಗೆ ಹೊಂದಿಕೊಂಡಂತೆ ಇರುವ ಜಮೀನಿನ ಬಳಿ ವಿದ್ಯುತ್ ತಂತಿಗೆ ಆನೆ ಸಿಲುಕಿ ಮೃತಪಟ್ಟಿರುವ ಘಟನೆ ಜರುಗಿದೆ. ಚಾಮರಾಜನಗರ ಜಿಲ್ಲೆಯ ಕೊಳ್ಳೇಗಾಲ ತಾಲೂಕಿನ ಕೊತ್ತನೂರುಗ್ರಾಮ ನಿವಾಸಿ ಖ್ಯಾತಯ್ಯ ಇವರ ಜಮೀನಿಗೆ ಹೊಂದಿಕೊಂಡಂತೆ ಅರಣ್ಯಪ್ರದೇಶದಲ್ಲಿ ಪಂಪ್ ಸೆಟ್ ಗೆ ಎಳೆಯಲಾಗಿದ್ದ ಬಿಳಿಯವೈರು ಆನೆಯ ಸೊಂಡಲಿಗೆ ಸಿಲುಕಿ ಸಾವನ್ನಪ್ಪಿರಬಹುದು ಎಂದು ಶಂಕಿ ಸಲಾಗಿದೆ. ಗ್ರಾಮಸ್ಥರಿಂದ ವಿಷಯ ತಿಳಿದ ಕಾವೇರಿ ವನ್ಯಜೀವಿ ವಿಭಾಗದ ವಲಯ ಅರಣ್ಯಾಧಿಕಾರಿ ಸುಂದರ್ ಮತ್ತು ಸಿಬ್ಬಂದಿಗಳು ಸ್ಥಳಕ್ಕೆ ಆಗಮಿಸಿ ಆನೆ ಮೃತಪಟ್ಟಿರುವುದನ್ನು ಖಾತರಿಪಡಿಸಿಕೊಂಡಿದ್ದಾರೆ.ನಂತರ ಸ್ಥಳ ಪರಿಶೀಲನೆ ನಡೆಸಿದ ಅರಣ್ಯ ಇಲಾಖೆ ಅಧಿಕಾರಿಗಳು ಹಾಗೂ ಪಶು ವೈದ್ಯಾಧಿಕಾರಿಗಳು ಆನೆ ಸಾವಿನ ಬಗ್ಗೆ ಮಾಹಿತಿಪಡೆದರು.





ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಮರು ಚುನಾವಣೆ ನಡೆಯುತ್ತಿರುವ ಹಿನ್ನೆಲೆಯಲ್ಲಿ ಬಿಜೆಪಿ ಜೆಡಿಎಸ್ ಮೈತ್ರಿ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ಪರ ಪ್ರಚಾರದಲ್ಲಿ ಇಂದು ತೊಡಗಿದ್ದ ಮಹಾಲಕ್ಷ್ಮಿ ಲೇಔಟ್ ವಿಧಾನಸಭಾ ಕ್ಷೇತ್ರದ ಶಾಸಕರಾದ ಗೋಪಾಲಯ್ಯನವರು ಚನ್ನಪಟ್ಟಣ ತಾಲೂಕಿನ ಅರಳಾಪುರ ಗ್ರಾಮದ ವಯಸ್ಕ ಮಹಿಳೆಯರ ಯೋಗಕ್ಷೇಮ ವಿಚಾರಿಸಿದರು.

## ಎಸ್‌ಸಿ ಎಸ್‌ಟಿ ಕಲ್ಯಾಣ ಸಮಿತಿಯ ಅಧ್ಯಯನ ಪ್ರವಾಸ

**ಬೆಂಗಳೂರು:** ಕರ್ನಾಟಕ ವಿಧಾನಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯು, ಸಮಿತಿಯ ಅಧ್ಯಕ್ಷರಾದ ಪಿ.ಎಂ. ನರೇಂದ್ರಸ್ವಾಮಿಯವರ ಅಧ್ಯಕ್ಷತೆಯಲ್ಲಿ ಸಮಿತಿಯ ಅಧ್ಯಕ್ಷರು ಸೇರಿದಂತೆ 20 ಜನ ಸದಸ್ಯರು 2024ನೇ ನವೆಂಬರ್ 14 ರಿಂದ 16ರ ವರೆಗೆ ಬೆಳಗಾವಿ ವಿಭಾಗದ ಜಿಲ್ಲೆಗಳಾದ ಬೆಳಗಾವಿ, ಧಾರವಾಡ, ಗದಗ ಬಾಗಲಕೋಟೆ ಹಾಗೂ ವಿಜಯಪುರ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಳ್ಳಲಿದೆ.

ಸದರಿ ಸಮಿತಿಯು ಈ ಜಿಲ್ಲೆಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಮುದಾಯದವರ ಅಭಿವೃದ್ಧಿಗಾಗಿ ಹಮ್ಮಿಕೊಂಡಿರುವ ಕಾರ್ಯಕ್ರಮಗಳು ಹಾಗೂ ಯೋಜನೆಗಳ ಪ್ರಗತಿ ಕುರಿತಂತೆ ಆಯಾ ಜಿಲ್ಲೆಗಳ ಜಿಲ್ಲಾ ಪಂಚಾಯತ್ / ಜಿಲ್ಲಾಧಿಕಾರಿ ಕಛೇರಿಯ ಸಭಾಂಗಣದಲ್ಲಿ ಸಭೆ ಸೇರಿ, ಪ್ರಗತಿ ಪರಿಶೀಲನಾ ಕುರಿತು ಚರ್ಚೆ ನಡೆಸಲಿರುತ್ತದೆ. ಸಮಿತಿಯ ಅಧ್ಯಕ್ಷರು ಸೇರಿದಂತೆ ಒಟ್ಟು 20 ಜನ ಸದಸ್ಯರುಗಳು ಹಾಗೂ ಸಮಿತಿಗೆ ಸಹಕರಿಸಲು ವಿಧಾನಸಭೆ ಸಚಿವಾಲಯದ ಅಧಿಕಾರಿ/ನೌಕರರುಗಳು ಅಧ್ಯಯನ ಪ್ರವಾಸದಲ್ಲಿರುತ್ತಾರೆ. ಸಮಿತಿಯು ಬೆಳಗಾವಿ, ಧಾರವಾಡ, ಗದಗ ಬಾಗಲಕೋಟೆ ಹಾಗೂ ವಿಜಯಪುರ ಜಿಲ್ಲೆಗಳಲ್ಲಿರುವ ಎಲ್ಲಾ ಇಲಾಖೆಗಳಲ್ಲಿ ಕಳೆದ ಮೂರು ವರ್ಷಗಳಲ್ಲಿ ಎಸ್.ಸಿ.ಎಸ್.ಪಿ / ಟಿ.ಎಸ್.ಪಿ ಯೋಜನೆಗಳಡಿಯಲ್ಲಿ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಸಮುದಾಯದವರ ಅಭಿವೃದ್ಧಿ/ ಕಲ್ಯಾಣ/ಏಳಿಗೆಗಾಗಿ ಹಮ್ಮಿಕೊಂಡಿರುವ ಕಾರ್ಯಕ್ರಮಗಳು/ವಿವಿಧ ಯೋಜನೆಗಳ ಅನುಷ್ಠಾನದ ಚರ್ಚೆ ನಡೆಸಲಿದೆ ಎಂದು ಕರ್ನಾಟಕ ವಿಧಾನ ಸಭೆಯ ಕಾರ್ಯದರ್ಶಿಗಳಾದ ಶ್ರೀಮತಿ ಎಂ.ಕೆ. ವಿಶಾಲಾಕ್ಷಿ ತಿಳಿಸಿದ್ದಾರೆ.




ಕೋಲಾರದ ಭಾರತೀಯ ಜನತಾಪಾರ್ಟಿ ಜಿಲ್ಲಾ ಕಚೇರಿಯಲ್ಲಿ ರಾಜ್ಯ ಕಾನೂನು ಪ್ರಕೋಷ್ಟದ ಅಧ್ಯಕ್ಷರು ಮತ್ತು ಸದಸ್ಯರ ನೇತೃತ್ವದಲ್ಲಿ ಜಿಲ್ಲಾ ಮಟ್ಟದ ಪದಾಧಿಕಾರಿಗಳ ಸಭೆ ನಡೆಯಿತು .

# ನಟ ವಿಶ್ವಪ್ರಕಾಶ ಟಿ ಮಲಗೊಂಡಗೆ ರಾಜ್ಯೋತ್ಸವ ಪ್ರಶಸ್ತಿ

**ಆಲಮೇಲ:** ಕರ್ನಾಟಕ ಸಂಭ್ರಮ 50 ರ ಸವಿನೆನಪಿನಲ್ಲಿ ಕರ್ನಾಟಕ ಸರ್ಕಾರ ಆಲಮೇಲ ತಾಲೂಕಾಡಳಿತದಿಂದ ನಟ ನಿರ್ದೇಶಕ ವಿಶ್ವಪ್ರಕಾಶ ಟಿ ಮಲಗೊಂಡ ಅವರನ್ನು ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪತ್ರ ನೀಡಿ ತಹಶೀಲ್ದಾರ ಕೆ.ವಿಜಯಕುಮಾರ ಸನ್ಮಾನಿಸಿದರು.

ಶುಕ್ರವಾರ ತಹಶೀಲ್ದಾರ ಕಚೇರಿ ಆವರಣದಲ್ಲಿ ಹಮ್ಮಿಕೊಂಡಿದ್ದ 2024ನೇ ಸಾಲಿನ ಕರ್ನಾಟಕ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಚಿತ್ರರಂಗದ ಕ್ಷೇತ್ರದ ಸಾಧನೆಗಾಗಿ ಈ ಪ್ರಶಸ್ತಿ ಪತ್ರ ನೀಡಿ ಸಾಧಕರೆಂದು ಗುರುತಿಸಿ ಗೌರವಿಸಿದರು.

ಈ ಸಂದರ್ಭದಲ್ಲಿ ಪಿಎಸ್‌ಐ ಅರವಿಂದ ಅಂಗಡಿ, ಪಟ್ಟಣ ಪಂಚಾಯಿತಿ ಅಧ್ಯಕ್ಷ ಸಾಧಿಕ ಸುಂಬಡ, ತಾ.ಪಂ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಎ.ಎಂ ಪಠಾಣ, ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಸುರೇಶ ನಾಯಕ, ತಾಲೂಕು ನೌಕರರ ಸಂಘದ ತಾಲೂಕಾಧ್ಯಕ್ಷ ರವಿ ಬಿರಾದಾರ, ಕಸಾಪ ತಾಲೂಕಾಧ್ಯಕ್ಷ ಶಿವಶರಣ ಗುಂದಗಿ, ಕರ್ನಾಟಕ ನವ ನಿರ್ಮಾಣ ಸೇನೆಯ ಜಿಲ್ಲಾಧ್ಯಕ್ಷ ಭೀಮಾಶಂಕರ ಕೋಟಾರಗಸ್ತಿ ವೇದಿಕೆ ಮೇಲಿದ್ದರು.

ಕಾರ್ಯಕ್ರಮದಲ್ಲಿ ಶಿರಸ್ತೇದಾರ ಪಿ ಎಸ್ ಮೂಕಿಹಾಳ, ಪ್ರದಸ ಎನ್ ಪಿ ದಶವಂತ, ಕಂದಾಯ ನಿರೀಕ್ಷಕ ಎಮ್ ಎ ಅತ್ತಾರ, ಗ್ರಾಮ ಆಡಳಿತ ಅಧಿಕಾರಿಗಳಾದ ಎಮ್ ಕೆ ಪೂಜಾರಿ, ಅನೀಲ ಅವಜಿ, ಭೀಮಣ್ಣ ಜೇರಟಗಿ, ವಿನೋದ ಭೀಸೆ, ಡಾ.ಸಮೀರ ಹಾದಿಮನಿ, ಸೇರಿದಂತೆ ಅನೇಕರಿದ್ದರು. ರವಿ ಹೊಸಮನಿ ಸ್ವಾಗತಿಸಿದರು.



ಕಸಾಪ ಗೌರವ ಕಾರ್ಯದರ್ಶಿ ಶ್ರೀಶೈಲ ಮಠಪತಿ ನಿರೂಪಿಸಿದರು. ಅಪ್ಪು ಶೆಟ್ಟಿ ವಂದಿಸಿದರು.

ವಿಶ್ವಪ್ರಕಾಶ ಟಿ ಮಲಗೊಂಡ ಮೂಲತಃ ವಿಜಯಪುರ ಜಿಲ್ಲೆ ಆಲಮೇಲ ತಾಲೂಕಿನ ಗುಂದಗಿ ಗ್ರಾಮದವರಾಗಿದ್ದು, ಹಲವಾರು

ವರ್ಷಗಳಿಂದ ಸಿನಿಮಾ ಕ್ಷೇತ್ರದಲ್ಲಿ ಸೇವೆಸಲ್ಲಿಸುತ್ತ, ಕನ್ನಡ ಚಿತ್ರರಂಗದ ಖ್ಯಾತ ನಿರ್ದೇಶಕ ನಾಗತಿಹಳ್ಳಿ ಚಂದ್ರಶೇಖರ್ ಅವರ ಟೆಂಟ್ ಸಿನಿಮಾ ಸಂಸ್ಥೆಯಲ್ಲಿ ನಟನೆಯ ತರಬೇತಿ ಪಡೆದು, ಸುಮಾರು ಇಪ್ಪತ್ತು (20) ಚಿತ್ರಗಳಲ್ಲಿ ಅಭಿನಯಿಸಿದ್ದಾರೆ.

ವಿಶೇಷವಾಗಿ ವಿಜಯಪುರ ಜಿಲ್ಲೆಯಲ್ಲಿಯೇ ಬಾಲ ನಟನಾಗಿ ಅಭಿನಯಿಸಿದ್ದು ಇವರು ಒಬ್ಬರೇ. ಇವರ ಸಾಧನೆಗೆ ಅತ್ಯುತ್ತಮ ನಟ ಎನ್ನುವ ಪ್ರಶಸ್ತಿ ಕೂಡ ಲಭಿಸಿದೆ. ಸಾಮಾಜಿಕ ಕಳಕಳಿ ಭಾವೈಕ್ಯತೆಯ ಸಂದೇಶ ಸಾರುವ ಹಲವು ಚಿತ್ರಗಳಲ್ಲಿ ನಾಯಕನಟನಾಗಿ ಅಭಿನಯಿಸಿದ್ದಾರೆ.

# ಹಿರಿಯ ಜಾನಪದ ಕಲಾವಿದರಿಗೆ ಪ್ರಶಸ್ತಿ

**ಬೆಂಗಳೂರು:** 1980 ರಿಂದ ಕಾರ್ಯನಿರ್ವಹಿಸುತ್ತಿರುವ ಕರ್ನಾಟಕ ಜಾನಪದ ಅಕಾಡೆಮಿಯ ಯೋಜನೆಗಳಲ್ಲಿ ಜಾನಪದ ಕಲೆಗಳಿಗೆ ತನ್ನನ್ನು ತಾನು ಅರ್ಪಿಸಿಕೊಂಡಿರುವ ಜಾನಪದ ಕಲಾವಿದರಿಗೆ, ಜಾನಪದ ಕ್ಷೇತ್ರ ತಜ್ಞರಿಗೆ ವಾರ್ಷಿಕ ಪ್ರಶಸ್ತಿಗಳನ್ನು ನೀಡಿ ಗೌರವಿಸುವುದು ಬಹು ಮುಖ್ಯ ಭಾಗ. ಈ ನಿಟ್ಟಿನಲ್ಲಿ ಕರ್ನಾಟಕ ಜಾನಪದ ಅಕಾಡೆಮಿಯು 1980 ರಿಂದ 2022 ರ ಸಾಲಿನ ವರೆಗೆ 1044 ಜಾನಪದ ಕಲಾವಿದರು, 111 ವಿದ್ವಾಂಸರು ಸೇರಿದಂತೆ ಅಕಾಡೆಮಿಯು ಒಟ್ಟಾರೆ 1155 ಗೌರವ ಪ್ರಶಸ್ತಿಗಳನ್ನು ನೀಡಿ ಸನ್ಮಾನಿಸಿದೆ ಎಂದು ಕರ್ನಾಟಕ ಜಾನಪದ ಅಕಾಡೆಮಿ ಅಧ್ಯಕ್ಷರಾದ ಗೊಲ್ಲಹಳ್ಳಿ ಶಿವಪ್ರಸಾದ್ ತಿಳಿಸಿದರು. ಇಂದು ಬೆಂಗಳೂರಿನ ಜೆ.ಸಿ. ರಸ್ತೆಯಲ್ಲಿರುವ ಕನ್ನಡ ಭವನದ ಅಂತರಂಗ ಸಭಾಂಗಣದಲ್ಲಿ ಮಾಧ್ಯಮದವರನ್ನು ಉದ್ದೇಶಿಸಿ ಮಾತನಾಡಿದ ಅವರು 2023 ನೇ ಸಾಲಿನಲ್ಲಿ ರಾಜ್ಯದ 30 ಜಿಲ್ಲೆಗಳಿಂದ 30 ಹಿರಿಯ ಜಾನಪದ ಕಲಾವಿದರಿಗೆ ವಾರ್ಷಿಕ ಗೌರವ ಪ್ರಶಸ್ತಿ, ಇಬ್ಬರು ಜಾನಪದ ತಜ್ಞರಿಗೆ ತಜ್ಞ ಪ್ರಶಸ್ತಿ, 2022 ನೇ ಸಾಲಿನ 03 ಮಂದಿಗೆ ಪುಸ್ತಕ ಬಹುಮಾನ ಹಾಗೂ 2023ನೇ ಸಾಲಿನ 02 ಮಂದಿಗೆ ಪುಸ್ತಕ ಬಹುಮಾನವನ್ನು ನೀಡಲಾಗುವುದು ಎಂದು ತಿಳಿಸಿದರು.

ಏಕತಾರಿ, ತಂಬೂರಿ ಪದಗಳ ವಿಭಾಗದಿಂದ ಬೆಂಗಳೂರಿನ ಕೆ.ಎಂ. ರಾಮಯ್ಯ, ಸೋಬಾನೆ ಪದಗಳ ವಿಭಾಗದಿಂದ ಬೆಂಗಳೂರು ಗ್ರಾಮಾಂತರದ ಶ್ರೀಮತಿ ಓಬಮ್ಮ, ಪಟ ಕುಣಿತದಿಂದ ರಾಮನಗರದ ರಂಗಯ್ಯ, ಕೀಲು ಕುದುರೆ ಕುಣಿತದಿಂದ ಕೋಲಾರದ ತೋಪಣ್ಣ ಮಂಚಂಡಹಳ್ಳಿ, ತಮಟೆ ವಾದನದಿಂದ ಚಿಕ್ಕಬಳ್ಳಾಪುರದ ದೊಡ್ಡ ಕೂರ್ಲಪ್ಪ, ಜಾನಪದ ಹಾಡುಗಾರ್ತಿ ವಿಭಾಗದಿಂದ ತುಮಕೂರಿನ ಶ್ರೀಮತಿ ಕದರಮ್ಮ ಕಥನ ಕಾವ್ಯದಿಂದ ದಾವಣಗೆರೆಯ ಶ್ರೀಮತಿ ಕಾಟಮ್ಮ, ಮಹಾಕಾವ್ಯ ವಿಭಾಗದಿಂದ ಚಿತ್ರದುರ್ಗದ ಶ್ರೀಮತಿ ಸಿರಿಯಮ್ಮ, ಡೊಳ್ಳು ಕುಣಿತದಿಂದ ಶಿವಮೊಗ್ಗದ ಟೀಕಪ್ಪ, ಊರ್ಟಿ ಕೋಟ್ ಆಟದಿಂದ ಕೊಡಗಿನ ಶ್ರೀಮತಿ ದೇವಕಿ ಕೆ.ಸಿ, ತಂಬೂರಿ ಪದದಿಂದ ಮಂಡ್ಯದ ಗುರುಬಸವಯ್ಯ, ತತ್ವಪದ ಗಾಯನ ಮತ್ತು ಏಕತಾರಿ ತಂಬೂರಿಗಳ ತಯಾರಕರಾದ ಹಾಸನದ ವೀರಭದ್ರಯ್ಯ ಕರಡಿಗೆ ವಾದ್ಯ ಕಲಾವಿದರಾದ ಚಿಕ್ಕಮಗಳೂರಿನ ನಾಗರಾಜಪ್ಪ ವೈ.ಪಿ., ತಂಬೂರಿ ಪದದಿಂದ ಮೈಸೂರಿನ ಗುರುಸಿದ್ಧಯ್ಯ, ಜನಪದ ಸೂಲಗಿತ್ತಿಯಾದ ಉಡುಪಿಯ ಶ್ರೀಮತಿ ಅಪ್ಪಿ, ನಾಟಿವೈದ್ಯರಾದ ದಕ್ಷಿಣ ಕನ್ನಡದ ಶ್ರೀಮತಿ ಲೀಲಾವತಿ, ಸೋಬಾನೆ ಪದ ಅಂಥ ಕಲಾವಿದರಾದ ಚಾಮರಾಜನಗರದ ಶ್ರೀಮತಿ ಗೌರಮ್ಮ, ಡೊಳ್ಳು ಕುಣಿತದಿಂದ ಬೆಳಗಾವಿಯ ಶಿವನಪ್ಪ ಚಂದರಗಿ, ಗೊಂದಳಿ ಪದದಿಂದ ಬಾಗಲಕೋಟೆಯ ಹನಮಂತ ವೆಂಕಪ್ಪ ಸುಗತೇಕರ ತತ್ವಪದದಿಂದ ವಿಜಯಪುರದ ಶ್ರೀಮತಿ ಇಮಾಂಬಿ ಇಮಾಮಸಾಬ ದೊಡ್ಡಮನಿ, ಗೀಗೀ ಪದದಿಂದ ಗದಗದ ಬಸಪ್ಪ ಹಡಗಲಿ, ಜನಪದ ಮಹಾ ಕಾವ್ಯಗಳಿಂದ ಬಳ್ಳಾರಿಯ ದಳವಾಯಿ ಚಿತ್ತಪ್ಪ, ಸೋಬಾನೆ ಮತ್ತು ಸಂಪ್ರದಾಯದ ಪದದಿಂದ ಹಾವೇರಿಯ ಶ್ರೀಮತಿ ಸಾವಕ್ಕಾ ಓಲೇಕಾರ, ಕಾರಿನ್ ಮನೆ ಕುಣಿತ ಮತ್ತು ಹೌಂದೇರಾಯನ ಕುಣಿತದಿಂದ ಉತ್ತರ ಕನ್ನಡದ ಈರಯ್ಯ ಮೊಗೇರ, ಸಂಪ್ರದಾಯದ ಪದದಿಂದ ಕಲಬುರ್ಗಿಯ ಶ್ರೀಮತಿ ಅಕ್ಕಮ್ಮ, ಶಹನಾಯಿ ವಾದದಿಂದ ಬೀದರ್‌ನ ಏಸಪ್ಪಾ, ಬುರ್ರಕಥೆಯಿಂದ ರಾಯಚೂರಿನ ಶ್ರೀಮತಿ ಶಾಂತಮ್ಮ, ಡೊಳ್ಳಿನ ಹಾಡು ಮತ್ತು ಕುಣಿತದಿಂದ ಕೊಪ್ಪಳದ ರೇವಣಪ್ಪ, ಹಂತಿ ಪದದಿಂದ ಧಾರವಾಡದ ಡಾ. ರಾಮಪ್ಪ ಬಸವಂತಪ್ಪ ಮೂಲಗಿ, ಭಜನೆಯಿಂದ ಯಾದಗಿರಿಯ ಅಮರಯ್ಯಸ್ವಾಮಿ ಹಿರೇಮಠ ಅವರುಗಳು 2023ನೇ ಸಾಲಿನ ಜಾನಪದ ಅಕಾಡೆಮಿ ಪ್ರಶಸ್ತಿ ಪುರಸ್ಕೃತರಾಗಿದ್ದಾರೆ. ಮತ್ತು 2023ನೇ ಸಾಲಿನ ಡಾ.ಜೀ.ಶಂ.ಪ ತಜ್ಞ ಪ್ರಶಸ್ತಿಗೆ ದಕ್ಷಿಣ ಕನ್ನಡದ ಡಾ. ಕೆ.ಚಿನ್ನಪ್ಪಗೌಡ, ಮತ್ತು ಡಾ.ಬಿ.ಎಸ್. ಗದ್ದಗಿಮಠ ತಜ್ಞ ಪ್ರಶಸ್ತಿಗೆ ವಿಜಯನಗರದ ಡಾ. ಮಂಜುನಾಥ ಬೇವಿನಕಟ್ಟಿ ಅವರು ಪುರಸ್ಕೃತರಾಗಿದ್ದಾರೆ.

ಸಂಜೆ ಟಿಪ್ಸ್

# ಕ್ಯಾಸ್ಟ್ರೋಲ್ ಇಂಡಿಯಾ ವ್ಯವಸ್ಥಾಪಕ ನಿರ್ದೇಶಕರ ನೇಮಕ

ಲೂಬ್ರಿಕಂಟ್‌ಗಳ ಖ್ಯಾತ ತಯಾರಕರಾದ ಕ್ಯಾಸ್ಟ್ರೋಲ್ ಇಂಡಿಯಾ ಲಿಮಿಟೆಡ್ ತನ್ನ ಹೊಸ ವ್ಯವಸ್ಥಾಪಕ ನಿರ್ದೇಶಕರಾಗಿ ಕೇದಾರ್ ಲೆಲೆ ಅವರನ್ನು ನೇಮಕ ಮಾಡುವುದಾಗಿ ಘೋಷಿಸಿದೆ. ಕೇದಾರ್ ಅವರು ಹಿಂದೂಸ್ತಾನ್ ಯೂನಿಲಿವರ್ ಲಿಮಿಟೆಡ್ ನಲ್ಲಿನ ಎರಡು ದಶಕಗಳ ಸುದೀರ್ಘ ವೃತ್ತಿಜೀವನದ ನಂತರ ಕ್ಯಾಸ್ಟ್ರೋಲ್ ಇಂಡಿಯಾವನ್ನು ಸೇರಲಿದ್ದಾರೆ, ಈ ಮೊದಲು ಅವರು ಅಲ್ಲಿಯ ಕಂಪನಿಯ ಕಾರ್ಯನಿರ್ವಾಹಕ ನಿರ್ದೇಶಕರಾಗಿ ಸೇವೆ ಸಲ್ಲಿಸಿದ್ದರು ಹಾಗೂ ದಕ್ಷಿಣ ಏಷ್ಯಾದ ಮಾರಾಟಗಳು ಮತ್ತು ಗ್ರಾಹಕ ಅಭಿವೃದ್ಧಿಯ ಜವಾಬ್ದಾರಿಯನ್ನು ವಹಿಸಿದ್ದರು. ಉತ್ತಮ- ಕಾರ್ಯನಿರ್ವಹಣೆಯ ತಂಡಗಳನ್ನು ಮುನ್ನಡೆಸುವಲ್ಲಿನ ಅವರ ಆಳವಾದ ಪರಿಣತಿ, ಅಭಿವೃದ್ಧಿಯ ಚಾಲನೆ ಮತ್ತು ನಾವೀನ್ಯತೆಯನ್ನು ಉತ್ತೇಜಿಸುವ ಮೂಲಕ, ವಿಕಸನಗೊಳ್ಳುತ್ತಿರುವ ಆಟೋಮೋಟಿವ್ ಮತ್ತು ಲೂಬ್ರಿಕಂಟ್ ಉದ್ಯಮದಲ್ಲಿ ಕ್ಯಾಸ್ಟ್ರೋಲ್ ಇಂಡಿಯಾದ ಭವಿಷ್ಯವನ್ನು ಮುನ್ನಡೆಸುವಲ್ಲಿ ಪ್ರಮುಖ ಪಾತ್ರವನ್ನು ವಹಿಸಲು ಕೇದಾರ್ ಸಿದ್ಧರಾಗಿದ್ದಾರೆ. ನೇಮಕಾತಿಯ ಕುರಿತು ಪ್ರತಿಕ್ರಿಯಿಸಿದ ಕ್ಯಾಸ್ಟ್ರೋಲ್ ಇಂಡಿಯಾ ಲಿಮಿಟೆಡ್ನ ಅಧ್ಯಕ್ಷ ರಾಕೇಶ್ ಮಖಿಜಾ ಹೀಗೆಂದರು, ಕೇದಾರ್ ಅವರನ್ನು ಕ್ಯಾಸ್ಟ್ರೋಲ್ ಇಂಡಿಯಾಕ್ಕೆ ಸ್ವಾಗತಿಸಲು ನಮಗೆ ಅತ್ಯಂತ ಸಂತೋಷವಾಗಿದೆ. ಅಭಿವೃದ್ಧಿಯನ್ನು ಚಾಲನೆ ಮಾಡುವ ಮತ್ತು ಸಂಕೀರ್ಣ ಮಾರುಕಟ್ಟೆಗಳಲ್ಲಿ ದೊಡ್ಡ ತಂಡಗಳನ್ನು ಮುನ್ನಡೆಸುವಲ್ಲಿನ ಅವರ ಅಪಾರ ಅನುಭವವು ಕ್ಯಾಸ್ಟ್ರೋಲ್ ಇಂಡಿಯಾವನ್ನು ಮುನ್ನಡೆಸುವಲ್ಲಿ ಅವರನ್ನು ಅತ್ಯುತ್ತಮ ಆಯ್ಕೆಯನ್ನಾಗಿಸುತ್ತದೆ. ಸಂದೀಪ್ ಅವರ ಕಳೆದ ಹಲವು ವರ್ಷಗಳ ಅಸಾಧಾರಣ ನಾಯಕತ್ವಕ್ಕಾಗಿ ಈ ಸಂದರ್ಭದಲ್ಲಿ ಅವರಿಗೆ ಧನ್ಯವಾದ ಹೇಳಲು ಬಯಸುತ್ತೇನೆ. ಮಾರುಕಟ್ಟೆಯಲ್ಲಿ ನಮ್ಮ ಸ್ಥಾನವನ್ನು ಬಲಪಡಿಸುವಲ್ಲಿ ಅವರ ಕೊಡುಗೆಗಳು ಅಮೂಲ್ಯವಾಗಿವೆ ಮತ್ತು ಅವರ ಈ ಹೊಸ ಜಾಗತಿಕ ಪಾತ್ರದಲ್ಲಿ ಅವರು ಯಶಸ್ವಿಯಾಗಲೆಂದು ಬಯಸುತ್ತೇವೆ. ಡಿಡಿಬಿ-ಮುದ್ರಾದಲ್ಲಿ ಜಾಹೀರಾತಿನಲ್ಲಿ ಅವರಿಗೆ ಆರಂಭಿಕ ವೃತ್ತಿಪರ ಅವಕಾಶವನ್ನು ನೀಡುವ ಮೂಲಕ ಕೇದಾರ್ ಅವರವೃತ್ತಿಜೀವನವನ್ನು ರೂಪಿಸುವಲ್ಲಿ ಬೆಂಗಳೂರು ಪ್ರಮುಖ ಪಾತ್ರ ವಹಿಸಿದೆ. ಕೇದಾರ್ ಅವರು ಹಿಂದೂಸ್ತಾನ್ ಯೂನಿಲಿವರ್ ಲಿಮಿಟೆಡ್ ನಲ್ಲಿ ಬೆಂಗಳೂರಿನ ಐಸ್ ಕ್ರೀಮ್ ವಿಭಾಗ - ಕ್ವಾಲಿಟಿ ವಾಲ್ಸ್ನ ಮಾರ್ಕೆಟಿಂಗ್ ಮ್ಯಾನೇಜರ್ ಆಗಿದ್ದಾಗ, ನಗರ ಮತ್ತು ಗ್ರಾಮೀಣ ಭಾರತದಾದ್ಯಂತ ಮಾರುಕಟ್ಟೆ ವ್ಯಾಪ್ತಿಯನ್ನು ವಿಸ್ತರಿಸಲು ಪರಿಣಾಮಕಾರಿ ಉಪಕ್ರಮಗಳನ್ನು ಮುನ್ನಡೆಸಿದ್ದರು.

# ತೆಂಗಿನಕಾಯಿ ದೋಸೆ

## ಪಾಕ ಶಾಲೆ



### ಬೇಕಿರುವ ಸಾಮಗ್ರಿ

2 ಕಪ್ ಅಕ್ಕಿ, ರುಚಿಗೆ ತಕ್ಕಷ್ಟು ಉಪ್ಪು, ಸ್ವಲ್ಪ ಎಣ್ಣೆ, ಅರ್ಧ ಚಮಚ ಮೆಂತ್ಯ, ಅರ್ಧ ಚಿಪ್ಪು ತೆಂಗಿನ ಕಾಯಿ.

### ಮಾಡುವ ವಿಧಾನ

ಎರಡು ಕಪ್ ಅಕ್ಕಿಯನ್ನು ಚೆನ್ನಾಗಿ ತೊಳೆದು 3 ಗಂಟೆಗಳ ಕಾಲ ನೆನೆಸಿಡಿ, ಅರ್ಧ ಚಮಚ ಮೆಂತ್ಯ ಮತ್ತು ತೆಂಗಿನ ತುರಿಯನ್ನು ಪ್ರತ್ಯೇಕವಾಗಿ ನೆನೆಸಿ. ತೆಂಗಿನ ತುರಿ, ಮೆಂತ್ಯ ಮತ್ತು ಅಕ್ಕಿಯನ್ನು ಹಾಕಿ ನುಣ್ಣಗೆ ರುಬ್ಬಿಕೊಳ್ಳಿ. ದೋಸೆ ಹಿಟ್ಟಿನ ಹದಕ್ಕೆ ತಯಾರಿಸಿಕೊಳ್ಳಿ. ಉಪ್ಪು ಹಾಕಿ ಕಲಸಿ. ಈ ಹಿಟ್ಟನ್ನು 2-3 ಗಂಟೆಗಳ ಕಾಲ ಹಾಗೇ ಬಿಡಿ. ನಂತರ ನಾನ್ ಸ್ಟಿಕ್ ಕಾವಲಿ ಮೇಲೆ ದೋಸೆ ಹುಯ್ಯಿರಿ. ಗರಿ ಗರಿ ಆಗುವ ವರೆಗೂ ಬೇಯಿಸಿ. ಕಾಯಿ ಚಟ್ನಿ ಹಾಗೂ ಸಾಂಬಾರ್ ಜೊತೆಗೆ ದೋಸೆಯನ್ನು ಸವಿಯಿರಿ.

# ನಟಿ ತ್ರಿಷಾಗೆ ದುಬಾರಿ ಫ್ಲಾಟ್ ಉಡುಗೊರೆ



ವೃತ್ತಿಬದುಕಿನ ಆರಂಭದಿಂದ ಕೊಂಚ ನಿಧಾನವಾದರೂ ಈಗ ಕೆರಿಯರ್ ನಲ್ಲಿ ಜೆಟ್ ಸ್ಪೀಡ್ ನಲ್ಲಿ ಮುನ್ನುಗ್ಗುತ್ತಿದ್ದಾರೆ ನಟಿ ತ್ರಿಶಾ.. ಅವರು ಸತತವಾಗಿ ಸೂಪರ್ ಹಿಟ್ ಸಿನಿಮಾಗಳನ್ನು ಮಾಡಿದ್ದಾರೆ. ಇತ್ತೀಚೆಗೆ ಚಿರಂಜೀವಿ ವಿಶ್ವಂಭರ ಚಿತ್ರದಲ್ಲಿ ನಾಯಕಿಯಾಗಿ ನಟಿಸುತ್ತಿದ್ದಾರೆ. ಈ ಚಿತ್ರ ಮೇ 9 ರಂದು ಬಿಡುಗಡೆಯಾಗಲಿದೆ. ತಮಿಳಿನಲ್ಲಿ ಎರಡು ಮತ್ತು ಮಲಯಾಳಂನಲ್ಲಿ ಒಂದು ಚಿತ್ರ ಮಾಡುತ್ತಿದ್ದಾರೆ.

ತಮಿಳಿನಲ್ಲಿ ಸ್ಟಾರ್ ಹೀರೋ ಆಗಿರುವ ವಿಜಯ್ ದಳಪತಿ ಮೇಲಿನ ಅಭಿಮಾನದಿಂದ ಸಿನಿಮಾವೊಂದರಲ್ಲಿ ಐಟಂ ಸಾಂಗ್ ಮಾಡಿದ್ದಾರೆ. ಏಕೆಂದರೇ ವಾಸ್ತವವಾಗಿ ತ್ರಿಶಾ ಸ್ಪೇಷಲ್ ಸಾಂಗ್ಗಳಲ್ಲಿ ನಟಿಸಲು ಆಸಕ್ತಿ ಹೊಂದಿಲ್ಲ. ಸಿನಿಮಾ ಸರಿಯಾಗಿ ಓಡದಿದ್ದರೂ ಈ ಹಾಡು ಸಿನಿಮಾದ ಹೈಲೈಟ್ ಆಯಿತು. ನಾಲ್ಕನೇ ವಯಸ್ಸಿನಲ್ಲಿ ಹೊಸ ನಾಯಕಿಯರೊಂದಿಗೆ ಪೈಪೋಟಿ ನಡೆಸುತ್ತಿರುವ ತ್ರಿಷಾ ಈ ಹಿಂದೆ ಉದ್ಯಮಿಯನ್ನು ಮದುವೆಯಾಗಲು ಬಯಸಿದ್ದರು, ಆದರೆ ನಿಶ್ಚಿತಾರ್ಥದ ನಂತರ ಅನಿರೀಕ್ಷಿತ ಕಾರಣಗಳಿಂದ ಸಂಬಂಧವನ್ನೇ ಮುರಿದುಕೊಂಡರು.. ಆ ನಂತರ ನಟಿ ಯಾರನ್ನೂ ಮದುವೆಯಾಗಲಿಲ್ಲ. ತನ್ನ ಮೊದಲ ಮನೆಯನ್ನು ತೆಲುಗು ನಟ ಭಾನುಚಂದರ್ಗೆ ಮಾರಿ ಹೊಸ ಮನೆಗೆ ಶಿಫ್ಟ್ ಆದರು..

ವಿಜಯ್ ಮತ್ತು ತ್ರಿಷಾ ನಡುವೆ ಸಂಬಂಧವಿದೆ ಎಂಬ ಸುದ್ದಿ ಇದೆ. ಇತ್ತೀಚೆಗಷ್ಟೇ ತಮಿಳು ಮಾಧ್ಯಮಗಳಲ್ಲಿ ರಾಜಕೀಯ ನಾಯಕರೊಬ್ಬರು ತ್ರಿಷಾಗೆ ದುಬಾರಿ ಫ್ಲಾಟ್ ಅನ್ನು ಉಡುಗೊರೆಯಾಗಿ ಬರೆದಿದ್ದಾರೆ ಎಂದು ವರದಿಯಾಗಿದೆ. ಆತ ಯಾರು ಎಂಬ ಬಗ್ಗೆ ಯಾರಿಗೂ ಸ್ಪಷ್ಟತೆ ಇಲ್ಲ. ನಾಯಕ ವಿಜಯ್ ಇತ್ತೀಚೆಗೆ ರಾಜಕೀಯ ಪಕ್ಷ ಸ್ಥಾಪಿಸಿ ಬಹಿರಂಗ ಸಭೆ ನಡೆಸಿದ್ದರು. ಈಗ ಅವರ ಪಕ್ಷವು ಎಐಎಡಿಎಂಕೆಯನ್ನು ತನ್ನ ಗುರಿಯಾಗಿ ಆರಿಸಿಕೊಂಡಿದೆ. ಆ ಟಾಪ್ ರಾಜಕಾರಣಿ ವಿಜಯ್ ಎಂದು ನೆಟ್ಟಿಗರು ಕಾಮೆಂಟ್ ಮಾಡುತ್ತಿದ್ದಾರೆ. ತ್ರಿಷಾಗೆ ವಿಜಯ್ ದುಬಾರಿ ಫ್ಲಾಟ್ ಬರೆದಿದ್ದಾರೆ ಎಂದು ಕೆಲವರು ಭಾವಿಸಿದ್ದಾರೆ. ಇನ್ನು ಕೆಲವರು ಇದರಲ್ಲಿ ಅನುಮಾನವೇ ಇಲ್ಲ ಎಂದು ಕಾಮೆಂಟ್ ಮಾಡುತ್ತಿದ್ದಾರೆ. ಈ ಬಗ್ಗೆ ಸ್ಪಷ್ಟತೆ ಇಲ್ಲದಿದ್ದರೂ ಸಾಮಾಜಿಕ ಜಾಲತಾಣಗಳಲ್ಲಿ ಸುದ್ದಿ ವೈರಲ್ ಆಗಿದೆ.

# ಮೆಂತ್ಯ ಸೊಪ್ಪು ಪ್ರಯೋಜನ



## ಹೆಲ್ತ್ ಟಿಪ್ಸ್

ಮಧುಮೇಹಿಗಳಿಗೆ ಮೆಂತ್ಯ ಸೊಪ್ಪು ಅದ್ಭುತ ಆಹಾರವಾಗಿದೆ. ಮೆಂತ್ಯ ಎಲೆಗಳ ಸೇವನೆಯು ತುಂಬಾ ಪ್ರಯೋಜನಕಾರಿ. ಪ್ರತಿದಿನ ಮೆಂತ್ಯ ಸೊಪ್ಪು ತಿನ್ನುವುದರಿಂದ ದೇಹಕ್ಕೆ ಹಲವಾರು ಆರೋಗ್ಯ ಪ್ರಯೋಜನಗಳಿವೆ.

ಮೆಂತ್ಯ ಸೊಪ್ಪು ಮಧುಮೇಹ ವಿರೋಧಿ ಗುಣಗಳನ್ನು ಹೊಂದಿದೆ.. ಮೆಂತ್ಯ ಸೊಪ್ಪು ಔಷಧೀಯ ಗುಣಗಳ ಬಗ್ಗೆ ಹಲವು ವರ್ಷಗಳಿಂದ ಹಲವಾರು ಸಂಶೋಧನೆಗಳು ನಡೆದಿವೆ. ಸೌದಿ ಅರೇಬಿಯಾದ ವಿಶ್ವವಿದ್ಯಾನಿಲಯದಲ್ಲಿ ನಡೆಸಲಾದ ಸಂಶೋಧನೆಯೊಂದು ಮೆಂತ್ಯ ಸೊಪ್ಪಿನಲ್ಲಿ ಆಂಟಿಡಯಾಬಿಟಿಕ್, ಆಂಟಿಕ್ಯಾನ್ಸರ್, ಆಂಟಿಮೈಕ್ರೊಬಿಯಲ್, ಆಂಟಿಫೆರ್ಟಿಲಿಟಿ, ಆಂಟಿಪರಾಸಿಟಿಕ್, ಹಾಲುಣಿಸುವ ಉತ್ತೇಜಕ, ಹೈಪೋಕೊಲೆಸ್ಟರಾಲ್ಮಿಕ್ ಗುಣಲಕ್ಷಣಗಳನ್ನು ಹೊಂದಿದೆ ಎಂದು ತೋರಿಸಿದೆ. ದಿನನಿತ್ಯದ ಆಹಾರದಲ್ಲಿ ಮೆಂತ್ಯ ಸೊಪ್ಪನ್ನು ತಿನ್ನುವುದರಿಂದ ಅನೇಕ ಪ್ರಯೋಜನಗಳಿವೆ ಎಂದು ಹೇಳಲಾಗುತ್ತದೆ. ಮೆಂತ್ಯ ಸೊಪ್ಪು ಪ್ರೋಟೀನ್, ಫೈಬರ್ನ ಉತ್ತಮ ಮೂಲವಾಗಿದೆ ಮತ್ತು ಅದರ ಜೈವಿಕ ಸಕ್ರಿಯ ಸಂಯುಕ್ತಗಳಿಂದಾಗಿ ಔಷಧೀಯವಾಗಿ ಬಳಸಬಹುದು. ಮೆಂತ್ಯ ಸೊಪ್ಪು ಅನೇಕ ಆರೋಗ್ಯ ಸಮಸ್ಯೆಗಳಿಗೆ ಪರಿಹಾರವಾಗಿ ಕಾರ್ಯನಿರ್ವಹಿಸುತ್ತದೆ ಎಂದು ಸಂಶೋಧನೆ ತೋರಿಸಿದೆ.

ಮಧುಮೇಹದಲ್ಲಿ ಮೆಂತ್ಯ ಸೊಪ್ಪು ಪ್ರಯೋಜನಗಳನ್ನು ಸಹ ಸಂಶೋಧಿಸಲಾಗಿದೆ. ಮೆಂತ್ಯ ಸೇವನೆಯು ಒಬ್ಬ ವ್ಯಕ್ತಿಯಲ್ಲಿ ಟೈಪ್ 1 ಮತ್ತು ಟೈಪ್ 2 ಡಯಾಬಿಟಿಸ್ಗೆ ಸಂಬಂಧಿಸಿದ ಚಯಾಪಚಯ ಲಕ್ಷಣಗಳನ್ನು ಕಡಿಮೆ ಮಾಡಲು ಪರಿಣಾಮಕಾರಿ ಎಂದು ಕಂಡುಬಂದಿದೆ. ಇದನ್ನು ಸೇವಿಸುವುದರಿಂದ ರೋಗಿಗಳ ರಕ್ತದಲ್ಲಿನ ಸಕ್ಕರೆ ಅಂಶವೂ ಕಡಿಮೆಯಾಗುತ್ತದೆ. ರೋಗಿಯ ಗ್ಲೂಕೋಸ್ ಮಟ್ಟವು ಗಮನಾರ್ಹವಾಗಿ ಸುಧಾರಿಸುತ್ತದೆ.

ಇನ್ಸುಲಿನ್ ಅವಲಂಬಿತ ಟೈಪ್ 1 ಮಧುಮೇಹ ಹೊಂದಿರುವ ರೋಗಿಗಳಲ್ಲಿ, ತಮ್ಮ ದೈನಂದಿನ ಆಹಾರದಲ್ಲಿ 100 ಗ್ರಾಂ ಮೆಂತ್ಯ ಸೊಪ್ಪು ಸೇವಿಸುವುದರಿಂದ ಒಟ್ಟು ಕೊಲೆಸ್ಟ್ರಾಲ್, ಎಲ್ಡಿಎಲ್ ಅಥವಾ ಕೆಟ್ಟ ಕೊಲೆಸ್ಟ್ರಾಲ್ ಟ್ರೈಗ್ಲಿಸರೈಡ್ಗಳನ್ನು ಕಡಿಮೆ ಮಾಡುತ್ತದೆ ಎಂದು ಸಂಶೋಧಕರು ಹೇಳಿದ್ದಾರೆ.

# ಫೆಲಿಸ್ ಫಿಲ್ಮ್ಸ್: ನೀಲಗಿರಿ - ಎ ಶೇರ್ಡ್ ವೈಲ್ಡ್‌ನೆಸ್ ಸಾಕ್ಷ್ಯಚಿತ್ರ ಬಿಡುಗಡೆ

ಭಾರತದ ಮೊದಲ ಯುನೆಸ್ಕೋ ಬಯೋಸ್ಪಿಯರ್ ರಿಸರ್ವ್ - ನೀಲಗಿರಿಯ ಕಥೆಯನ್ನು ಆಚರಿಸಲು ಫೆಲಿಸ್ ಫಿಲ್ಮ್ಸ್ ನೀಲಗಿರಿಸ್ - ಎ ಶೇರ್ಡ್ ವೈಲ್ಡರ್ನೆಸ್ ಎಂಬ ಸಾಕ್ಷ್ಯಚಿತ್ರವನ್ನು ಬಿಡುಗಡೆ ಮಾಡುವುದಾಗಿ ಘೋಷಿಸಿತು. ರೋಹಿಣಿ ನಿಲೇಕಣಿ ಫಿಲಾಂತ್ರಪಿಸ್ ಈ ಚಲನಚಿತ್ರವನ್ನು ನಿರ್ಮಿಸಿದೆ. ನೀಲಗಿರಿ ಬಯೋಸ್ಪಿಯರ್ ರಿಸರ್ವ್ನ ಪ್ರಕೃತಿ ಮತ್ತು ಜನರ ನಿರಂತರ ಸಂಬಂಧದ ಬಗ್ಗೆ ಜಾಗೃತಿ ಮೂಡಿಸಲು ಶೈಕ್ಷಣಿಕ ಯೋಜನೆಯಾಗಿ ರಚಿಸಲಾಗಿದೆ.

ನೀಲಗಿರಿ-ಬಯೋಸ್ಪಿಯರ್ ರಿಸರ್ವ್ನಲ್ಲಿ ಮಾನವರು ಮತ್ತು ವನ್ಯಜೀವಿಗಳ ನಡುವಿನ ಅಪರೂಪದ ಮತ್ತು ಸೂಕ್ಷ್ಮವಾದ ಸಮತೋಲನವನ್ನು ಈ ಚಿತ್ರವು ಅನ್ವೇಷಿಸುತ್ತದೆ. ಚಿರತೆ, ಗೌರ್ ಮತ್ತು ಹಾರ್ನ್ಬಿಲ್ಗಳಂತಹ ಪ್ರಭೇದಗಳು ಹೇಗೆ ಸಹಬಾಳ್ವೆ ನಡೆಸುತ್ತವೆ ಮತ್ತು ವೇಗವಾಗಿ ಬದಲಾಗುತ್ತಿರುವ ಈ ಭೂದೃಶ್ಯದಲ್ಲಿ ಹೇಗೆ ಹೊಂದಿಕೊಳ್ಳುತ್ತವೆ ಎಂಬುದನ್ನು ಸೆರೆಹಿಡಿದಿದೆ. ವೀಕ್ಷಕರಿಗೆ ಭಾರತದ ಅತ್ಯಂತ ಜೀವವೈವಿಧ್ಯ ಪ್ರದೇಶಗಳಲ್ಲಿ ಒಂದಾದ ನೀಲಗಿರಿಯ ಹೃದಯಭಾಗದ ಒಂದು ನೋಟವನ್ನು ನೀಡುತ್ತದೆ. ಚೆನ್ನೈನಲ್ಲಿ ಈ ಚಲನಚಿತ್ರದ ಬಿಡುಗಡೆಯು ಜೀವಗೋಳದ ಮೀಸಲುಗಳ ಅಂತರರಾಷ್ಟ್ರೀಯ ದಿನದೊಂದಿಗೆ ಆಚರಿಸಲಾಗುತ್ತಿದೆ. ಜೀವಗೋಳಗಳ ಜಾಗತಿಕ ಮಹತ್ವವನ್ನು ಎತ್ತಿ ಹಿಡಿಯುವ, ನೀಲಗಿರಿಯನ್ನು ಉಳಿಸಿಕೊಳ್ಳಲು ದಣಿವರಿಯಿಲ್ಲದೆ ಕೆಲಸ ಮಾಡುವ ಸಮುದಾಯಗಳನ್ನು ಮತ್ತು ಅರಣ್ಯ ಇಲಾಖೆಗಳನ್ನು ಗೌರವಿಸುತ್ತದೆ. ಈ ಚಲನಚಿತ್ರದ ವಿತರಣೆಯಿಂದ ಬರುವ ಯಾವುದೇ ಆದಾಯವನ್ನು ಪ್ರಕೃತಿಯ ಸಂರಕ್ಷಣಾ ಶಿಕ್ಷಣಕ್ಕಾಗಿ ಮರುಹೂಡಿಕೆ ಮಾಡಲಾಗುತ್ತದೆ. ಈ ಚಿತ್ರದ ಪ್ರಭಾವವು, ನೀಲಗಿರಿಯ ಭೂದೃಶ್ಯಗಳನ್ನು ರಕ್ಷಿಸುವ ನಿಟ್ಟಿನಲ್ಲಿ ನಡೆಯುತ್ತಿರುವ ಪ್ರಯತ್ನಗಳನ್ನು ಬೆಂಬಲಿಸುತ್ತದೆ.




ಚಿತ್ರದ ಬಗ್ಗೆ ಮಾತನಾಡಿದ ರೋಹಿಣಿ ನಿಲೇಕಣಿ ಫಿಲಾಂತ್ರಪೀಸ್ನ ಅಧ್ಯಕ್ಷೆ ಮತ್ತು ಚಿತ್ರದ ಕಾರ್ಯನಿರ್ವಾಹಕ ನಿರ್ಮಾಪಕಿರೋಹಿಣಿ ನಿಲೇಕಣಿ, ''ನೀಲಗಿರಿ-ಎ ಶೇರ್ಡ್ ವೈಲ್ಡರ್ನೆಸ್' ಈ ಚಿತ್ರವು ನಮ್ಮ ಪ್ರಾಚೀನ, ನಂಬಲಾಗದ ಪ್ರಾಕೃತಿಕಸೌಂದರ್ಯ ಮತ್ತು ಜೈವಿಕ ವೈವಿಧ್ಯತೆಯ ನಿಟ್ಟಿನಲ್ಲಿ ಜನರನ್ನು ಜಾಗೃತಗೊಳಿಸುತ್ತದೆಯೆಂದು ನಾವು ಭಾವಿಸುತ್ತೇವೆ. ಅನನ್ಯಜೀವಗೋಳ - ದೇಶದ ಅತಿದೊಡ್ಡ ಸಂರಕ್ಷಿತ ಅರಣ್ಯ ಪ್ರದೇಶ, ಈಗ ಮಾನವ ಚಟುವಟಿಕೆಯಿಂದ ನಡೆಸಲ್ಪಡುವ ತ್ವರಿತಬದಲಾವಣೆಗೆ ಒಳಗಾಗುತ್ತಿದೆ. ನಾವು ಅದನ್ನು ಸಂರಕ್ಷಿಸುವುದನ್ನು ಮುಂದುವರಿಸಲು ಬಯಸಿದರೆ, ಈ ಪರಿಸರವನ್ನುಪೋಷಿಸಲು ಸಮಾಜ, ಸರ್ಕಾರ್ ಮತ್ತು ಬಜಾರ್ಗಳು ಒಗ್ಗಟ್ಟಿನಿಂದ ಕೆಲಸ ಮಾಡಬೇಕಾಗುತ್ತದೆ. ಸಾಕ್ಷ್ಯಚಿತ್ರವು ಈ ಪವಿತ್ರಭೂದೃಶ್ಯಗಳೊಂದಿಗೆ ಸಂಪರ್ಕ ಹೊಂದಿರುವ ಪ್ರತಿಯೊಬ್ಬರಿಗೂ ಕ್ರಿಯೆಯ ಕರೆಯಾಗಿದೆ. ಚಿತ್ರದ ನಿರ್ದೇಶಕ ಮತ್ತು ಛಾಯಾಗ್ರಾಹಕ ಸಂದೇಶ್ ಕಡೂರ್ ಮಾತನಾಡಿ, ''ಇದು ಹೊಸ ಅರಣ್ಯದ ಕಥೆ, ಹೆಚ್ಚಾಗಿ ಮಾನವ ನಿರ್ಮಿತ ಭೂದೃಶ್ಯ, ಇಲ್ಲಿ ವನ್ಯಜೀವಿಗಳು ಹೊಂದಿಕೊಳ್ಳುತ್ತ ಅಭಿವೃದ್ಧಿ ಹೊಂದುತ್ತವೆ. ಚಹಾ ತೋಟದಲ್ಲಿ ವಾಸಿಸುವ ಕಪ್ಪು ಚಿರತೆಗಳು, ಗೌರ್, ಸೋಮಾರಿ ಕರಡಿ, ಇತ್ಯಾದಿಗಳನ್ನು ನೀವು ಜಗತ್ತಿನಲ್ಲಿ ಬೇರೆಲ್ಲಿ ಕಾಣಬಹುದು? ಇದು ನಿರಂತರ ಬದಲಾವಣೆಯ ಸ್ಥಿತಿಯಲ್ಲಿದ್ದರೂ, ಪ್ರಕೃತಿಯ ಸ್ಥಿತಿಸ್ಥಾಪಕತ್ವ ಎಲ್ಲವನ್ನು ಮೀರಿ ಅಳವಡಿಕೆ ಮಾಡಿಕೊಳ್ಳುತ್ತ, ಬದಲಾವಣೆಗೆ ಹೊಂದಿಕೊಂಡು ಸಾಗುವುದನ್ನು ತೋರಿಸುತ್ತದೆ - ಆದರೆ ನಾವು ಆ ಪ್ರಕೃತಿಗೆ ಹಾಗೆ ಮಾಡಲು ಅವಕಾಶ ನೀಡಿದರೆ ಮಾತ್ರ ಇದು ಸಾಧ್ಯ.

ಫೆಲಿಸ್ ಕ್ರಿಯೇಷನ್ಸ್, ಭಾರತ ಮೂಲದ ಪ್ರೊಡಕ್ಷನ್ ಹೌಸ್, ಜಾಗತಿಕ ಪ್ರೇಕ್ಷಕರಿಗಾಗಿ ವನ್ಯಜೀವಿ ಮತ್ತು ಸಂರಕ್ಷಣಾ ಕಾರ್ಯಕ್ರಮಗಳಲ್ಲಿ ಪರಿಣತಿ ಹೊಂದಿದೆ. ಸಮಗ್ರ ಸಾಕ್ಷ್ಯಚಿತ್ರ ನಿರ್ಮಾಣ ಸೇವೆಗಳನ್ನು ನೀಡುವ ಮೂಲಕ, ಫೆಲಿಸ್ ಚಲನಚಿತ್ರ ನಿರ್ಮಾಣದ ಎಲ್ಲಾ ಅಂಶಗಳನ್ನು ನಿರ್ವಹಿಸುತ್ತಾರೆ. ಪರವಾನಗಿಗಳನ್ನು ಪಡೆಯುವುದು ಮತ್ತು ಸಂಶೋಧನೆ ನಡೆಸುವುದರಿಂದ ಚಿತ್ರೀಕರಣ, ನಿರ್ದೇಶನ ಮತ್ತು ಪೂರ್ಣಗೊಂಡ ಕಾರ್ಯಕ್ರಮಗಳನ್ನು ತಲುಪಿಸುವವರೆಗೆ ಈ ಸಂಸ್ಥೆ ಪರಿಣತಿ ಹೊಂದಿದೆ. ನೈಸರ್ಗಿಕ ಪ್ರಪಂಚದ ಬಗ್ಗೆ ಅಚಲವಾದ ಉತ್ಸಾಹದೊಂದಿಗೆ, ಫೆಲಿಸ್ ಕ್ರಿಯೇಷನ್ಸ್ ಉತ್ತಮ ಗುಣಮಟ್ಟದ ವಿಷಯವುಳ್ಳ ಚಿತ್ರಗಳನ್ನು ನಿರ್ಮಿಸುತ್ತಾ ಬಂದಿದೆ. ಅವರ ಚಲನಚಿತ್ರಗಳು ಪ್ರಮುಖ ಅಂತರ ರಾಷ್ಟ್ರೀಯ ನೆಟ್ವರ್ಕ್ಗಳಲ್ಲಿ ಕಾಣಿಸಿಕೊಂಡಿವೆ - ನ್ಯಾಷನಲ್ ಜಿಯಾಗ್ರಫಿಕ್, ಬಿಬಿಸಿ, ನೆಟ್ಫ್ಲಿಕ್ಸ್, ಡಿಸ್ಕವರಿ ಮತ್ತು ಅನಿಮಲ್ ಪ್ಲಾನೆಟ್ ಮುಂತಾದ ಅನೇಕ ಪ್ರತಿಷ್ಠಿತ ಚಾನೆಲ್ ಗಳಿಗೆ ಹಲವಾರು ಸಾಕ್ಷ್ಯ ಚಿತ್ರಗಳನ್ನು ನಿರ್ಮಿಸಿದ್ದಾರೆ. ಎರಡು ದಶಕಗಳಿಂದ, ಫೆಲಿಸ್ ತಂಡವು ಆಳವಾದ ನೈಸರ್ಗಿಕ ಇತಿಹಾಸದ ವಿಷಯವನ್ನು ತಯಾರಿಸಲು ಭಾರತೀಯ ಉಪಖಂಡವನ್ನು ಪರಿಶೋಧಿಸಿದೆ. ಅತ್ಯಾಧುನಿಕ ತಂತ್ರಜ್ಞಾನದೊಂದಿಗೆ ಸಜ್ಜುಗೊಂಡಿರುವ ಫೆಲಿಸ್ ಅನನ್ಯ ದೃಷ್ಟಿಕೋನಗಳನ್ನು ಅಪರೂಪವಾಗಿ ಸೆರೆಹಿಡಿಯುವುದರಲ್ಲಿ ಪರಿಣಿತರು.

# ಕರ್ಪೂರ ಹಾಕಿ ಸ್ನಾನ ಮಾಡಿ ನೋಡಿ

## ಬ್ಯೂಟಿ ಟಿಪ್ಸ್

ನಾವು ಪ್ರತಿದಿನ ಸ್ನಾನ ಮಾಡ್ತೀವಿ. ಆದ್ರೆ ಸ್ನಾನ ಮಾಡಿದ ಒಂದು ಗಂಟೆಗೆಲ್ಲಾ ಆ ಫ್ರೆಶ್ನೆಸ್ ಕಡಿಮೆಯಾಗುತ್ತೆ. ಬೆವರಿನ ವಾಸನೆ ಬರೋಕೆ ಶುರುವಾಗುತ್ತೆ. ಆ ವಾಸನೆ ಕಂಟ್ರೋಲ್ ಮಾಡೋಕೆ ಪರ್ಫ್ಯೂಮ್, ಡಿಯೋಡೆಂಟ್ ಹಾಕೊಳ್ತೀವಿ. ಅವೂ ಕೂಡ ಒಂದು ಗಂಟೆ ಮಾತ್ರ ಫ್ರೆಶ್ ಆಗಿ ಇಡಬಲ್ಲವು. ಅಷ್ಟೇ. ಆದ್ರೆ, ನಾವು ಸ್ನಾನ ಮಾಡೋ ಟೈಮ್ ಅಲ್ಲಿ ಒಂದು ಪುಟ್ಟ ಕರ್ಪೂರದ ತುಂಡನ್ನ ಆ ಸ್ನಾನದ ನೀರಿನಲ್ಲಿ ಹಾಕಿ ಮಿಕ್ಸ್ ಮಾಡಿ ಸ್ನಾನ ಮಾಡಿದ್ರೆ, ದಿನವಿಡೀ ಫ್ರೆಶ್ ಆಗಿ ಇರೋದಲ್ಲದೆ ನಮ್ಮ ಸೌಂದರ್ಯವೂ ಹೆಚ್ಚುತ್ತೆ ಅಂತ ನಿಮಗೆ ಗೊತ್ತಾ? ಕರ್ಪೂರದಲ್ಲಿ ಆಂಟಿ ಬ್ಯಾಕ್ಟೀರಿಯಲ್, ಆಂಟಿ ಬಯೋಟಿಕ್ ಅಂಶಗಳಿವೆ. ನೀರಿನಲ್ಲಿ ಹಾಕಿ ಸ್ನಾನ ಮಾಡಿದ್ರೆ, ತುರಿಕೆ, ದದ್ದು, ಮೊಡವೆ ಹೋಗುತ್ತೆ. ಚರ್ಮ ಬೆಳಗಾಗುತ್ತೆ. ನೈಸರ್ಗಿಕ ಸೌಂದರ್ಯ ವರ್ಧಕವಾಗಿ ಕೆಲಸ ಮಾಡುತ್ತೆ. ಕರ್ಪೂರ ಸ್ನಾನ ಮಾಡುವಾಗ ಕರ್ಪೂರದ ಪರಿಮಳ ಮಾನಸಿಕ ಒತ್ತಡ, ಆತಂಕವನ್ನ ಕಡಿಮೆ ಮಾಡುತ್ತೆ. ಈಗಿನ ಕಾಲದಲ್ಲಿ ಕೆಲಸದ ಒತ್ತಡದಿಂದ ಬಳಲುವವರು ತುಂಬಾ ಜನ ಇದ್ದಾರೆ. ಅವರು ಸ್ನಾನ ಮಾಡುವಾಗ ಈ ಕರ್ಪೂರವನ್ನ ಬಳಸಿದ್ರೆ, ಆ ಒತ್ತಡದಿಂದ ಹೊರಬರೋ ಸಾಧ್ಯತೆ ತುಂಬಾ ಇರುತ್ತೆ. ಸ್ಟ್ರೆಸ್ ರಿಲೀಫ್ ಆಗುತ್ತೆ. ಅಷ್ಟೇ ಅಲ್ಲ ಹಲವಾರು ರೀತಿಯ ದೈಹಿಕ ಸಮಸ್ಯೆಗಳನ್ನೂ ಕಡಿಮೆ ಮಾಡುತ್ತೆ. ತಲೆನೋವು, ಬೆನ್ನು ನೋವು ಕಡಿಮೆಯಾಗುತ್ತೆ. ಕೀಲು ನೋವು, ಗಾಯಗಳಿಂದ ಬಳಲುವವರು ಆಗಾಗ್ಗೆ ಈ ಕರ್ಪೂರ ಹಾಕಿ ಸ್ನಾನ ಮಾಡಿದ್ರೆ, ನೋವಿಗೆ ಒಳ್ಳೆಯ ಪರಿಹಾರ ಸಿಗುತ್ತೆ.



**ಕರ್ಪೂರ ಸ್ನಾನ:** ಕರ್ಪೂರವನ್ನ ಬಿಸಿ ನೀರಿನಲ್ಲಿ ಹಾಕಿ ಸ್ನಾನ ಮಾಡಿದ್ರೆ, ಆಯಾಸ, ಆಲಸ್ಯ ಕಡಿಮೆಯಾಗಿ ಉಲ್ಲಾಸ, ಚುರುಕುತನ ಬರುತ್ತೆ. ಹೊಸ ಶಕ್ತಿ ಬಂದಂತಾಗುತ್ತೆ. ಈ ನೀರಿನಿಂದ ಬರುವ ಪರಿಮಳದಿಂದ ಮನಸ್ಸಿಗೆ ಶಾಂತಿ ಸಿಗುತ್ತೆ

# ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ನಂಬಿಕಸ್ಥರಿಂದ ಮೋಸ, ದಾಂಪತ್ಯದಲ್ಲಿ ಕಲಹ, ಮಾನಸಿಕ ವ್ಯಥೆ, ರೋಗಭಾದೆ.

**ವೃಷಭ:** ದೇವತಾ ಕಾರ್ಯಗಳಲ್ಲಿ ಭಾಗಿ, ಸ್ತ್ರೀಯರಿಗೆ ಅನುಕೂಲ, ಚಂಚಲ ಮನಸ್ಸು, ಉದ್ಯೋಗದಲ್ಲಿ ಕಿರಿಕಿರಿ, ಚೋರ ಭಯ.

**ಮಿಥುನ:** ಹಣ ಬಂದರೂ ಉಳಿಯುವುದಿಲ್ಲ, ವಾಹನದಿಂದ ತೊಂದರೆ, ಸ್ತ್ರೀಯರಲ್ಲಿ ತಾಳ್ಮೆ ಅತ್ಯಗತ್ಯ, ಕೆಲಸ ಕಾರ್ಯಗಳಲ್ಲಿ ವಿಘ್ನ.

**ಕಟಕ:** ಕೈಗಾರಿಕೋದ್ಯಮಿಗಳಿಗೆ ಯಶಸ್ಸು, ಮಾನಸಿಕ ನೆಮ್ಮದಿ, ವಿದ್ಯಾರ್ಥಿಗಳಲ್ಲಿ ಗೊಂದಲ, ಶತ್ರು ಕಾಟ.

**ಸಿಂಹ:** ಈ ದಿನ ಶುಭಫಲ, ಮಾಡುವ ಕಾರ್ಯಗಳಲ್ಲಿ ಯಶಸ್ಸು, ಕ್ರಯ ವಿಕ್ರಯಗಳಲ್ಲಿ ಲಾಭ, ಕುಟುಂಬ ಸೌಖ್ಯ, ಆರೋಗ್ಯದಲ್ಲಿ ವ್ಯತ್ಯಾಸ.

**ಕನ್ಯಾ:** ನಾನಾ ಮೂಲಗಳಿಂದ ಧನಾಗಮನ, ಮಿತ್ರರಿಂದ ಬೆಂಬಲ, ಹಿತ ಶತ್ರುಗಳ ಭಾದೆ, ಸ್ಥಿರಾಸ್ತಿ ಖರೀದಿ, ಸಾಮಾಜಿಕ ಕಾರ್ಯಗಳಲ್ಲಿ ಭಾಗಿ.

**ತುಲಾ:** ಉದಾಸೀನದಿಂದ ವಸ್ತುಗಳನ್ನು ಕಳೆದುಕೊಳ್ಳುವಿರಿ, ಲೇವಾದೇವಿ ವ್ಯವಹಾರದವರಿಗೆ ಲಾಭ, ವ್ಯಾಪಾರದಲ್ಲಿ ಅನುಕೂಲ, ನಾನಾ ಮೂಲಗಳಿಂದ ಧನಾಗಮನ.

**ವೃಶ್ಚಿಕ:** ಅಪರಿಚಿತರ ವಿಚಾರದಲ್ಲಿ ಎಚ್ಚರ, ಆರೋಗ್ಯದಲ್ಲಿ ಏರುಪೇರು, ಸ್ತ್ರೀಯರಿಗೆ ಲಾಭ, ಮಗನಿಂದ ಶುಭ ವಾರ್ತೆ, ವೈರಿಗಳಿಂದ ದೂರವಿರಿ.

**ಧನಸ್ಸು:** ಸ್ವಸ್ಥ ಮನಸ್ಸಿನಿಂದ ನೆಮ್ಮದಿ, ಆರೋಗ್ಯದಲ್ಲಿ ಚೇತರಿಕೆ, ಆರ್ಥಿಕ ಪರಿಸ್ಥಿತಿ ಬಿಕ್ಕಟ್ಟು, ದಾಯಾದಿಗಳ ಕಲಹ.

**ಮಕರ:** ವಿವಾಹ ಯೋಗ, ಮಿತ್ರರಿಂದ ಬೆಂಬಲ, ವಿಪರೀತ ಕೋಪ, ಶತ್ರುಗಳ ಭಾದೆ, ಧನ ಲಾಭ.

**ಕುಂಭ:** ಶ್ರಮಕ್ಕೆ ತಕ್ಕ ಫಲ, ಗಣ್ಯ ವ್ಯಕ್ತಿಗಳ ಭೇಟಿ, ದಾಂಪತ್ಯದಲ್ಲಿ ಪ್ರೀತಿ, ಬಡ ರೋಗಿಗಳಿಗೆ ಸಹಾಯ.

**ಮೀನ:** ಇಲ್ಲಸಲ್ಲದ ಅಪವಾದ, ಯತ್ನ ಕಾರ್ಯದಲ್ಲಿ ಜಯ, ಸುಖ ಭೋಜನ, ಮಾತಿಗೆ ಮರುಳಾಗಬೇಡಿ.

# ವಿಶ್ವ ಸುನಾಮಿ ಜಾಗೃತಿ ದಿನ




ವಿಶ್ವ ಸುನಾಮಿ ಜಾಗೃತಿ ದಿನವನ್ನು ಪ್ರತಿ ವರ್ಷ ನವೆಂಬರ್ 5 ರಂದು ಆಚರಿಸಲಾಗುತ್ತದೆ. ಜಪಾನ್ ತನ್ನ ಪುನರಾವರ್ತಿತ, ಕಹಿ ಸುನಾಮಿ ಅನುಭವದಿಂದಾಗಿ ಈ ಆಚರಣೆಯನ್ನು ಪ್ರಾರಂಭಿಸಿದ ಕೀರ್ತಿಗೆ ಪಾತ್ರವಾಗಿದೆ. ವರ್ಷಗಳಲ್ಲಿ, ಇದು ಸುನಾಮಿ ಮುಂಚಿನ ಎಚ್ಚರಿಕೆ, ಸಾರ್ವಜನಿಕ ಕ್ರಮ, ಮತ್ತು ಭವಿಷ್ಯದ ಪರಿಣಾಮಗಳನ್ನು ಕಡಿಮೆ ಮಾಡಲು ವಿಪತ್ತಿನ ನಂತರ ಉತ್ತಮವಾಗಿ ನಿರ್ಮಿಸುವಂತಹ ಕೆಲವು ಕ್ಷೇತ್ರಗಳಲ್ಲಿ ಪ್ರಮುಖ ಪರಿಣತಿಯನ್ನು ನಿರ್ಮಿಸಿದೆ. ಸುನಾಮಿ ಎಚ್ಚರಿಕೆಗಳು ತಲುಪಿದಾಗ ಸಮುದಾಯಗಳು ನಿರ್ಣಾಯಕವಾಗಿ ಮತ್ತು ಭಯಪಡದೆ ಕಾರ್ಯನಿರ್ವಹಿಸುವುದನ್ನು ಖಚಿತಪಡಿಸಿಕೊಳ್ಳಲು ಸುನಾಮಿಯ ಬಗ್ಗೆ ಶಿಕ್ಷಣದ ಮಹತ್ವದ ಬಗ್ಗೆ ಜಾಗೃತಿ ಮೂಡಿಸಲು ವಿಶ್ವಸಂಸ್ಥೆಯು ಈ ದಿನವನ್ನು ಗೊತ್ತುಪಡಿಸಿದೆ. ಡಿಸೆಂಬರ್ 22, 2015 ರಂದು, ವಿಶ್ವಸಂಸ್ಥೆಯು ನಿರ್ಣಯ 70/23 ಮೂಲಕ ನವೆಂಬರ್ 5 ಅನ್ನು ವಿಶ್ವ ಸುನಾಮಿ ಜಾಗೃತಿ ದಿನವೆಂದು ಗೊತ್ತುಪಡಿಸಿತು. ಅವು ಅಪರೂಪವಾಗಿದ್ದರೂ, ಸುನಾಮಿಗಳು ಅತ್ಯಂತ ವಿನಾಶಕಾರಿ ಮತ್ತು ಅಪಾಯಕಾರಿ ನೈಸರ್ಗಿಕ ವಿಪತ್ತುಗಳಲ್ಲಿ ಒಂದಾಗಿದೆ. ಸುನಾಮಿಯ ಅಪಾಯವಿರುವಾಗ ಕರಾವಳಿಯ ಸಮುದಾಯಗಳು ಹೆಚ್ಚು ದುರ್ಬಲವಾಗಿರುತ್ತವೆ. ಸುನಾಮಿಗಳು ಅಪಾಯಕಾರಿಯಾಗಿದ್ದರೂ ಸಹ, ಸುನಾಮಿ ಸಮೀಪಿಸುತ್ತಿರಬಹುದು ಎಂದು ಸಾಮಾನ್ಯವಾಗಿ ನೈಸರ್ಗಿಕ ಎಚ್ಚರಿಕೆಗಳು ಇವೆ. ಇದು ಬಲವಾದ ನೆಲದ ಅಲುಗಾಡುವಿಕೆ, ಜ್ವಾಲಾಮುಖಿ ಸ್ಫೋಟಗಳು, ಅಥವಾ ನೀರು ಅಸಾಮಾನ್ಯವಾಗಿ ದೂರ ಹೋಗುವುದು ಮತ್ತು ಸಮುದ್ರದ ತಳವನ್ನು ಬಹಿರಂಗಪಡಿಸುವುದು. ಈ ರೀತಿಯ ನೈಸರ್ಗಿಕ ವಿಕೋಪಕ್ಕೆ ಒಡ್ಡಿಕೊಳ್ಳುವುದನ್ನು ಕಡಿಮೆ ಮಾಡಲು ಪರಿಣಾಮಕಾರಿ ಕ್ರಮಗಳು, ನೀತಿಗಳು ಮತ್ತು ಅಭ್ಯಾಸಗಳ ಬಗ್ಗೆ ಜಾಗತಿಕ ಜಾಗೃತಿ ಮೂಡಿಸಲು ಪ್ರಯತ್ನಿಸುವಲ್ಲಿ ಅಂತರರಾಷ್ಟ್ರೀಯ ಸಹಕಾರವು ಪ್ರಮುಖವಾಗಿದೆ. ಕಳೆದ 100 ವರ್ಷಗಳಲ್ಲಿ ಸುಮಾರು 58 ಸುನಾಮಿಗಳು 260,000 ಕ್ಕೂ ಹೆಚ್ಚು ಜೀವಗಳನ್ನು ತೆಗೆದುಕೊಂಡಿವೆ, ಇದು ಯಾವುದೇ ನೈಸರ್ಗಿಕ ವಿಕೋಪಕ್ಕಿಂತ ಹೆಚ್ಚು. ಆ 100 ವರ್ಷಗಳಲ್ಲಿ ಅತಿ ಹೆಚ್ಚು ಸಾವುಗಳು ಡಿಸೆಂಬರ್ 2004 ರಲ್ಲಿ ಹಿಂದೂ ಮಹಾಸಾಗರದ ಸುನಾಮಿ ಸಂಭವಿಸಿದಾಗ ಸಂಭವಿಸಿದವು. ಇಂಡೋನೇಷ್ಯಾ, ಶ್ರೀಲಂಕಾ, ಭಾರತ ಮತ್ತು ಥೈಲ್ಯಾಂಡ್ ಸೇರಿದಂತೆ 14 ದೇಶಗಳಲ್ಲಿ ಇದು ಸರಿಸುಮಾರು 227,000 ಸಾವುಗಳಿಗೆ ಕಾರಣವಾಯಿತು. ಆ ಸುನಾಮಿಯ ಕೇವಲ ಮೂರು ವಾರಗಳ ನಂತರ, ಜಪಾನ್ನ ಕೋಬ್ನಲ್ಲಿ ಅಂತರರಾಷ್ಟ್ರೀಯ ಸಮುದಾಯವು ಒಟ್ಟುಗೂಡಿತು, ಅಲ್ಲಿ ಸರ್ಕಾರಗಳು 10-ವರ್ಷದ ಹ್ಯೊಗೊ ಫ್ರೇಮ್ವರ್ಕ್ ಫಾರ್ ಆಕ್ಷನ್ ಅನ್ನು ಅಳವಡಿಸಿಕೊಂಡವು. ಈ ಒಪ್ಪಂದವು ವಿಪತ್ತು ಅಪಾಯ ಕಡಿತದ ಮೊದಲ ಸಮಗ್ರ ಜಾಗತಿಕ ಒಪ್ಪಂದವಾಗಿದೆ.

ಸಂಜೆ ಮುಗಿಲು
ಮಂಗಳವಾರ
5.11.2024



# ಉತ್ತರ ಪ್ರದೇಶ ಮದರಸಾ ಶಿಕ್ಷಣ ಕಾಯ್ದೆಯ ಸಿಂಧುತ್ವ ಎತ್ತಿ ಹಿಡಿದ ಸುಪ್ರೀಂಕೋರ್ಟ್



**ಉತ್ತರ ಪ್ರದೇಶ:** ಮದರಸಾ ಶಿಕ್ಷಣ ಕಾಯ್ದೆಯ ಮಹತ್ವವನ್ನು ಸುಪ್ರೀಂಕೋರ್ಟ್ ಎತ್ತಿಹಿಡಿದಿದೆ. ಉತ್ತರ ಪ್ರದೇಶದ ಮದರಸಾ ಕಾನೂನನ್ನು ಅಸಂವಿಧಾನಿಕ ಎಂದು ಘೋಷಿಸಿದ ಅಲಹಾಬಾದ್ ಹೈಕೋರ್ಟ್ ತೀರ್ಪನ್ನು ಪ್ರಶ್ನಿಸಿ ಸಲ್ಲಿಸಲಾದ ಅರ್ಜಿಗಳ ಮೇಲಿನ ತೀರ್ಪನ್ನು ಸುಪ್ರೀಂ ಕೋರ್ಟ್ ಮಂಗಳವಾರ ಪ್ರಕಟಿಸಿದೆ.

ತನ್ನ ಆದೇಶದಲ್ಲಿ, ನ್ಯಾಯಾಲಯವು ಕಾನೂನನ್ನು ಸಾಂವಿಧಾನಿಕ ಎಂದು ಹೇಳಿದೆ. ಭಾರತದ ಮುಖ್ಯ ನ್ಯಾಯಮೂರ್ತಿ (ಸಿಜೆಐ) ಡಿವೈ ಚಂದ್ರಚೂಡ್ ಮತ್ತು ನ್ಯಾಯಮೂರ್ತಿಗಳಾದ ಜೆಬಿ ಪರ್ದಿವಾಲಾ ಮತ್ತು ಮನೋಜ್ ಮಿಶ್ರಾ ಅವರನ್ನೊಳಗೊಂಡ ಪೀಠವು ಹೈಕೋರ್ಟ್ ತೀರ್ಪಿನ ವಿರುದ್ಧ ಅಂಜುಮ್ ಕಡಾರಿ ಸಲ್ಲಿಸಿದ ಪ್ರಮುಖ ಸೇರಿದಂತೆ ಎಂಟು ಅರ್ಜಿಗಳ ತೀರ್ಪನ್ನು ಅಕ್ಟೋಬರ್ 22 ರಂದು ಕಾಯ್ದಿರಿಸಿತ್ತು.

ಮಾರ್ಚ್ 22 ರಂದು, ಅಲಹಾಬಾದ್ ಹೈಕೋರ್ಟ್ ಈ ಕಾಯ್ದೆಯನ್ನು ಅಸಂವಿಧಾನಿಕ ಮತ್ತು ಜಾತ್ಯತೀತತೆಯ ತತ್ವದ ಉಲ್ಲಂಘನೆ ಎಂದು ಘೋಷಿಸಿತ್ತು. ಏಪ್ರಿಲ್ 5 ರಂದು, ಸಿಜೆಐ ನೇತೃತ್ವದ ಪೀಠವು ಉತ್ತರ ಪ್ರದೇಶ ಬೋರ್ಡ್ ಆಫ್ ಮದರಸಾ ಎಜುಕೇಶನ್ ಆಕ್ಟ್, 2004 ಅನ್ನು ರದ್ದುಗೊಳಿಸಿದ ಹೈಕೋರ್ಟ್ ತೀರ್ಪಿಗೆ ತಡೆಯಾಜ್ಞೆ ನೀಡುವ ಮೂಲಕ ಸುಮಾರು 17 ಲಕ್ಷ ಮದರಸಾ ವಿದ್ಯಾರ್ಥಿಗಳಿಗೆ ಉಸಿರು ನೀಡಿತ್ತು.

# ಪ್ರತ್ಯೇಕತಾವಾದಿಗಳಿಗೆ ಶಿಕ್ಷೆಯಾಗಬೇಕು; ಕೆನಡಾದಲ್ಲಿ ಹಿಂದೂ ದೇವಾಲಯದ ದಾಳಿಗೆ ಭಾರತ ಟೀಕೆ



**ನವದೆಹಲಿ:** ಭಾರತ ಮತ್ತು ಕೆನಡಾ ನಡುವೆ ನಡೆಯುತ್ತಿರುವ ಉದ್ವಿಗ್ನತೆಯ ನಡುವೆ, ಬ್ರಾಂಪ್ಟನ್‌ನಲ್ಲಿರುವ ಹಿಂದೂ ದೇವಾಲಯದ ಮೇಲಿನ ದಾಳಿಯು ಎರಡು ರಾಷ್ಟ್ರಗಳ ನಡುವೆ ಹೊಸ ಕಿಡಿಯನ್ನು ಹೆಚ್ಚಿಸಿದೆ. ಈ ಘಟನೆಗೆ ತೀವ್ರವಾಗಿ ಪ್ರತಿಕ್ರಿಯಿಸಿರುವ ಭಾರತ ಸರ್ಕಾರವು ಹಿಂದೂ ದೇವಾಲಯವನ್ನು ಗುರಿಯಾಗಿಸಿಕೊಂಡ ಉಗ್ರರು ಮತ್ತು ಪ್ರತ್ಯೇಕತಾವಾದಿಗಳ ವಿರುದ್ಧ ಕಠಿಣ ಕ್ರಮಕ್ಕೆ ಒತ್ತಾಯಿಸಿದೆ.

''ನಾವು ನಿನ್ನೆ ಒಂಟಾರಿಯೊದ ಬ್ರಾಂಪ್ಟನ್ ನಲ್ಲಿರುವ ಹಿಂದೂ ಸಭಾ ದೇವಾಲಯದಲ್ಲಿ ಉಗ್ರಗಾಮಿಗಳು ಮತ್ತು ಪ್ರತ್ಯೇಕತಾವಾದಿಗಳು ನಡೆಸಿದ ಹಿಂಸಾಚಾರವನ್ನು ಖಂಡಿಸುತ್ತೇವೆ. ಎಲ್ಲಾ ಪೂಜಾ ಸ್ಥಳಗಳನ್ನು ಇಂತಹ ದಾಳಿಗಳಿಂದ ರಕ್ಷಿಸಲು ನಾವು ಕೆನಡಾ ಸರ್ಕಾರಕ್ಕೆ ಒತ್ತಾಯಿಸುತ್ತೇವೆ'' ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ತಿಳಿಸಿದ್ದಾರೆ.

ಕೆನಡಾ ಪ್ರಧಾನ ಮಂತ್ರಿ ಜಸ್ಟಿನ್ ಟ್ರುಡೊ ಕೂಡ ಬ್ರಾಂಪ್ಟನ್ ನಲ್ಲಿರುವ ಹಿಂದೂ ದೇವಾಲಯದ ಮೇಲೆ ಖಲಿಸ್ತಾನಿ ಉಗ್ರಗಾಮಿಗಳು ನಡೆಸಿದ ದಾಳಿಯನ್ನು ಖಂಡಿಸಿದ್ದಾರೆ. ಕೆನಡಾದಲ್ಲಿರುವ ಪ್ರತಿಯೊಬ್ಬರಿಗೆ ತಮ್ಮ ನಂಬಿಕೆಯನ್ನು ಮುಕ್ತವಾಗಿ ಮತ್ತು ಸುರಕ್ಷಿತವಾಗಿ ಆಚರಿಸುವ ಹಕ್ಕಿದೆ ಎಂದು ಹೇಳಿದ್ದಾರೆ.

''ಬ್ರಾಂಪ್ಟನ್‌ನ ಹಿಂದೂ ಸಭಾ ಮಂದಿರದಲ್ಲಿ ನಡೆಯುತ್ತಿರುವ ಹಿಂಸಾಚಾರವನ್ನು ಸ್ವೀಕಾರಾರ್ಹವಲ್ಲ. ಪ್ರತಿಯೊಬ್ಬ ಕೆನಡಿಯನ್ ತನ್ನ ನಂಬಿಕೆಯನ್ನು ಮುಕ್ತವಾಗಿ ಮತ್ತು ಸುರಕ್ಷಿತವಾಗಿ ಅಭ್ಯಾಸ ಮಾಡುವ ಹಕ್ಕನ್ನು ಹೊಂದಿದ್ದಾನೆ. ಸಮುದಾಯವನ್ನು ರಕ್ಷಿಸಲು ಮತ್ತು ಈ ಘಟನೆಯನ್ನು ತನಿಖೆ ಮಾಡಲು ತ್ವರಿತವಾಗಿ ಪ್ರತಿಕ್ರಿಯಿಸಿದ್ದಕ್ಕಾಗಿ ಪೀಲ್ ಪ್ರಾದೇಶಿಕ ಪೊಲೀಸರಿಗೆ ಧನ್ಯವಾದಗಳು'' ಎಂದು ಟ್ರೂಡೊ ಸೋಮವಾರ ಎಕ್ಸ್‌ನಲ್ಲಿನ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.

ಕಳೆದ ವರ್ಷ ಸೆಪ್ಟೆಂಬರ್‌ನಲ್ಲಿ ಖಲಿಸ್ತಾನ್ ಉಗ್ರ ಹರ್ದೀಪ್ ಸಿಂಗ್ ನಿಜ್ಜರ್ ಹತ್ಯೆಯಲ್ಲಿ ಭಾರತೀಯ ಏಜೆಂಟರ ''ಸಂಭಾವ್ಯ'' ಒಳಗೊಳ್ಳುವಿಕೆಯ ಬಗ್ಗೆ ಪ್ರಧಾನ ಮಂತ್ರಿ ಜಸ್ಟಿನ್ ಟ್ರುಡೊ ಆರೋಪಿಸಿದ ನಂತರ ಭಾರತ ಮತ್ತು ಕೆನಡಾ ನಡುವಿನ ಸಂಬಂಧದಲ್ಲಿ ಬಿರುಕು ಹೆಚ್ಚಾಗಿತ್ತು. ಟ್ರುಡೊ ಅವರ ಆರೋಪಗಳನ್ನು ಭಾರತ ''ಅಸಂಬದ್ಧ'' ಎಂದು ತಿರಸ್ಕರಿಸಿತು. ಕೆನಡಾದ ನೆಲದಿಂದ ನಿರ್ಭಯವಾಗಿ ಕಾರ್ಯನಿರ್ವಹಿಸುತ್ತಿರುವ ಖಲಿಸ್ತಾನ್ ಪರವಾದ ಘಟಕಗಳಿಗೆ ಕೆನಡಾ ಅವಕಾಶ ನೀಡುವುದು ಉಭಯ ದೇಶಗಳ ನಡುವಿನ ಪ್ರಮುಖ ಸಮಸ್ಯೆಯಾಗಿದೆ ಎಂದು ಭಾರತ ಸಮರ್ಥಿಸಿಕೊಂಡಿತ್ತು.

# ವಾಯುಮಾಲಿನ್ಯದಿಂದ ಜಗತ್ತಿನ ಅತಿ ಕಲುಷಿತ ನಗರೆವಾದ ಲಾಹೋರ್

**ಲಾಹೋರ್:** ಪಾಕಿಸ್ತಾನದ ಎರಡನೇ ಅತಿದೊಡ್ಡ ನಗರವಾದ ಲಾಹೋರ್ ಭಾನುವಾರ (ನವೆಂಬರ್ 3) ದಟ್ಟವಾದ ಹೊಗೆಯಿಂದ ಆವೃತವಾಗಿತ್ತು. ಏಕೆಂದರೆ ವಾಯು ಗುಣಮಟ್ಟ ಸೂಚ್ಯಂಕವು (AQI)1,067ಕ್ಕೆ ತಲುಪಿತ್ತು. ಸ್ವಿಜರ್ಲೆಂಡ್ ಮೂಲದ ವಾಯು ಗುಣಮಟ್ಟದ ವಾಚ್‌ಡಾಗ್ IQAir ಈ ಗಾಳಿಯ ಗುಣಮಟ್ಟವನ್ನು ''ಅಪಾಯಕಾರಿ'' ಎಂದು ವರ್ಗೀಕರಿಸಿದೆ. ಇದೀಗ, ವಾಯುಮಾಲಿನ್ಯದ ಮಟ್ಟದ ಹಠಾತ್ ಹೆಚ್ಚಳಕ್ಕೆ ಪಾಕಿಸ್ತಾನದ ಸಚಿವರು ಭಾರತವನ್ನು ದೂಷಿಸಲು ಪ್ರಾರಂಭಿಸಿದ್ದಾರೆ. ಹಿರಿಯ ಸಚಿವ ಮರಿಯುಮ್ ಔರಂಗಜೇಬ್ ಭಾರತದಿಂದ ಪಾಕಿಸ್ತಾನಕ್ಕೆ ಬರುತ್ತಿರುವ ಹೊಗೆಯ ಬಗ್ಗೆ ತಮ್ಮ ದೇಶದ ಜನರಿಗೆ ಎಚ್ಚರಿಕೆ ನೀಡಿದ್ದಾರೆ. ಇನ್ನೂ ಕನಿಷ್ಠ ಒಂದು ವಾರದವರೆಗೆ ಗಾಳಿಯು ಲಾಹೋರ್ ಕಡೆಗೆ ಬೀಸಲಿದೆ ಎಂದು ಹೇಳಿದ್ದಾರೆ.

» **ಭಾರತವೇ ಕಾರಣವೆಂದ ಪಾಕ್**



ನಾಗರಿಕರು ಮನೆಯೊಳಗೆ ಇರಲು, ಬಾಗಿಲು ಮತ್ತು ಕಿಟಕಿಗಳನ್ನು ಮುಚ್ಚಿ ಮತ್ತು ಅನಗತ್ಯ ಪ್ರಯಾಣವನ್ನು ತಪ್ಪಿಸಲು ಸೂಚಿಸಲಾಗಿದೆ. ಆಸ್ಪತ್ರೆಗಳಿಗೆ ಸ್ಮಾಗ್ ಕೌಂಟರ್ ಗಳನ್ನು ನೀಡಲಾಗಿದೆ. ವಾಹನ ಮಾಲಿನ್ಯವನ್ನು ಕಡಿಮೆ ಮಾಡಲು, 50% ಕಚೇರಿ ನೌಕರರು ಮನೆಯಿಂದಲೇ ಕೆಲಸ ಮಾಡಲಿದ್ದಾರೆ.

ಅಮೃತಸರ ಮತ್ತು ಚಂಡೀಗಢದಿಂದ ಪೂರ್ವ ದಿಕ್ಕಿನ ಮಾರುತಗಳು ಲಾಹೋರ್‌ನಲ್ಲಿ ಕಳೆದ 2 ದಿನಗಳಿಂದ ವಾಯು ಗುಣಮಟ್ಟದ ಸೂಚ್ಯಂಕವನ್ನು 1,000ಕ್ಕೆ ಹೆಚ್ಚಿಸುತ್ತಿವೆ. ಲಾಹೋರ್ ರಾಜಧಾನಿಯಾಗಿರುವ ಪಂಜಾಬ್ ಪ್ರಾಂತ್ಯದ ಸರ್ಕಾರವು ಕಡ್ಡಾಯವಾಗಿ ಮಾಸ್ಕ್ ಧರಿಸಬೇಕೆಂದು ಹೇಳಿದೆ. ತೀವ್ರವಾದ ಹೊಗೆಯನ್ನು ಎದುರಿಸಲು ಹೊರಾಂಗಣ ಚಟುವಟಿಕೆಗಳನ್ನು ನಿರ್ಬಂಧಿಸಿದೆ. ಈ ಕ್ರಮವು ವಾಯುಮಾಲಿನ್ಯದಲ್ಲಿ ಆತಂಕಕಾರಿ ಉಲ್ಬಣವನ್ನು ಅನುಸರಿಸುತ್ತದೆ, ರೋಗನಿರೋಧಕ ಶಕ್ತಿ ಕಡಿಮೆ ಇರುವ ಜನರಿಗೆ ಗಂಭೀರವಾದ ಆರೋಗ್ಯ ಅಪಾಯಗಳನ್ನು ಉಂಟುಮಾಡುತ್ತದೆ.

ಪಂಜಾಬ್ ಸರ್ಕಾರವು ಅತ್ಯಂತ ಕಲುಷಿತ ವಲಯಗಳಲ್ಲಿ ನಿರ್ಮಾಣ ಚಟುವಟಿಕೆಗಳು, ವಾಣಿಜ್ಯ ಜನರೇಟರ್ ಗಳ ಬಳಕೆ ಮತ್ತು ಸರಿಯಾದ ಹೊರಸೂಸುವಿಕೆಯನ್ನು ಅಳವಡಿಸದೆ ಇದ್ದಿಲು, ಕಲ್ಲಿದ್ದಲು ಅಥವಾ ಮರವನ್ನು ಬಳಸುವ ತೆರೆದ ಆಹಾರ ಮಳಿಗೆಗಳನ್ನು ನಿಷೇಧಿಸುವುದು ಸೇರಿದಂತೆ 'ಹಸಿರು ಲಾಕ್‌ಡೌನ್' ಅನ್ನು ವಿಧಿಸಿದೆ. ಹೊಸ ದೆಹಲಿಯು ಪ್ರತಿ ಚಳಿಗಾಲದಲ್ಲಿ ತೀವ್ರವಾದ ಮಾಲಿನ್ಯದ ವಿರುದ್ಧ ಹೋರಾಡುತ್ತದೆ. ಏಕೆಂದರೆ ತಣ್ಣನೆಯ ಗಾಳಿಯು ಹೊರಸೂಸುವಿಕೆ, ಧೂಳು ಮತ್ತು ಪಕ್ಕದ ಕೃಷಿ ರಾಜ್ಯಗಳಾದ ಪಂಜಾಬ್ ಮತ್ತು ಹರಿಯಾಣದಲ್ಲಿ ಹೊಲದ ಬೆಂಕಿಯಿಂದ ಹೊಗೆ ಹೆಚ್ಚಾಗುತ್ತಿದೆ. ಇದಕ್ಕೆ ಪ್ರತಿಕ್ರಿಯೆಯಾಗಿ ಆಗಾಗ ಶಾಲೆಗಳನ್ನು ಮುಚ್ಚುವುದು ಮತ್ತು ನಿರ್ಮಾಣ ನಿರ್ಬಂಧಗಳನ್ನು ಹೇರುವ ನಿರ್ಧಾರ ತೆಗೆದುಕೊಳ್ಳಬೇಕಾದ ಅನಿವಾರ್ಯತೆ ಎದುರಾಗುತ್ತಿದೆ.

ಬುಧವಾರದವರೆಗೆ ಈ ಪ್ರದೇಶದಲ್ಲಿ ಗಾಳಿಯ ಗುಣಮಟ್ಟವು 'ಅತ್ಯಂತ ಕಳಪೆ' ಎಂದು ನಿರೀಕ್ಷಿಸಲಾಗಿದೆ ಎಂದು ಭೂ ವಿಜ್ಞಾನ ಸಚಿವಾಲಯ ತಿಳಿಸಿದೆ. ನಂತರದ 6 ದಿನಗಳವರೆಗೆ 'ಅತ್ಯಂತ ಕಳಪೆ'ಯಿಂದ 'ತೀವ್ರ'ದವರೆಗೆ ಇರುತ್ತದೆ. ನವದೆಹಲಿಯನ್ನು ಸತತವಾಗಿ 4 ವರ್ಷಗಳಿಂದ ವಿಶ್ವದ ಅತ್ಯಂತ ಕಲುಷಿತ ರಾಜಧಾನಿ ಎಂದು ರೇಟ್ ಮಾಡಿತ್ತು. ಆದರೆ ಕಳಪೆ ಗಾಳಿಯ ಗುಣಮಟ್ಟವು ದಕ್ಷಿಣ ಏಷ್ಯಾದಾದ್ಯಂತ ಚಳಿಗಾಲದ ಸಾಮಾನ್ಯ ಸಮಸ್ಯೆಯಾಗಿದೆ.

# ರಸ್ತೆಯನ್ನು ಹೇಮಾ ಮಾಲಿನಿ ಕೆನ್ನೆಗೆ ಹೋಲಿಸಿದ್ದ ಶಾಸಕನ ವಿರುದ್ಧ ಕ್ರಮಕ್ಕೆ ಬಿಜೆಪಿ ಒತ್ತಾಯ



**ದೆಹಲಿ:** ರಸ್ತೆಯನ್ನು ಹೇಮಾ ಮಾಲಿನಿ ಕೆನ್ನೆಗೆ ಹೋಲಿಸಿದ್ದ ಆಮ್ ಆದ್ಮಿ ಪಕ್ಷದ ಶಾಸಕನ ವಿರುದ್ಧ ಕ್ರಮ ಕೈಗೊಳ್ಳುವಂತೆ ಬಿಜೆಪಿ ಒತ್ತಾಯಿಸಿದೆ. ಫೇಸ್‌ಬುಕ್ ಲೈವ್‌ನಲ್ಲಿ ನಟಿ-ರಾಜಕಾರಣಿ ಹೇಮಾ ಮಾಲಿನಿ ಬಗ್ಗೆ ಟೀಕೆ ಮಾಡಿದ್ದಕ್ಕಾಗಿ ಎಎಪಿ ಶಾಸಕ ನರೇಶ್ ಬಲ್ಯಾನ್ ಅವರನ್ನು ದೆಹಲಿಯ ಬಿಜೆಪಿ ಟೀಕಿಸಿದೆ. ಉತ್ತಮ್ ನಗರದ ರಸ್ತೆಗಳನ್ನು ಹೇಮಾ ಮಾಲಿನಿಯ ಕೆನ್ನೆಯಂತೆ ನುಣುಪಾಗಿಸುತ್ತೇನೆ ಎಂದು ಹೇಳಿಕೆ ನೀಡಿದ್ದರು.

ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿರುವ ವಿಡಿಯೋ ಕ್ಲಿಪ್ ನಲ್ಲಿ ಆಪ್ ಶಾಸಕ ಈ ತಿಂಗಳೊಳಗಾಗಿ ಎಲ್ಲಾ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸಲಾಗುವುದು, ಉತ್ತಮ್ ನಗರದ ರಸ್ತೆಗಳನ್ನು ಹೇಮಾ ಮಾಲಿನಿ ಕೆನ್ನೆಯಂತೆ ಮಾಡಲಾಗುತ್ತದೆ ಎಂದು ಹೇಳಿದ್ದಾರೆ.

ಮಹಿಳೆಯರಿಗೆ ಅಗೌರವ ತೋರಿದ ಶಾಸಕರನ್ನು ಎಎಪಿ ಮುಖ್ಯಸ್ಥ ಅರವಿಂದ್ ಕೇಜ್ರಿವಾಲ್ ಉಚ್ಚಾಟಿಸಬೇಕು ಎಂದು ಬಿಜೆಪಿ ಆಗ್ರಹಿಸಿದೆ. ಎಎಪಿ ಶಾಸಕಿ ಸ್ವಾತಿ ಮಲಿವಾಲ್ ಮತ್ತು ಮಾಜಿ ರಾಷ್ಟ್ರೀಯ ಮಹಿಳಾ ಆಯೋಗದ ಮುಖ್ಯಸ್ಥೆ ರೇಖಾ ಶರ್ಮಾ ಅವರು ಬಲ್ಯಾನ್ ಅವರ ಹೇಳಿಕೆಯನ್ನು ಸ್ತ್ರೀದ್ವೇಷ ಎಂದು ಖಂಡಿಸಿದರು.

ಸ್ವಾತಿ ಮಲಿವಾಲ್ ಮಾತನಾಡಿ, ಉತ್ತಮನಗರದ ರಸ್ತೆಗಳು ಹದಗೆಟ್ಟ ಸ್ಥಿತಿಯಲ್ಲಿವೆ ಆದರೆ ಈ ವ್ಯಕ್ತಿ ಹತ್ತು ವರ್ಷಗಳಿಂದ ಮಲಗಿದ್ದಾನೆ. ಹೆಣ್ಣನ್ನು ವಸ್ತುವನ್ನಾಗಿ ಪರಿಗಣಿಸುವ ಇಂತಹ ಅಗ್ಗದ ಚಿಂತನೆಗೆ ಸಮಾಜದಲ್ಲಿ ಸ್ಥಾನವಿಲ್ಲ. ಮಹಿಳಾ ವಿರೋಧಿ ಚಿಂತನೆ ಹೊಂದಿರುವ ಈ ವ್ಯಕ್ತಿಯ ವಿರುದ್ಧ ತಕ್ಷಣ ಕ್ರಮ ಕೈಗೊಳ್ಳುವಂತೆ ಅರವಿಂದ್ ಕೇಜ್ರಿವಾಲ್ ಅವರಿಗೆ ಮನವಿ ಮಾಡಲಾಗಿದೆ ಎಂದರು.

ಬಾಲ್ಯಾನ್ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆ ಎಎಪಿಯನ್ನು ಒತ್ತಾಯಿಸಿದ ಮಹಿಳಾ ಆಯೋಗದ ಮುಖ್ಯಸ್ಥೆ ರೇಖಾ ಶರ್ಮಾ, ಇಂತಹ ಜನರನ್ನು ವ್ಯವಸ್ಥೆಯಿಂದ ಹೊರಹಾಕಬೇಕು ಎಂದು ಪ್ರತಿಪಾದಿಸಿದರು.

## ಇಂದು ಅಮೆರಿಕ ಅಧ್ಯಕ್ಷೀಯ ಚುನಾವಣೆ

# ಹ್ಯಾರಿಸ್- ಡೊನಾಲ್ಡ್ ಟ್ರಂಪ್



**ವಾಷಿಂಗ್ಟನ್ :** ವಿಶ್ವದ ಅತ್ಯಂತ ಹಳೆಯ ಪ್ರಜಾಪ್ರಭುತ್ವ ಅಮೆರಿಕದಲ್ಲಿ ರಾಷ್ಟ್ರೀಯ ಚುನಾವಣೆಗೆ ಸಿದ್ಧವಾಗಿದೆ. ಅಮೆರಿಕದ ಮತದಾರರು ತಮ್ಮ ನಾಲ್ಕು ವರ್ಷಗಳ ಭವಿಷ್ಯವನ್ನು ನವೆಂಬರ್ 5 ರಂದು ಆಯ್ಕೆ ಮಾಡುತ್ತಾರೆ. ಈ ಚುನಾವಣೆಯಲ್ಲಿ ಉಪಾಧ್ಯಕ್ಷೆ ಕಮಲಾ ಹ್ಯಾರಿಸ್ ಮತ್ತು ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನಡುವೆ ಪ್ರಮುಖ ಸ್ಪರ್ಧೆ ಏರ್ಪಟ್ಟಿದೆ. ಚುನಾವಣಾ ದಿನಕ್ಕೂ ಮುನ್ನವೇ ಕೋಟ್ಯಂತರ ಮತದಾರರು ತಮ್ಮ ಹಕ್ಕು ಚಲಾಯಿಸಿದ್ದು, ಆರಂಭಿಕ ಮತದಾನದ ಅಂಕಿಅಂಶಗಳು ಬರಲಾರಂಭಿಸಿವೆ. ಅಧ್ಯಕ್ಷರ ಅಧಿಕಾರಾವಧಿಯು ಜನವರಿ 2025 ರಿಂದ ನಾಲ್ಕು ವರ್ಷಗಳವರೆಗೆ ಇರುತ್ತದೆ.

ಮಂಗಳವಾರ ಮಾತ್ರ ಮತದಾನ ಅಮೆರಿಕದಲ್ಲಿ ಪ್ರತಿ 4 ವರ್ಷಗಳಿಗೊಮ್ಮೆ ಎಲ್ಲಾ ರಾಜ್ಯಗಳಲ್ಲಿ ಒಂದೇ ದಿನದಲ್ಲಿ ನಡೆಯುವ ಅಧ್ಯಕ್ಷೀಯ ಚುನಾವಣೆ ನವೆಂಬರ್ ನ ಮೊದಲ ಮಂಗಳವಾರದ ದಿನದಂದೇ ನಡೆಯಲಿದೆ. ಈ ಕಾನೂನನ್ನು 1845ರಲ್ಲಿ ಜಾರಿಗೊಳಿಸಲಾಯಿತು. 180 ವರ್ಷಗಳ ಹಿಂದೆ ಅಮೆರಿಕ ಬಹುತೇಕ ಕೃಷಿ ಪ್ರಧಾನ ರಾಷ್ಟ್ರವಾಗಿತ್ತು. ನವೆಂಬರ್ ಆರಂಭದ ದಿನಗಳಲ್ಲಿ ರೈತರಿಗೆ ಕೃಷಿ ಕೆಲಸಗಳೇ ಹೆಚ್ಚಿರುತ್ತಿದ್ದವು. ಬಹುತೇಕ ಕ್ರಿಶ್ಚಿಯನ್ನರು ಭಾನುವಾರದಂದು ಚರ್ಚ್ ಗೆ ಹೋಗುತ್ತಿದ್ದರು. ಉಳಿದ ದಿನ ಮಾರಾಟ, ಖರೀದಿ ಸೇರಿದಂತೆ ಹಲವು ಕೆಲಸಗಳಿರುತ್ತಿದ್ದವು. ಆ ಕಾರಣದಿಂದ ಮಂಗಳವಾರವನ್ನು ನಿಗದಿಪಡಿಸಲಾಯಿತು.

ಜನವರಿಯಲ್ಲಿ ನಡೆಯಲಿದೆ ಮತ ಎಣಿಕೆ ಜನವರಿ 6 ರಂದು ಮತ ಎಣಿಕೆ ನಡೆಯಲಿದೆ, ಅಧ್ಯಕ್ಷರಾಗಿ ಆಯ್ಕೆಯಾದವರು ಜನವರಿ 20ರಂದು ಅಧಿಕಾರ ಗದ್ದುಗೆ ಏರುತ್ತಾರೆ. ನವೆಂಬರ್ ನಲ್ಲಿ ಆಯ್ಕೆಯಾದ ಎಲೆಕ್ಟರ್ಸ್ ಡಿಸೆಂಬರ್ ನ ಮೊದಲ ಬುಧವಾರದ ನಂತರದ ಮಂಗಳವಾರದಂದು ತಮ್ಮ ರಾಜ್ಯಗಳಲ್ಲಿ ಭೇಟಿಯಾಗುತ್ತಾರೆ. ಆಗ ಇಲ್ಲಿ ಅಧ್ಯಕ್ಷ ಮತ್ತು ಉಪಾಧ್ಯಕ್ಷರನ್ನು ಆರಿಸಲಾಗುತ್ತದೆ. ಮತ್ತು ಸಹಿ ಮಾಡಿದ ಪ್ರಮಾಣಪತ್ರಗಳನ್ನು ವಾಷಿಂಗ್ಟನ್ ಡಿಸಿಗೆ ಕಳುಹಿಸಲಾಗುತ್ತದೆ.

ಚುನಾವಣೆಯಲ್ಲಿ ಟ್ರಂಪ್ ಗೆಲುವು ಸಾಧಿಸಿದಲ್ಲಿ ಹಲವು ಪ್ರಕರಣಗಳಲ್ಲಿ ದೋಷಾರೋಪ ಹೊತ್ತು ಅಧ್ಯಕ್ಷರಾದ ಮೊದಲಿಗ ಎನ್ನಿಸಿಕೊಳ್ಳಲಿದ್ದಾರೆ. ಈ ಮೂಲಕ ತನ್ನ ಮೇಲಿನ ಬಾಕಿ ಕೇಸ್ ಗಳನ್ನು ಕೊನೆಗೊಳಿಸುವ ಅಧಿಕಾರವನ್ನೂ ಪಡೆಯಲಿದ್ದಾರೆ. ಕಮಲಾ ಅವರು ಗೆಲುವು ಸಾಧಿಸಿದಲ್ಲಿ ಮೊದಲ ಕಪ್ಪು ಮಹಿಳೆ ಮತ್ತು ದಕ್ಷಿಣ ಏಷ್ಯಾ ಮೂಲದ ಮೊದಲ ವ್ಯಕ್ತಿಯಾಗಲಿದ್ದಾರೆ. ಅಮೆರಿಕದ ಅಧ್ಯಕ್ಷೀಯ ಚುನಾವಣೆ ಇತರ ದೇಶಗಳಿಂದ ವಿಭಿನ್ನವಾಗಿದೆ.

ಇಲ್ಲಿ 50 ರಾಜ್ಯಗಳು ಮತ್ತು 6 ಕೇಂದ್ರಾಡಳಿತ ಪ್ರದೇಶಗಳಿಂದ ಒಟ್ಟು 538 ಎಲೆಕ್ಟರ್ಸ್ ಚುನಾಯಿತರಾಗುತ್ತಾರೆ. ಪ್ರತಿ ರಾಜ್ಯದಿಂದ ಆಯ್ಕೆಯಾದ ಎಲೆಕ್ಟರ್ಸ್ ಸಂಖ್ಯೆ ಭಿನ್ನವಾಗಿರುತ್ತದೆ. ಸಾಮಾನ್ಯವಾಗಿ, ಹೆಚ್ಚು ಮತಗಳನ್ನು ಪಡೆದ ಅಭ್ಯರ್ಥಿಗಳಿಗೆ ಆಯಾ ರಾಜ್ಯದ ಅಧಿಕಾರ ಲಭಿಸುತ್ತದೆ. 54 ಸ್ಥಾನಗಳನ್ನು ಹೊಂದಿರುವ ಕ್ಯಾಲಿಫೋರ್ನಿಯಾ ಜನಸಂಖ್ಯಾ ದೃಷ್ಟಿಯಲ್ಲಿ ದೊಡ್ಡ ರಾಜ್ಯವಾಗಿದೆ. ಈ ರಾಜ್ಯದಲ್ಲಿ ಹೆಚ್ಚು ಸ್ಥಾನ ಗೆದ್ದವರು ಸಂಪೂರ್ಣ 54 ಸ್ಥಾನಗಳಲ್ಲೂ ವಿಜಯಿಶಾಲಿಗಳಾಗಲಿದ್ದಾರೆ.

ಇದನ್ನು 'ವಿನ್ನರ್‌ಟೇಕ್ಸ್ ಆಲ್' ನಿಯಮ ಎಂದು ಕರೆಯಲಾಗುತ್ತದೆ. ಉದಾಹರಣೆಗೆ ಕಮಲಾ ಹ್ಯಾರಿಸ್ 34 ಸ್ಥಾನ ಗೆದ್ದು ಡೊನಾಲ್ಡ್ ಟ್ರಂಪ್ 20 ಜಯಿಸಿದರೆ, ಎಲ್ಲ 54 ಸ್ಥಾನಗಳು ಕಮಲಾ ಹ್ಯಾರಿಸ್ ಪಾಲಾಗುತ್ತದೆ. ಈ ಕಾರಣದಿಂದ 2016ರ ಚುನಾವಣೆಯಲ್ಲಿ ಹಿಲರಿ ಕ್ಲಿಂಟನ್‌ಗಿಂತ 28.6 ಲಕ್ಷ ಕಡಿಮೆ ಮತಗಳನ್ನು ಪಡೆದರೂ ಡೊನಾಲ್ಡ್ ಟ್ರಂಪ್ ಅಧ್ಯಕ್ಷರಾಗಿದ್ದರು. ಎರಡು ಬಾರಿ ಮಾತ್ರ ಅಧ್ಯಕ್ಷರಾಗಬಹುದು 1947ರಲ್ಲಿ ಜಾರಿಗೊಳಿಸಿದ 22ನೇ ಸಾಂವಿಧಾನಿಕ ತಿದ್ದುಪಡಿಯಂತೆ ಅಮೆರಿಕದಲ್ಲಿ ಒಬ್ಬ ವ್ಯಕ್ತಿಯು ಕೇವಲ 2 ಅವಧಿಗಷ್ಟೇ ಅಧ್ಯಕ್ಷರಾಗಬಹುದು. 1932ರಲ್ಲಿ ಅಧ್ಯಕ್ಷರಾಗಿ ಆಯ್ಕೆಯಾಗಿದ್ದ ಫ್ರಾಂಕ್ಲಿನ್ ಡಿ, ರೂಸ್‌ವೆಲ್ಟ್ 4 ಬಾರಿ ಅಧ್ಯಕ್ಷರಾಗಿ ಆಯ್ಕೆಯಾಗಿದ್ದರು. ಅಮೆರಿಕದ ಅಧ್ಯಕ್ಷರಾಗಬೇಕಾದರೆ ಅಮೆರಿಕದಲ್ಲಿ ಜನಿಸಿರಬೇಕು. ಕನಿಷ್ಠ ವಯಸ್ಸು 32 ವರ್ಷಗಳಾಗಿರಬೇಕು ಹಾಗೂ ಕನಿಷ್ಠ 14 ವರ್ಷ ಅಮೆರಿಕ ನಿವಾಸಿಯಾಗಿರಬೇಕು. ಒಂದು ವೇಳೆ ಹಾಲಿ ಅಧ್ಯಕ್ಷರು ಅಧಿಕಾರದಲ್ಲಿದ್ದಾಗ ಮೃತಪಟ್ಟರೆ ನಿಯಮದಂತೆ ಉಪಾಧ್ಯಕ್ಷರು ಅಧ್ಯಕ್ಷರಾಗುತ್ತಾರೆ.

# ಆಗ್ರಾ, ಬಳಿ ಮಿಗ್-29 ಯುದ್ಧ ವಿಮಾನ ಪತನ; ಪೈಲಟ್‌ಗಳು ಪಾರು



**ಆಗ್ರಾ:** ಉತ್ತರ ಪ್ರದೇಶದ ಆಗ್ರಾ, ಬಳಿ ಸೋಮವಾರ ಮಿಗ್-29 ಯುದ್ಧ ವಿಮಾನ ಪತನಗೊಂಡಿದೆ. ಇಬ್ಬರು ಪೈಲಟ್‌ಗಳು ಸುರಕ್ಷಿತವಾಗಿ ವಿಮಾನದಿಂದ ಹೊರಬಿದ್ದಿದ್ದಾರೆ. ಇದರಿಂದ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ. ಯುದ್ಧ ವಿಮಾನವು ಪಂಜಾಬ್‌ನ ಆದಂಪುರದಿಂದ ಟೇಕ್ ಆಫ್ ಆಗಿದ್ದು, ಆಗ್ರಾಕ್ಕೆ ತೆರಳುತ್ತಿದ್ದಾಗ ಈ ಘಟನೆ ನಡೆದಿದೆ. ಫೈಟರ್ ಜೆಟ್ ನೆಲಕ್ಕೆ ಅಪ್ಪಳಿಸಿದ ಕೂಡಲೇ ಬೆಂಕಿಯ ಜ್ವಾಲೆ ಕಾಣಿಸಿಕೊಂಡಿತು. ಪೈಲಟ್ ಸೇರಿದಂತೆ ಇಬ್ಬರು ಜೆಟ್?ನಿಂದ ಹಾರುವ ಮೂಲಕ ತಮ್ಮ ಪ್ರಾಣವನ್ನು ಉಳಿಸಿಕೊಂಡರು. ಇಬ್ಬರೂ ಪೈಲಟ್‌ಗಳು ಅಪಘಾತದ ಸ್ಥಳದಿಂದ 2 ಕಿಲೋಮೀಟರ್ ದೂರದಲ್ಲಿ ತಮ್ಮನ್ನು ತಾವು ಹೊರಹಾಕಿದ್ದಾರೆ.

# ನ್ಯಾಯಾಂಗದ ಸ್ವಾತಂತ್ರ್ಯವೆಂದರೆ ಯಾವಾಗಲೂ ಸರ್ಕಾರದ ವಿರುದ್ಧ ತೀರ್ಪು ನೀಡುವುದಲ್ಲ



**ದೆಹಲಿ:** ನ್ಯಾಯಾಂಗದ ಸ್ವಾತಂತ್ರ್ಯ ಎಂದರೆ ಯಾವಾಗಲೂ ಸರ್ಕಾರದ ವಿರುದ್ಧ ತೀರ್ಪು ನೀಡುವುದು ಎಂದಲ್ಲ ಎಂದು ಮುಖ್ಯ ನ್ಯಾಯಮೂರ್ತಿ ಡಿವೈ ಚಂದ್ರಚೂಡ್ ಹೇಳಿದ್ದಾರೆ. ಕೆಲವು ಗುಂಪುಗಳು ತಮ್ಮ ಪರವಾಗಿ ತೀರ್ಪು ನೀಡುವಂತೆ ನ್ಯಾಯಾಲಯಗಳ ಮೇಲೆ ಒತ್ತಡ ಹೇರಲು ಮಾಧ್ಯಮವನ್ನು ಬಳಸಿಕೊಳ್ಳಲು ಪ್ರಯತ್ನಿಸುತ್ತಿವೆ ಎಂದರು.

ಇಂಡಿಯನ್ ಎಕ್ಸ್‌ಪ್ರೆಸ್ ಗ್ರೂಪ್ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಸಿಜೆಐ, ಪ್ರಕರಣಗಳ ಬಗ್ಗೆ ನಿರ್ಧಾರಗಳನ್ನು ತೆಗೆದುಕೊಳ್ಳುವಾಗ ನ್ಯಾಯಮೂರ್ತಿಗಳನ್ನು ನಂಬುವಂತೆ ಜನರಲ್ಲಿ ಕೇಳಿಕೊಂಡರು. ನ್ಯಾಯಮೂರ್ತಿಗಳು ತಮ್ಮ ಆತ್ಮಸಾಕ್ಷಿಯು ಅವರಿಗೆ ಏನು ಹೇಳುತ್ತದೆ ಎಂಬುದನ್ನು ನಿರ್ಧರಿಸುವ ಸ್ವಾತಂತ್ರ್ಯವನ್ನು ಹೊಂದಿರಬೇಕು.

ತೀರ್ಪು ಯಾರ ಪರವಾಗಿ ಬಂದರೂ ನ್ಯಾಯದ ಕಡೆಯೇ ಇರುತ್ತದೆ ಎಂಬುದನ್ನು ನಂಬಬೇಕಿದೆ. ಸರ್ಕಾರ ವಿರುದ್ಧ ತೀರ್ಪು ನೀಡಿದಾಗ ಅದು ಸರಿ ಸರ್ಕಾರದ ಪರ ತೀರ್ಪು ನೀಡಿದಾಗ ಅದು ತಪ್ಪು ಎನ್ನುವಂತಿಲ್ಲ ಏಕೆಂದರೆ ಸರ್ಕಾರದ ವಿರುದ್ಧ ಹೋಗಬೇಕಾದ ಪ್ರಕರಣಗಳಲ್ಲಿ ಅವರ ವಿರುದ್ಧವೂ ತೀರ್ಪು ನೀಡಿದ್ದೇವೆ. ಏನೇ ನಿರ್ಣಯಿಸಬೇಕಿದ್ದರೂ ಕಾನೂನಿನ ಪ್ರಕಾರವೇ ಹೋಗಬೇಕು ಎಂದು ಹೇಳಿದ್ದಾರೆ.

ಗಣೇಶ ಪೂಜೆಯಂದು ನನ್ನ ನಿವಾಸಕ್ಕೆ ಪ್ರಧಾನಿ ಮೋದಿ ಭೇಟಿ ನೀಡಿದ್ದರಲ್ಲಿ ಯಾವುದೇ ತಪ್ಪಿಲ್ಲ, ಅದು ಸಾರ್ವಜನಿಕ ಭೇಟಿಯೇ ಹೊರತು ಖಾಸಗಿ ಭೇಟಿಯಾಗಿರಲಿಲ್ಲ. ನ್ಯಾಯಾಂಗ ಮತ್ತು ಕಾರ್ಯಾಂಗದ ಪ್ರತಿನಿಧಿಗಳ ಭೇಟಿಯಲ್ಲಿ ತಪ್ಪೇನಿಲ್ಲ ಎಂದು ಚಂದ್ರಚೂಡ್ ಹೇಳಿದ್ದಾರೆ. ಚಂದ್ರಚೂಡ್ ಅವರು ಈ ನವೆಂಬರ್ 10 ರಂದು ನಿವೃತ್ತರಾಗುತ್ತಿದ್ದಾರೆ.

# ಎಲ್ಲಾ ಖಾಸಗಿ ಆಸ್ತಿಗಳನ್ನು ಸರ್ಕಾರ ಸ್ವಾಧೀನಪಡಿಸಿಕೊಳ್ಳಲು ಸಾಧ್ಯವಿಲ್ಲ



**ನವದೆಹಲಿ:** ಎಲ್ಲಾ ಖಾಸಗಿ ಆಸ್ತಿಗಳನ್ನು ಸರ್ಕಾರ ಸ್ವಾಧೀನಪಡಿಸಿಕೊಳ್ಳಲು ಸಾಧ್ಯವಿಲ್ಲ ಎಂದು ಸುಪ್ರೀಂಕೋರ್ಟ್ ಹೇಳಿದೆ. ಖಾಸಗಿ ಆಸ್ತಿಗಳ ಸ್ವಾಧೀನಕ್ಕೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್‌ನ ಒಂಬತ್ತು ನ್ಯಾಯಮೂರ್ತಿಗಳ ಪೀಠ ಮಂಗಳವಾರ ಮಹತ್ವದ ತೀರ್ಪು ನೀಡಿದೆ. ಸಂವಿಧಾನದ ಪರಿಚ್ಛೇದ 39(ಬಿ) ಅಡಿಯಲ್ಲಿ ಪ್ರತಿಯೊಂದು ಖಾಸಗಿ ಆಸ್ತಿಯನ್ನು ಸಮುದಾಯದ ಆಸ್ತಿಯ ಭಾಗವಾಗಿ ಪರಿಗಣಿಸಲಾಗುವುದಿಲ್ಲ ಎಂದು ಮುಖ್ಯ ನ್ಯಾಯಮೂರ್ತಿ ಡಿವೈ ಚಂದ್ರಚೂಡ್ ನೇತೃತ್ವದ ಪೀಠ ಹೇಳಿದೆ.

ಖಾಸಗಿ ಆಸ್ತಿಯು ಸಮುದಾಯದ ಭೌತಿಕ ಸಂಪನ್ಮೂಲಗಳ ಭಾಗವಾಗಿರಬಹುದು. ಆದರೆ ವ್ಯಕ್ತಿಯ ಒಡೆತನದ ಪ್ರತಿಯೊಂದು ಸಂಪನ್ಮೂಲವು ಸಮುದಾಯದ ಭೌತಿಕ ಸಂಪನ್ಮೂಲಗಳ ಭಾಗವಾಗಿರುವುದು ಅನಿವಾರ್ಯವಲ್ಲ ಎಂದು ಪೀಠವು ಮೂರು ಭಾಗಗಳ ತೀರ್ಪಿನಲ್ಲಿ ಹೇಳಿದೆ.

ಈ ತೀರ್ಪಿನೊಂದಿಗೆ, ಎಲ್ಲಾ ಖಾಸಗಿ ಆಸ್ತಿಗಳನ್ನು ಸರ್ಕಾರ ಸ್ವಾಧೀನಪಡಿಸಿಕೊಳ್ಳಬಹುದು ಎಂದು ಹೇಳಿದ್ದ ನ್ಯಾಯಮೂರ್ತಿ ಕೃಷ್ಣ ಅಯ್ಯರ್ ಅವರ 1978 ರ ತೀರ್ಪನ್ನು ಸುಪ್ರೀಂ ಕೋರ್ಟ್ ರದ್ದುಗೊಳಿಸಿತು.

ಪ್ರತಿಯೊಂದು ಖಾಸಗಿ ಆಸ್ತಿಯನ್ನು ಸಮುದಾಯದ ಆಸ್ತಿ ಎಂದು ಕರೆಯಲು ಸಾಧ್ಯವಿಲ್ಲ ಎಂದು ಸುಪ್ರೀಂ ಕೋರ್ಟ್ ಹೇಳಿದೆ. ಈ ವರ್ಷದ ಮೇ 1 ರಂದು ವಿಚಾರಣೆ ನಡೆಸಿದ ನಂತರ ಸಂವಿಧಾನ ಪೀಠವು ಖಾಸಗಿ ಆಸ್ತಿ ಪ್ರಕರಣದ ತನ್ನ ತೀರ್ಪನ್ನು ಕಾಯ್ದಿರಿಸಿತ್ತು.

ಇಂದಿನ ಆರ್ಥಿಕ ರಚನೆಯಲ್ಲಿ ಖಾಸಗಿ ವಲಯಕ್ಕೆ ಪ್ರಾಮುಖ್ಯತೆ ಇದೆ ಎಂದು ಸಿಜೆಐ ಹೇಳಿದರು. ತೀರ್ಪು ನೀಡುವಾಗ, ಪ್ರತಿಯೊಂದು ಖಾಸಗಿ ಆಸ್ತಿಯನ್ನು ಸಮುದಾಯದ ಆಸ್ತಿ ಎಂದು ಕರೆಯಲಾಗುವುದಿಲ್ಲ ಎಂದು ಹೇಳಿದರು. ಆಸ್ತಿಯ ಸ್ಥಿತಿಗತಿ, ಸಾರ್ವಜನಿಕ ಹಿತಾಸಕ್ತಿಯಲ್ಲಿ ಅದರ ಅಗತ್ಯತೆ ಮತ್ತು ಅದರ ಕೊರತೆಯಂತಹ ಪ್ರಶ್ನೆಗಳು ಖಾಸಗಿ ಆಸ್ತಿಗೆ ಸಮುದಾಯದ ಆಸ್ತಿಯ ಸ್ಥಾನಮಾನವನ್ನು ನೀಡಬಹುದು ಎಂದು ಹೇಳಿದ್ದಾರೆ.

# ಪ್ರೇಯಸಿಯರ ಜತೆ ಸೇರಿ ಪತ್ನಿಯನ್ನೇ ಹತ್ಯೆಗೈದ ಪತಿ



**ಭುವನೇಶ್ವರ:** ಪತಿಯ ಅನೈತಿಕ ಸಂಬಂಧದ ಬಗ್ಗೆ ತಿಳಿದು ಪ್ರಶ್ನೆ ಮಾಡಿದ್ದಕ್ಕೆ ಇಬ್ಬರು ಪ್ರೇಯಸಿಯರ ಜತೆ ಸೇರಿ ವ್ಯಕ್ತಿಯೊಬ್ಬ ಪತ್ನಿಯನ್ನೇ ಕೊಲೆ ಮಾಡಿರುವ ಘಟನೆ ಒಡಿಶಾದಲ್ಲಿ ನಡೆದಿದೆ. ಭುವನೇಶ್ವರದಲ್ಲಿ ಘಟನೆ ನಡೆದಿದೆ, ಪೊಲೀಸರ ಪ್ರಕಾರ, ಸಂತ್ರಸ್ತೆ ಶುಭಶ್ರೀ ಎಂಬುವವರು ಅಕ್ಟೋಬರ್ 28 ರಂದು ಸಾವನ್ನಪ್ಪಿದ್ದಾರೆ.

ಆಕೆ ಆತ್ಮಹತ್ಯೆಗೆ ಯತ್ನಿಸಿದ್ದಾಳೆಂದು ಆರೋಪಿಗಳು ಆಸ್ಪತ್ರೆಗೆ ಕರೆದೊಯ್ದಿದ್ದರು. ಅಲ್ಲಿ ವೈದ್ಯರು ಆಕೆ ಮೃತಪಟ್ಟಿರುವುದಾಗಿ ತಿಳಿಸಿದ್ದಾರೆ. ಪತ್ನಿ ಆತ್ಮಹತ್ಯೆ ಮಾಡಿಕೊಂಡಿದ್ದಾಳೆ ಎಂದು ಪ್ರದ್ಯುಮ್ನ ಪೊಲೀಸರಿಗೆ ತಿಳಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಶವವನ್ನು ಮರಣೋತ್ತರ ಪರೀಕ್ಷೆಗೆ ರವಾನಿಸಿ ತನಿಖೆ ಆರಂಭಿಸಿದ್ದಾರೆ.

ಮರಣೋತ್ತರ ಪರೀಕ್ಷೆಯ ವರದಿಯನ್ನು ಕೂಲಂಕಷವಾಗಿ ಅಧ್ಯಯನ ಮಾಡಿದ ನಂತರ, ಇದು ಕೆಲವು ವಿಚಲಿತ ಸಂಗತಿಗಳನ್ನು ಬಹಿರಂಗಪಡಿಸಿತು. ಅವಳ ಕೈಗಳ ಮೇಲೆ ಮತ್ತು ಕುತ್ತಿಗೆಯ ಸುತ್ತಲೂ ಮೂಗೇಟುಗಳಿದ್ದವು. ಬಳಿಕ ಪತಿಯ ತನಿಖೆ ನಡೆಸಿದಾಗ ತನ್ನಿಬ್ಬರು ಪ್ರೇಯಸಿಯರ ಜತೆ ಸೇರಿ ಪತ್ನಿಯನ್ನು ಕೊಂದಿರುವುದಾಗಿ ಒಪ್ಪಿಕೊಂಡಿದ್ದಾರೆ.

ದಾಸ್ ಇಬ್ಬರು ಮಹಿಳೆಯರೊಂದಿಗೆ ವಿವಾಹೇತರ ಸಂಬಂಧ ಹೊಂದಿದ್ದರು ಎಂದು ತನಿಖೆಯಿಂದ ತಿಳಿದುಬಂದಿದೆ. ಇದೇ ವಿಚಾರಕ್ಕೆ ಇಬ್ಬರ ನಡುವೆ ಜಗಳ ನಡೆದಿತ್ತು. ಕೊನೆಗೆ ಆಕೆ ತನ್ನ ಮನೆ ಬಿಟ್ಟು ತಾಯಿಯ ಮನೆಗೆ ಹೋಗಿದ್ದಳು. ಕಳೆದ ಟು ತಿಂಗಳಿನಿಂದ ಆಕೆ ತನ್ನ ಪೋಷಕರ ಮನೆಯಲ್ಲಿ ವಾಸವಾಗಿದ್ದಳು. ಅಕ್ಟೋಬರ್? 28ರಂದು ವ್ಯಕ್ತಿಯನ್ನು ಕರೆಸಿಕೊಂಡು, ನಿದ್ರೆ ಮಾತ್ರೆ ಕೊಟ್ಟು ಆಕೆಯನ್ನು ಹತ್ಯೆ ಮಾಡಿದ್ದಾರೆ.

ಮತ್ತೊಂದು ಘಟನೆ ಅನೈತಿಕ ಸಂಬಂಧಕ್ಕೆ ಅಡ್ಡಿಯಾಗಿದ್ದಾನೆಂದು ಇಬ್ಬರು ಪ್ರಿಯಕರ ಜತೆ ಸೇರಿ ಗಂಡನನ್ನೇ ಕೊಂದ ಪತ್ನಿ ಮಹಿಳೆಯೋರ್ವಳು ತನ್ನ ಅಕ್ರಮ ಸಂಬಂಧಕ್ಕೆ ಅಡ್ಡಿಯಾಗಿದ್ದಾನೆಂದಯ ತಾಳಿ ಕಟ್ಟಿದ ಗಂಡನನ್ನೇ ಕೊಂದಿರುವ ಘಟನೆ ಮೈಸೂರು ಜಿಲ್ಲೆಯ ನಂಜನಗೂಡು ತಾಲ್ಲೂಕಿನ ಮಡುವಿಹಳ್ಳಿಯಲ್ಲಿ ನಡೆದಿದೆ.

ನಂಜನಗೂಡು ತಾಲ್ಲೂಕಿನ ಮಲ್ಕುಂಡಿ ಗ್ರಾಮದ ಸದಾಶಿವ(43) ಎಂಬ ವ್ಯಕ್ತಿಯನ್ನು ಸರ್ಕಾರಿ ಶಾಲೆಯ ಬಳಿ ಕೊಲೆಯಾಗಿತ್ತು. ಪತ್ನಿ ರಾಜೇಶ್ವರಿ ಹಾಗೂ ತನ್ನಿಬ್ಬರು ಗೆಳೆಯರಾದ ರಂಗಸ್ವಾಮಿ, ಶಿವಯ್ಯ ಎನ್ನುವರ ಜೊತೆ ಸೇರಿಕೊಂಡು ಪತಿಯನ್ನೇ ಕೊಂದಿದ್ದಳು. ಬಳಿಕ ವಾಮಾಚಾರಕ್ಕಾಗಿ ಕೊಲೆ ಮಾಡಲಾಗಿದೆ ಎಂದು ಬಿಂಬಿಸಿ ರಾಜೇಶ್ವರಿ ಬಿಕ್ಕಿಬಿಕ್ಕಿ ಅತ್ತಿದ್ದಳು. ಆದ್ರೆ, ಪೊಲೀಸರು ತನಿಖೆ ನಡೆಸಿದಾಗ ಪತ್ನಿಯ ಆಟ ಬಯಲಾಗಿತ್ತು.

ಮೈಸೂರು ಜಿಲ್ಲೆಯಲ್ಲೊಂದು ಐನಾತಿ ಪತ್ನಿಯ ನಿಜ ಬಣ್ಣವನ್ನು ಪೊಲೀಸ್ರು ಬಟಾಬಯಲು ಮಾಡಿದ್ದಾರೆ. ತನ್ನ ರಂಗಿನಾಟಕ್ಕೆ ಪತಿ ಅಡ್ಡ ಬರ್ತಾನೆ ಎಂದು ತಿಳಿದ ಪತ್ನಿ ವಾಮಾಚಾರದ ಹೆಸರಲ್ಲಿ ಪತಿಕೊಂದು ಕಥೆ ಕಟ್ಟಿ ಸಿಕ್ಕಿಬಿದ್ದಿದ್ದಾಳೆ. ಅಂದ ಹಾಗೆ ಮೈಸೂರು ಜಿಲ್ಲೆ ನಂಜನಗೂಡು ತಾಲೂಕಿನ ಹುಲ್ಲಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದ್ದ ಕೊಲೆ ಪ್ರಕರಣವೊಂದನ್ನು ಭೇದಿಸುವಲ್ಲಿ ಯಶಸ್ವಿಯಾಗಿದ್ದಾರೆ.

# ಮಹಾರಾಷ್ಟ್ರ ಚುನಾವಣೆಯಿಂದ ಹಿಂದೆ ಸರಿದ ಮನೋಜ್ ಜಾರಂಗೆ ಪಾಟೀಲ್



**ಮಹಾರಾಷ್ಟ್ರ:** ಮರಾಠ ಸಮುದಾಯಕ್ಕೆ ಮೀಸಲಾತಿಗೆ ಆಗ್ರಹಿಸಿ ಅನಿರ್ದಿಷ್ಟಾವಧಿ ಉಪವಾಸ ಸತ್ಯಾಗ್ರಹ ಆರಂಭಿಸಿದ್ದ ಮನೋಜ್ ಜಾರಂಗೆ ಪಾಟೀಲ್ ಮಹಾರಾಷ್ಟ್ರ ಚುನಾವಣೆಯಿಂದ ಹಿಂದೆ ಸರಿದಿದ್ದು , ತಮ್ಮ ಅಭ್ಯರ್ಥಿಗಳು ನಾಮಪತ್ರ ಹಿಂಪಡೆಯುವಂತೆ ಮನವಿ ಮಾಡಿದ್ದಾರೆ.

ನವೆಂಬರ್ 20 ರ ಚುನಾವಣೆಯಲ್ಲಿ 10-15 ಅಭ್ಯರ್ಥಿಗಳನ್ನು ಬೆಂಬಲಿಸುವುದಾಗಿ ಹೇಳಿದ ಒಂದು ದಿನದ ನಂತರ ಯೂ-ಟರ್ನ್ ತೆಗೆದುಕೊಂಡಿದ್ದಾರೆ. ಜಾಲ್ನಾದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಮ್ಮ ನಿರ್ಧಾರವನ್ನು ಒತ್ತಡದಿಂದ ತೆಗೆದುಕೊಂಡಿಲ್ಲ, ಮೀಸಲಾತಿ ಕುರಿತ ಅಭಿಯಾನ ಮುಂದುವರೆಯುವುದು ಎಂದು ಸ್ಪಷ್ಟಪಡಿಸಿದರು.

ಈ ಚುನಾವಣೆಯಲ್ಲಿ ದಲಿತ ಮತ್ತು ಮುಸ್ಲಿಂ ಅಭ್ಯರ್ಥಿಗಳನ್ನು ಕಣಕ್ಕಿಳಿಸಲು ಹೊರಟಿದ್ದೆವು.ಆದರೆ, ಒಂದು ಜಾತಿಯ ಬಲದ ಮೇಲೆ ಚುನಾವಣೆಗೆ ಸ್ಪರ್ಧಿಸಿ ಗೆಲ್ಲಲು ಸಾಧ್ಯವಿಲ್ಲ ಎಂದರು.

ಯಾರನ್ನು ಸೋಲಿಸಬೇಕು ಎಂಬುದನ್ನು ಜನರೇ ನಿರ್ಧರಿಸಬೇಕು, ಯಾವುದೇ ಅಭ್ಯರ್ಥಿಯನ್ನು ಬೆಂಬಲಿಸುವುದಿಲ್ಲ ಎಂದು ಜಾರಂಗೆ ಹೇಳಿದರು. ನಾವು ರಾಜಕೀಯಕ್ಕೆ ಹೊಸಬರು, ನಾವು ಅಭ್ಯರ್ಥಿಯನ್ನು ಕಣಕ್ಕಿಳಿಸಿ, ಅವರು ಸೋತರೆ, ಅದು ಜಾತಿಗೆ ನಾಚಿಕೆಗೇಡಿನ ಸಂಗತಿಯಾಗಲಿದೆ. ಆದ್ದರಿಂದ ಎಲ್ಲಾ ಮರಾಠಾ ಅಭ್ಯರ್ಥಿಗಳು ತಮ್ಮ ನಾಮಪತ್ರವನ್ನು ಹಿಂಪಡೆಯಲು ನಾನು ವಿನಂತಿಸುತ್ತೇನೆ ಎಂದು ಅವರು ಹೇಳಿದರು. ನವೆಂಬರ್ 4 ನಾಮಪತ್ರ ಹಿಂಪಡೆಯಲು ಕೊನೆಯ ದಿನವಾಗಿದೆ.

ಮರಾಠ ಸಮುದಾಯಕ್ಕೆ ರಾಜಕೀಯಕ್ಕೆ ಪ್ರವೇಶಿಸಿ ಮರಾಠ ಮೀಸಲಾತಿ ಪಡೆಯುವುದನ್ನು ಬಿಟ್ಟು ಬೇರೆ ದಾರಿಯಿಲ್ಲ ಎಂದು ಆಗಸ್ಟ್ 6 ರಂದು ಜಾರಂಗೆ ಹೇಳಿದ್ದರು. ಆಗ ರಾಜ್ಯದಲ್ಲಿ ಅಧಿಕಾರಕ್ಕೆ ಬರುತ್ತೇವೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದರು.

ಫೆಬ್ರವರಿಯಲ್ಲಿ, ಮಹಾರಾಷ್ಟ್ರ ಶಾಸಕಾಂಗವು ರಾಜ್ಯದ ಜನಸಂಖ್ಯೆಯ ಶೇಕಡಾ 30 ಕ್ಕಿಂತ ಹೆಚ್ಚು ಜನರನ್ನು ಒಳಗೊಂಡಿರುವ ಮರಾಠರಿಗೆ ಶಿಕ್ಷಣ ಮತ್ತು ಸರ್ಕಾರಿ ಉದ್ಯೋಗಗಳಲ್ಲಿ ಪ್ರತ್ಯೇಕ ವರ್ಗದ ಅಡಿಯಲ್ಲಿ ಶೇಕಡಾ 10 ರಷ್ಟು ಮೀಸಲಾತಿಯನ್ನು ಒದಗಿಸುವ ಮಸೂದೆಯನ್ನು ಅಂಗೀಕರಿಸಿತು.

ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# 'ನಿಲ್ಲಬೇಡ' ಅಂತಿದ್ದಾರೆ ಚಂದನ್ ಶೆಟ್ಟಿ



ಉತ್ತರ ಕರ್ನಾಟಕದ ಯುವ ಪ್ರತಿಭೆ ಸುನಿಧಿ ನಿಲೋಪಂತ್ ನಟಿಸಿರುವ, ಅಭಿಷೇಕ್ ಮಠದ್ ನಿರ್ದೇಶಿಸಿರುವ ಹಾಗೂ ಚಂದನ್ ಶೆಟ್ಟಿ ಹಾಡಿ, ಸಂಗೀತ ಸಂಯೋಜಿಸಿರುವ ''ನಿಲ್ಲಬೇಡ'' ಡ್ಯಾನ್ಸ್ ಮ್ಯೂಸಿಕ್ ಆಲ್ಬಂ ಇತ್ತೀಚಿಗೆ ಹಲವು ಗಣ್ಯರ ಉಪಸ್ಥಿತಿಯಲ್ಲಿ ಬಿಡುಗಡೆಯಾಯಿತು. 'ಕಪ್ ಗೆಲ್ಲೋದು ಮುಖ್ಯ ಅಲ್ಲ. ಮನಸ್ಸುಗಳನ್ನು ಗೆಲ್ಲೋದು ಮುಖ್ಯ' ಎನ್ನುವ ಅಡಿ ಬರಬರಹ ಈ ಹಾಡಿಗಿದೆ. ನಿರ್ದೇಶಕ ಅಭಿಷೇಕ್ ಮಠದ್ ಅವರೆ ನೃತ್ಯ ನಿರ್ದೇಶನ ಮಾಡಿರುವ ಈ ಹಾಡಿಗೆ ಸುನಿಧಿ ಅವರ ಅಜ್ಜಿ ಪ್ರತಿಭಾ ನಿಲೋಪಂತ್ ಬಂಡವಾಳ ಹಾಕಿದ್ದಾರೆ. ಹರಿಣಿ ಶ್ರೀಕಾಂತ್, ಅನುಪ್ರಭಾಕರ್ ಆಸ್ಗರ್ , ಶಶಿ ಮಾಸ್ಟರ್ ,ಅಭಿಷೇಕ್ ಮಠದ್ ಸೇರಿದಂತೆ ಮತ್ತಿತರರು ಸುನಿಧಿ ಜೊತೆಗೆ ಈ ಹಾಡಿನಲ್ಲಿ ಅಭಿನಯಿಸಿದ್ದಾರೆ. ಹಾಡು ಬಿಡುಗಡೆ ನಂತರ ಗಣ್ಯರು ಹಾಗೂ ಮ್ಯೂಸಿಕ್ ಸಾಂಗ್ ನ ಸದಸ್ಯರು ಮಾತನಾಡಿದರು.

ನಿರ್ಮಾಪಕರ ಸಂಘದ ಆಧ್ಯಕ್ಷ ಉಮೇಶ್ ಬಣಕಾರ್ ಮಾತನಾಡಿ, ಯುವ ಪ್ರತಿಭೆ ಸುನಿಧಿ ಮೈನಲ್ಲಿ ಮೂಳೆ ಇಲ್ಲದವರಂತೆ ನಟಿಸಿದ್ದಾರೆ. ಚಂದನ್ ಶೆಟ್ಟಿ ಅವರ ಗಾಯನ ವಯಸ್ಸಾದವರೂ ಹೆಜ್ಜೆ ಹಾಕುವ ಹಾಗಿದೆ. ''ಬಳೆ ಪೇಟೆ'' ಚಿತ್ರೀಕರಣದ ವೇಳೆ ಅಭಿಷೇಕ್ ಮಠದ್ ಅವರ ಕೆಲಸ ನೋಡಿದ್ದೆ. ಒಳ್ಳೆಯ ಕೆಲಸಗಾರ. ಇನ್ನು ''ನಿಲ್ಲಬೇಡ ''ಆಲ್ಬಂ ಯುವ ಪ್ರತಿಭೆಗಳಿಗೆ ಮತ್ತಷ್ಟು ಪ್ರೋತ್ಸಾಹ ಸಿಗಲಿ, ರಾಜ್ಯದಲ್ಲಿ ಅಮದು ಮಾಡಿಕೊಂಡವರಿಗೆ ರೆಡ್ ಕಾರ್ಪೆಟ್ ಹಾಕ್ತಾರೆ. ಆದರೆ ಇಲ್ಲಿನ ಪ್ರತಿಭೆಗಳಿಗೆ ಅವಕಾಶ ಕಡಿಮೆ. ದೇಶದ ಯಾವುದೇ ಭಾಷೆಯಲ್ಲಿ ಅವಕಾಶ ಸಿಕ್ಕರೂ ಕೆಲಸ ಮಾಡಿ ಎಂದು ಸಲಹೆ ನೀಡಿದರು.

ಹಾಡು ಚೆನ್ನಾಗಿ ಮೂಡಿ ಬಂದಿದೆ. ಕಲಾವಿದರು, ತಂತ್ರಜ್ಞರನ್ನು ಅಮದು ಮಾಡಿಕೊಳ್ಳುವ ಸಮಯದಲ್ಲಿ ಇಲ್ಲಿನ ಪ್ರತಿಭೆಗಳು ಬೇರೆ ಭಾಷೆಗೆ ಹೋಗುವಂತಾಗಲಿ ಎಂದರು ಅತಿಥಿಯಾಗಿ ಆಗಮಿಸಿದ್ದ ನಟ ನವೀನ್ ಶಂಕರ್. ಈ ಹಾಡು ಮೂಡಿ ಬರಲು ಸುನಿಧಿ ಅವರ ಪ್ರತಿಭೆಯೇ ಕಾರಣ. ಹಾಡು ಚೆನ್ನಾಗಿ ಬಂದಿದೆ. ಯುವ ಪ್ರತಿಭೆಗೆ ಮತ್ತಷ್ಟು ಅವಕಾಶ ಸಿಗಲಿ. ''ನಿಲ್ಲಬೇಡ'' ಹಾಡಿಗೆ ಡಾಲಿ ಧನಂಜಯ, ನೃತ್ಯ ನಿರ್ದೇಶಕ ಹರ್ಷ ಮತ್ತಿತತರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ ಎಂದು ಹೇಳಿದರು ನಿರ್ದೇಶಕ ಅಭಿಷೇಕ್ ಮಠದ್. ಹಾಡಿನಲ್ಲಿ ಕಾಣಿಸಿಕೊಂಡಿರುವ ಸುನಿಧಿ ನಿಲೋಪಂತ್ ಮಾತನಾಡಿ, ಮೊದಲು ಚಿತ್ರೀಕರಣಕ್ಕೆ ಹೋದಾಗ ಭಯವಾಗಿತ್ತು. ಈ ಹಾಡನ್ನು ಎಲ್ಲಾ ನೃತ್ಯಪಟುಗಳಿಗೆ ಅರ್ಪಣೆ ಮಾಡುತ್ತೇನೆ. ನಿಮ್ಮ ಕನಸನ್ನು ನನಸು ಮಾಡಲು ಮುನ್ನುಗ್ಗಿ ಎಂದರು. ಹಾಡಿಗೆ ದ್ವನಿಯಾಗಿರುವ ಚಂದನ್ ಶೆಟ್ಟಿ ಮಾತನಾಡಿ , ಆಗಿನ್ನು ವಿಚ್ಚೇಧನ ಆಗಿ ಮೂರು ನಾಲ್ಕು ವಾರವಾಗಿತ್ತು. ಆ ಸಮಯದಲ್ಲಿ ಅಭಿಷೇಕ್ ಈ ಹಾಡಿನ ಬಗ್ಗೆ ಮಾತನಾಡಿದರು. ಹಾಡಿ, ಸಂಗೀತ ನೀಡುವಂತೆ ಮನವಿ ಮಾಡಿದರು. ಖಿನ್ನತೆಗೆ ಒಳಗಾದ ಸಮಯದಲ್ಲಿ ''ನಿಲ್ಲಬೇಡ'' ಹಾಡು ಹಾಡಿದ್ದೇನೆ. ಜೀವನದಲ್ಲಿ ಏನೇ ಕಷ್ಟ ಬಂದರೂ 'ನಿಲ್ಲಬೇಡ' ಮುಂದುವರಿಯಬೇಕು ಎಂದು ಹೇಳಿದರು. ಹಾಡು ಚೆನ್ನಾಗಿ ಬಂದಿದೆ. ಚಿತ್ರೀಕರಣದ ಸಮಯದಲ್ಲಿ ಸುನಿಧಿ ಅವರ ಪ್ರತಿಭೆ ನೋಡಿದ್ದೆ. ಸುನಿಧಿಗೆ ಒಳ್ಳೆಯದಾಗಲಿ ಎಂದರು ಹಾಡಿನಲ್ಲಿ ಅಭಿನಯಿಸಿರುವ ನಟಿ ಹರಿಣಿ.

# ದೀಪಾವಳಿ ಕಳಿತ್ತಿದ್ದಂತೆ ಹಾಟ್ ಆಗಿ ಬದಲಾದ ಶ್ವೇತಾ ಶ್ರೀವಾತ್ಸವ್

2006 ರಲ್ಲಿ ಬಣ್ಣದ ಜರ್ನಿ ಆರಂಭಿಸಿದ ಶ್ವೇತಾ ಶ್ರೀವಾತ್ಸವ್ ವೃತ್ತಿ ಬದುಕಿನಲ್ಲಿ ಬಿಗ್ ಬ್ರೇಕ್ ತಂದುಕೊಟ್ಟಿದ್ದು ಸಿಂಪಲ್ ಆಗಿ ಒಂದು ಲವ್ ಸ್ಟೋರಿ ಸಿನಿಮಾ.

ಅದಾದ ಮೇಲೆ ಫೇರ್ ಆಂಡ್ ಲವ್ಲಿ, ಕಿರಗೂರಿನ ಗಯಾಳಿಗಳು, ಹೋಪ್, ರಾಘವೇಂದ್ರ ಸ್ಟೋರ್ಸ್ ಸೇರಿದಂತೆ ಸೂಪರ್ ಹಿಟ್ ಸಿನಿಮಾಗಳನ್ನು ನೀಡಿರುವ ಸುಂದರಿ ಶ್ವೇತಾ.

ತಾಯಿ ಆದ ನಂತರ ಶ್ವೇತಾ ಕಮ್ ಬ್ಯಾಕ್ ಮಾಡಲು ತೆಗೆದುಕೊಂಡ ಸಮಯ ನಿಜಕ್ಕೂ ಮ್ಯಾಜಿಕಲ್. ಸೋಷಿಯಲ್ ಮೀಡಿಯಾದಲ್ಲಿ ಆಕ್ಟಿವ್ ಆಗಿರುವ ಸುಂದರಿ ಈಗ ಸಖತ್ ಬೋಲ್ಡ್ ಆಗಿದ್ದಾರೆ. ಕಪ್ಪು ಬಣ್ಣದ ಸಿಂಗಲ್ ಪೀಸ್ ಡ್ರೆಸ್‌ಗೆ ಹೈ ಹೀಲ್ಸ್ ಪಂಪ್ ಶೂ ಧರಿಸಿ ಫೋಟೋಶೂಟ್ ಮಾಡಿದ್ದಾರೆ. ಶಮಾ ತಾಜ್ ಈ ಮೇಕಪ್ ಲುಕ್ ನೀಡಿದ್ದಾರೆ.

ಹಿಂದಿನ ಕಾಲದ ಸ್ಟೀಲ್ ಚೇರ್ ಹಿಡಿದು ಪೋಸ್ ಕೊಟ್ಟಿರುವ ಶ್ವೇತಾ ಫೋಟೋಗಳಿಗೆ ಸಖತ್ ಮೆಚ್ಚುಗೆ ವ್ಯಕ್ತವಾಗುತ್ತಿದೆ. ಯಾವ ಯಂಗ್ ನಟಿಗೂ ಕಡಿಮೆ ಇಲ್ಲ ಅಂತಿದ್ದಾರೆ ಫ್ಯಾನ್ಸ್.

ಮದರ್‌ಹುಡ್ ಎಂಜಾಯ್ ಮಾಡಿಕೊಂಡು ಕಮ್ ಬ್ಯಾಕ್ ಮಾಡುವ ಸಮಯದಲ್ಲಿ ಶ್ವೇತಾ ಫಿಟ್ನೆಸ್ ಮೇಲೆ ಹೆಚ್ಚಿನ ಕಾಳಜಿ ವಹಿಸಿದ್ದರು. ಹೀಗಾಗಿ ವಯಸ್ಸು ಎಷ್ಟಾಗಿದೆ ಎಂದು ಗೊತ್ತೇ ಆಗಲ್ಲ ಅಂತಿದ್ದಾರೆ ಹೆಣ್ಣು ಮಕ್ಕಳು. ಇನ್ನು ದೀಪಾವಳಿ ಮುಗಿಯುತ್ತಿದ್ದಂತೆ ಈ ಫೋಟೋ ಅಪ್ಲೋಡ್ ಮಾಡಿರುವ ಕಾರಣ ಆಟಂ ಬಾಂಬ್, ಸರ ಪಟಾಕಿ, ಕ್ಲಾಸ್ ಆಂಟ್ ಹಾಟ್ ಎಂದು ಪಡ್ಡೆ ಹುಡುಗರು ಕಾಮೆಂಟ್ ಮಾಡಿದ್ದಾರೆ.





# ಅಚ್ಯುತ್ ಕುಮಾರ್, ಗೋಪಾಲಕೃಷ್ಣ ದೇಶಪಾಂಡೆ ಇನ್ಮೇಲೆ 'ಅಣ್ತಮ್ಮ'

'ಕಿರಾತಕ' ನಿರ್ದೇಶಕ ಪ್ರದೀಪ್ ರಾಜ್, ಪಿ ಸಿ ಶೇಖರ್, ಪ್ರಶಾಂತ್ ರಾಜಪ್ಪ ಡೈರೆಕ್ಷನ್ ಟೀಮ್‌ನಲ್ಲಿ ಕೆಲಸ ಮಾಡಿದ ಅನುಭವ ಹೊಂದಿರುವ ವಿಶ್ವ ನಿರ್ದೇಶನದ ಚೊಚ್ಚಲ ಚಿತ್ರ 'ಅಣ್ತಮ್ತನ' ಘೋಷಣೆ ಆಗಿದೆ. ಈ ಚಿತ್ರದಲ್ಲಿ ನಟ ಅಚ್ಯುತ್ ಕುಮಾರ್ ಮತ್ತು ಗೋಪಾಲಕೃಷ್ಣ ದೇಶಪಾಂಡೆ ಅಣ್ಣ ತಮ್ಮಂದಿರಾಗಿ ಮುಖ್ಯಭೂಮಿಕೆಯಲ್ಲಿ ನಟಿಸುತ್ತಿದ್ದಾರೆ.

ಅಚ್ಯುತ್, ಗೋಪಾಲಕೃಷ್ಣ ಜೊತೆ ಗಿರೀಶ್ ಜಿ ಮತ್ತೊಂದು ಪ್ರಮುಖ ಪಾತ್ರದಲ್ಲಿ ನಟಿಸುತ್ತಿದ್ದಾರೆ. ವಿಶ್ವಜಿತ್ ರಾವ್ ಛಾಯಾಗ್ರಹಣ, ಪೂರ್ಣಚಂದ್ರ ತೇಜಸ್ವಿ ಎಸ್ ವಿ ಅವರ ಸಂಗೀತ, ಶೈಲೇಶ್ ಕುಮಾರ್ ಸಂಭಾಷಣೆ, ಹರಿ ಪರಾಕ್ ಸಾಹಿತ್ಯ ಈ ಚಿತ್ರಕ್ಕಿದೆ.

ಈ ಚಿತ್ರ, ಅಣ್ಣ ತಮ್ಮ ಸಂಬಂಧ, ನಮ್ಮ ಮಣ್ಣಿನ ಆಚರಣೆ, ಹಳೆ ಮೈಸೂರು ಸಂಸ್ಕೃತಿ, ನಂಬಿಕೆ ಮೂಢನಂಬಿಕೆಗಳ ಸುತ್ತ ಹೆಣೆದಿರುವ ಕಥೆ ಹೊಂದಿದೆ. ಆದಿಚುಂಚನಗಿರಿ, ನಾಗಮಂಗಲ, ಮದ್ದೂರು, ಮಂಡ್ಯ ಸುತ್ತ-ಮುತ್ತ ಚಿತ್ರೀಕರಣ ನಡೆಯಲಿದ್ದು, ಶೀಘ್ರದಲ್ಲೇ ಚಿತ್ರೀಕರಣ ಪ್ರಾರಂಭವಾಗಲಿದೆ.



## ಆಸ್ಟ್ರೇಲಿಯಾವನ್ನು ಅವರದ್ದೇ ನೆಲದಲ್ಲಿ ಸೋಲಿಸುತ್ತೇವೆ ಎಂದಿದ್ದ

# ಪಾಕ್ ನಾಯಕನಿಗೆ ಶಾಕ್ ನೀಡಿದ ಕಾಂಗರೂಗಳು

ಮೊಹಮ್ಮದ್ ರಿಜ್ವಾನ್ ನಾಯಕತ್ವದಲ್ಲಿ ಪಾಕಿಸ್ತಾನ ಕ್ರಿಕೆಟ್ ತಂಡದ ಆಸ್ಟ್ರೇಲಿಯಾ ಪ್ರವಾಸ ಸೋಲಿನೊಂದಿಗೆ ಆರಂಭವಾಗಿದೆ. ಏಕದಿನ ಸರಣಿಗಾಗಿ ಆಸ್ಟ್ರೇಲಿಯ ಪ್ರವಾಸಕ್ಕೆ ತೆರಳಿದ್ದ ಪಾಕಿಸ್ತಾನ ತಂಡ ಮೊದಲ ಪಂದ್ಯದಲ್ಲಿ 2 ವಿಕೆಟ್‌ಗಳಿಂದ ಸೋಲನುಭವಿಸಿದೆ. ನವೆಂಬರ್ 4 ರ ಸೋಮವಾರ ಮೆಲ್ಬೋರ್ನ್ ಕ್ರಿಕೆಟ್ ಮೈದಾನದಲ್ಲಿ ನಡೆದ ಈ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಪಾಕಿಸ್ತಾನ ತಂಡ 203 ರನ್‌ಗಳಿಗೆ ಆಲೌಟ್ ಆಯಿತು. ಗುರಿ ಬೆನ್ನಟ್ಟಿದ ಕಾಂಗರೂ ತಂಡ ಕೂಡ ಒಂದು ಹಂತದಲ್ಲಿ 185 ರನ್ ಗಳಿಸುವಷ್ಟರಲ್ಲಿ 8 ವಿಕೆಟ್ ಕಳೆದುಕೊಂಡಿತ್ತು. ಆದಾಗ್ಯೂ, ಇದಾದ ನಂತರ ಜೊತೆಯಾದ ಸ್ಟಾರ್ಕ್ ಮತ್ತು ಕಮಿನ್ಸ್ ತಂಡವನ್ನು ಗೆಲುವಿನತ್ತ ಮುನ್ನಡೆಸಿದರು.

**ಸ್ಟಾರ್ಕ್ ದಾಳಿಗೆ ನಲುಗಿದ ಪಾಕಿಸ್ತಾನ:** ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಪಾಕ್ ತಂಡ, ಮೆಲ್ಬೋರ್ನ್ ಕ್ರಿಕೆಟ್ ಮೈದಾನದ ವೇಗದ ಮತ್ತು ಬೌನ್ಸಿ ಪಿಚ್‌ನಲ್ಲಿ ಆಸ್ಟ್ರೇಲಿಯಾದ ವೇಗದ ಬೌಲರ್ ಗಳ ವಿರುದ್ಧ ಸಂಪೂರ್ಣ ಶರಣಾಯಿತು. ಟೆಸ್ಟ್ ಬಳಿಕ ಏಕದಿನಕ್ಕೆ ಎಂಟ್ರಿ ಕೊಟ್ಟ ಅಬ್ದುಲ್ಲಾ ಶಫೀಕ್ ಮತ್ತು ಸೈಮ್ ಅಯೂಬ್ ಜೋಡಿ ಉತ್ತಮ ಆರಂಭ ನೀಡುವಲ್ಲಿ ವಿಫಲವಾಯಿತು. ಏಕದಿನ ಕ್ರಿಕೆಟ್ ಗೆ ಪದಾರ್ಪಣೆ ಮಾಡುತ್ತಿದ್ದ ಅಯೂಬ್ ಮೊದಲ ಓವರ್‌ನಲ್ಲಿಯೇ ಮಿಚೆಲ್ ಸ್ಟಾರ್ಕ್ ಎಸೆತದಲ್ಲಿ ಬೌಲ್ಡ್ ಆದರೆ, ಸ್ಟಾರ್ಕ್ ತಮ್ಮ ಮುಂದಿನ ಓವರ್‌ನಲ್ಲಿ ಶಫೀಕ್ ಅವರನ್ನು ಔಟ್ ಮಾಡಿದರು. ಟೆಸ್ಟ್ ತಂಡದಿಂದ



ಹೊರಬಿದ್ದ ನಂತರ ಏಕದಿನ ಸರಣಿಗೆ ಮರಳಿದ ಬಾಬರ್ ಆಝಂ ಬಂದ ತಕ್ಷಣ ಕೆಲವು ಉತ್ತಮ ಹೊಡೆತಗಳನ್ನು ಬಾರಿಸಿದರು. ಆದರೆ ಲೆಗ್ ಸ್ಪಿನ್ನರ್ ಆಡಮ್ ಝಂಪಾ ಎಸೆತದಲ್ಲಿ ಬಾಬರ್ ಕ್ಲೀನ್ ಬೌಲ್ಡ್ ಆದರು.

ಪಾಕಿಸ್ತಾನದ ನೂತನ ನಾಯಕ ಮೊಹಮ್ಮದ್ ರಿಜ್ವಾನ್ ಹೆಚ್ಚು ಹೊತ್ತು ಕ್ರೀಸ್‌ನಲ್ಲಿ ನಿಂತು ಇನಿಂಗ್ಸ್ ನಿಭಾಯಿಸಿ 44 ರನ್ ಗಳಿಸಿ ಔಟಾದರು. ಹೀಗಾಗಿ ಪಾಕಿಸ್ತಾನ ಕೇವಲ 117 ರನ್‌ಗಳಿಗೆ 7 ವಿಕೆಟ್ ಕಳೆದುಕೊಂಡಿತು. ಆದರೆ ತಂಡದ ಪರ ಗಮನಾರ್ಹ ಪ್ರದರ್ಶನ ನೀಡಿದ ಬೌಲರ್ ನಸೀಮ್ ಶಾ 40 ರನ್ ಗಳ ಸ್ಮರಣೀಯ ಇನ್ನಿಂಗ್ಸ್ ಆಡಿ ತಂಡವನ್ನು 203 ರನ್ ಗಳಿಗೆ ಕೊಂಡೊಯ್ದರು. ಆಸ್ಟ್ರೇಲಿಯಾ ಪರ ಸ್ಟಾರ್ಕ್ 3 ಹಾಗೂ ನಾಯಕ ಪ್ಯಾಟ್ ಕಮಿನ್ಸ್ 2 ವಿಕೆಟ್ ಪಡೆದರು.

**ಆಸ್ಟ್ರೇಲಿಯಾಕ್ಕೂ ಆಘಾತ ನೀಡಿದ ಪಾಕ್ ವೇಗಿಗಳು:** 203 ರನ್‌ಗಳ ಅಲ್ಪ ಗುರಿ ಬೆನ್ನಟ್ಟಿದ ಆಸ್ಟ್ರೇಲಿಯಾ ಕೂಡ ಉತ್ತಮ ಆರಂಭ ಪಡೆಯಲಿಲ್ಲ. ನಾಲ್ಕನೇ ಓವರ್‌ನಲ್ಲಿಯೇ ಆರಂಭಿಕರಾದ ಮ್ಯಾಥ್ಯೂ ಶಾರ್ಟ್ ಮತ್ತು ಜೇಕ್ ಫ್ರೇಸರ್-ಮೆಕ್‌ಗುರ್ಕ್ ಪೆವಿಲಿಯನ್ ಗೆ ಮರಳಿದರು. ಇದಾದ ಬಳಿಕ ಜೊತೆಯಾದ ಸ್ಟಾರ್ ಬ್ಯಾಟ್ಸ್‌ಮನ್ ಸ್ಟೀವ್ ಸ್ಮಿತ್ ಮತ್ತು ವಿಕೆಟ್ ಕೀಪರ್ ಜೋಶ್ ಇಂಗ್ಲಿಸ್ ಉತ್ತಮ ಜೊತೆಯಾಟ ಕಟ್ಟಿದರು. ಇಬ್ಬರೂ ಸೇರಿ ಪಾಕಿಸ್ತಾನದ ವೇಗದ ಬೌಲರ್‌ಗಳ ಮೇಲೆ ದಾಳಿ ನಡೆಸಿ ವೇಗವಾಗಿ ರನ್ ಗಳಿಸಿದರು. ಇವರಿಬ್ಬರ ನಡುವೆ 85 ರನ್‌ಗಳ ಜೊತೆಯಾಟವಿದ್ದು, ಆಸ್ಟ್ರೇಲಿಯಾ ಗೆಲುವಿಗೆ ಅಡಿಪಾಯ ಹಾಕಿತು.

ಈ ಇಬ್ಬರು ಆಡುವವರೆಗೆ ಆಸ್ಟ್ರೇಲಿಯ ತಂಡ ಗೆಲುವಿನ ಸನಿಹದಲ್ಲಿದ್ದಂತೆ ಕಂಡರೂ ಇದ್ದಕ್ಕಿದ್ದಂತೆ ಹಾರಿಸ್ ರೌಫ್ ಮತ್ತು ಶಾಹೀನ್ ಶಾ ಆಫ್ರಿದಿ ಸ್ಮಿತ್ -ಇಂಗ್ಲಿಸ್ ಸೇರಿದಂತೆ ಆಸ್ಟ್ರೇಲಿಯಾದ ಮಧ್ಯಮ ಕ್ರಮಾಂಕವನ್ನು ಬೇಗನೇ ಪೆವಿಲಿಯನ್‌ಗಟ್ಟಿದರು. ಹೀಗಾಗಿ ಆಸ್ಟ್ರೇಲಿಯಾ ಕೇವಲ 155 ರನ್‌ಗಳಿಗೆ 7 ವಿಕೆಟ್ ಕಳೆದುಕೊಂಡಿತು. ಇಲ್ಲಿಂದ ನಾಯಕ ಪ್ಯಾಟ್ ಕಮಿನ್ಸ್ ಜವಾಬ್ದಾರಿ ವಹಿಸಿಕೊಂಡು ಮಿಚೆಲ್ ಸ್ಟಾರ್ಕ್ ಜೊತೆಗೂಡಿ ತಂಡವನ್ನು ಗೆಲುವಿನತ್ತ ಮುನ್ನಡೆಸಿದರು. ಕಮ್ಮಿನ್ಸ್ 33 ರನ್ ಗಳಿಸಿ ಅಜೇಯರಾಗಿ ಮರಳಿದರು. ಇತ್ತ ಆಸ್ಟ್ರೇಲಿಯಾವನ್ನು ಅವರದ್ದೇ ನೆಲದಲ್ಲಿ ಸೋಲಿಸುತ್ತವೆ ಎಂದು ಹೇಳಿಕೆ ನೀಡಿದ್ದ ನೂತನ ನಾಯಕ ಮೊಹಮ್ಮದ್ ರಿಜ್ವಾನ್ ಅವರ ನಾಯಕಗತ್ವದ ಹೊಸ ಇನ್ನಿಂಗ್ಸ್ ಸೋಲಿನೊಂದಿಗೆ ಆರಂಭವಾಗಿದೆ.

# ವಕ್ಫ್ ಮಂಡಳಿಯ ಎಲ್ಲಾ ಬಗೆಯ ಜಮೀನು ನೋಂದಣಿ ಸ್ಥಗಿತಗೊಳಿಸಲು ಸೂಚಿಸಿ

**ಬೆಂಗಳೂರು:** ಕರ್ನಾಟಕದ ವಕ್ಫ್ ಮಂಡಳಿಗೆ ಸಂಬಂಧಿಸಿದ ಎಲ್ಲಾ ಬಗೆಯ ಜಮೀನು ನೋಂದಣಿಯನ್ನು ಸ್ಥಗಿತಗೊಳಿಸಲು ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗೆ ಸೂಚಿಸಬೇಕೆಂದು ಕೋರಿ ಪ್ರತಿಪಕ್ಷ ನಾಯಕ ಆರ್. ಅಶೋಕ್ ಅವರು ಕೇಂದ್ರ ಸಚಿವರಿಗೆ ಹಾಗೂ ವಕ್ಫ್ ಜಂಟಿ ಸಮಿತಿಗೆ ಪತ್ರ ಬರೆದಿದ್ದಾರೆ.

ರೈತರ ಜಮೀನು ಹಾಗೂ ಹಿಂದೂ ಸಂಸ್ಥೆಗಳಿಗೆ ಸಂಬಂಧಿಸಿದ ಜಮೀನುಗಳನ್ನು ವಕ್ಫ್ ಮಂಡಳಿ ಕಬಳಿಸುತ್ತಿರುವ ಕುರಿತು ಆತಂಕ ವ್ಯಕ್ತಪಡಿಸಿರುವ ಅವರು, ಈ ಕುರಿತು ಕೇಂದ್ರ ಗೃಹ ಸಚಿವ ಅಮಿತ್ ಶಾ, ಕೇಂದ್ರ ಆರೋಗ್ಯ ಸಚಿವ ಜೆ.ಪಿ.ನಡ್ಡಾ ಹಾಗೂ ವಕ್ಫ್ ತಿದ್ದುಪಡಿ ಮಸೂದೆಯ ಜಂಟಿ ಸಂಸದೀಯ ಸಮಿತಿಯ ಅಧ್ಯಕ್ಷ ಜಗದಾಂಬಿಕಾ ಪಾಲ್ ಅವರಿಗೆ ಪತ್ರ ಬರೆದಿದ್ದಾರೆ.

ಕೇಂದ್ರ ಸರ್ಕಾರದಲ್ಲಿ ವಕ್ಫ್ ತಿದ್ದುಪಡಿ ಮಸೂದೆ ತರಲು ಜಂಟಿ ಸಂಸದೀಯ ಸಮಿತಿ ರಚಿಸಿದ್ದು, ವಕ್ಫ್ ಆಸ್ತಿಗಳ ನಿರ್ವಹಣೆಯಲ್ಲಿ ದಕ್ಷತೆ ಹಾಗೂ ಪಾರದರ್ಶಕತೆ ತರಲು ಈ ಸಮಿತಿ ಶ್ರಮಿಸುತ್ತಿದೆ. ಆದರೆ ಕರ್ನಾಟಕದಲ್ಲಿ ರಾಜ್ಯ ಸರ್ಕಾರ ಮತ್ತು ವಕ್ಫ್ ಮಂಡಳಿಯು ಕಂದಾಯ ದಾಖಲೆಗಳನ್ನು ತಿದ್ದುವ ಹಾಗೂ ರೈತರ ಜಮೀನುಗಳ ಮಾಲೀಕತ್ವ ವರ್ಗಾಯಿಸಿಕೊಳ್ಳುವ ಪ್ರಯತ್ನ ಆರಂಭವಾಗಿದೆ. ಈ ರೀತಿ ತರಾತುರಿಯಲ್ಲಿ ಜಮೀನುಗಳನ್ನು ವಕ್ಫ್ ಮಂಡಳಿ ನೋಂದಾಯಿಸಿಕೊಳ್ಳುತ್ತಿರುವ ಪರಿಣಾಮ ಸಾವಿರಾರು ಬಡವರು ಹಾಗೂ ರೈತರು ವಂಶಪಾರಂಪರ್ಯವಾಗಿ ಬಂದ ಭೂಮಿಯನ್ನು ಕಳೆದುಕೊಳ್ಳುತ್ತಿದ್ದಾರೆ ಎಂದು ಆರ್.ಅಶೋಕ್



ಪತ್ರದಲ್ಲಿ ವಿವರಿಸಿದ್ದಾರೆ.

ವಿಜಯಪುರ ಜಿಲ್ಲೆಯಲ್ಲಿ 15,000 ಎಕರೆ ಜಮೀನನ್ನು ವಶಪಡಿಸಿಕೊಳ್ಳಲು ನೋಟಿಸ್ ನೀಡಲಾಗಿದೆ ಎಂದು ನೂರಾರು ರೈತರು ಹೇಳಿದ ಬಳಿಕ ಈ ಸಂಗತಿ ಬೆಳಕಿಗೆ ಬಂದಿದೆ. ರಾಜ್ಯದ ಎಲ್ಲ ಜಿಲ್ಲೆಗಳಲ್ಲಿ ತಲಾ 10,000 ಎಕರೆ ಜಮೀನನ್ನು ವಕ್ಫ್ ನೋಂದಣಿ ಮಾಡಿಕೊಳ್ಳುವ ಪ್ರಯತ್ನ ಮಾಡಿದೆ ಎಂದು ಹೇಳಲಾಗಿದೆ. ಇಷ್ಟೇ ಅಲ್ಲದೆ ವಕ್ಫ್ ಮಂಡಳಿಯು ದೇವಸ್ಥಾನ, ಮಠ ಹಾಗೂ ಇತರೆ ಹಿಂದೂ ಧಾರ್ಮಿಕ ಸಂಸ್ಥೆಗಳ ಜಮೀನುಗಳನ್ನು ಕೂಡ ತನ್ನದು ಎಂದು ಹೇಳಿಕೊಂಡಿದೆ. ಹಿಂದೂ ಸ್ಮಶಾನ ಕೂಡ ತನ್ನದು ಎಂದು ವಕ್ಫ್ ಉಲ್ಲೇಖಿಸಿರುವುದು ಇನ್ನಷ್ಟು ಆಘಾತದ ಸಂಗತಿ. 13ನೇ ಶತಮಾನದಷ್ಟು ಇತಿಹಾಸ ಹೊಂದಿರುವ ವಿರಕ್ತ ಮಠಕ್ಕೆ ಸೇರಿದ ಸಿಂಧಗಿಯ 1.28 ಎಕರೆ ಜಮೀನು, ವಿಜಯಪುರದ ಐತಿಹಾಸಿಕ ಸೋಮೇಶ್ವರ ದೇವಾಲಯ, ಕಲಬುರ್ಗಿಯ ಬೀರದೇವರ ಗುಡಿ ಸೇರಿದಂತೆ ಅನೇಕ ಜನಪ್ರಿಯ ಸ್ಥಳಗಳನ್ನು ಕೂಡ ವಕ್ಫ್ ತನ್ನದೆಂದು ಘೋಷಿಸಿಕೊಂಡಿದೆ ಎಂದು ಅವರು ಪತ್ರದಲ್ಲಿ ಉಲ್ಲೇಖಿಸಿದ್ದಾರೆ. ಇದು ಜನರಲ್ಲಿ ಆತಂಕ ಉಂಟುಮಾಡಿದ್ದು, ಹಾವೇರಿಯಲ್ಲಿ ಹಿಂಸಾಚಾರ, ಗಲಭೆ ಕೂಡ ನಡೆದಿದೆ. ಈ ಎಲ್ಲ ಘಟನೆಗಳ ಹಿನ್ನೆಲೆಯಲ್ಲಿ, ಜಂಟಿ ಸಮಿತಿಯು ಕೂಡಲೇ ಕರ್ನಾಟಕ ಸರ್ಕಾರದ ಮುಖ್ಯ ಕಾರ್ಯದರ್ಶಿಯ ಜೊತೆ ಮಾತನಾಡಬೇಕು ಹಾಗೂ ವಕ್ಫ್‌ಗೆ ಸಂಬಂಧಿಸಿದ ಜಮೀನು ನೋಂದಣಿ ಸ್ಥಗಿತಗೊಳಿಸಲು ಸೂಚಿಸಬೇಕೆಂದು ಆರ್.ಅಶೋಕ್ ಮನವಿ ಮಾಡಿದ್ದಾರೆ.

# ಕೊಹ್ಲಿಗೆ ಕ್ಯಾಪ್ಟೆನ್ಸಿ ನೀಡುವ ಬಗ್ಗೆ ನಿರ್ಧಾರ ಆಗಿಲ್ಲ ಕೋಟ್ಯಂತರ ಅಭಿಮಾನಿಗಳ ಆಸೆಗೆ ಫ್ರಾಂಚೈಸಿ ತಣ್ಣೀರು

**ಬೆಂಗಳೂರು:** 2025ರ ಇಂಡಿಯನ್ ಪ್ರೀಮಿಯರ್ ಲೀಗ್ ಮೆಗಾ ಹರಾಜಿಗೂ ಮುನ್ನವೇ ವಿರಾಟ್ ಕೊಹ್ಲಿ ಆರ್‌ಸಿಬಿ ತಂಡದ ಕ್ಯಾಪ್ಟನ್ ಆಗಿ ರೀ ಎಂಟ್ರಿ ಕೊಡಲಿದ್ದಾರೆ ಎಂಬ ಅಭಿಮಾನಿಗಳ ಆಸೆಗೆ ಫ್ರಾಂಚೈಸಿ ತಣ್ಣೀರು ಎರಚಿದೆ.

ಮಾಜಿ ನಾಯಕ ಫಾಫ್ ಡು ಪ್ಲೆಸಿಸ್ ಅವರು 2022 ರಿಂದ 2024ರ ವರೆಗೆ ಆರ್‌ಸಿಬಿ ತಂಡವನ್ನು ಮುನ್ನಡೆಸಿದರು. ಎರಡು ಬಾರಿ ಪ್ಲೇ ಆಫ್ ಹಂತ ತಲುಪಿಸಿದ್ದರೂ, ಟ್ರೋಫಿ ಗೆಲ್ಲುವಲ್ಲಿ ವಿಫಲವಾಯಿತು. ಈ ಬಾರಿ ಆರ್‌ಸಿಬಿ ರಿಟೇನ್ ಆಟಗಾರರ ಪಟ್ಟಿಯಿಂದ ಡುಪ್ಲೆಸಿ ಅವರನ್ನು ಹೊರಗಿಟ್ಟ ಬಳಿಕ ಕೊಹ್ಲಿ ನಾಯಕತ್ವ ವಹಿಸಿಕೊಳ್ಳುತ್ತಾರೆ ಎನ್ನಲಾಗಿತ್ತು. ತಂಡದ ಮ್ಯಾನೇಜ್‌ಮೆಂಟ್ ನಾಯಕತ್ವದ ಬದಲಾವಣೆಯ ಬಗ್ಗೆ ಈಗಾಗಲೇ ಚರ್ಚಿಸಿದೆ. ನಾಯಕತ್ವದ ಸ್ಥಾನ ಅಲಂಕರಿಸಲು ಕೊಹ್ಲಿ ಉತ್ಸುಕರಾಗಿದ್ದಾರೆ ಎಂಬ ವದಂತಿ ಹರಿದಾಡಿತ್ತು. ಆದ್ರೆ ಕೋಟ್ಯಂತರ ಅಭಿಮಾನಿಗಳ ಆಸೆಗೆ ಫ್ರಾಂಚೈಸಿ ತಣ್ಣೀರು ಎರಚಿದೆ.



ವದಂತಿಗಳ ಕುರಿತು ಪ್ರತಿಕ್ರಿಯೆ ನೀಡಿರುವ ಆರ್‌ಸಿಬಿಯ ಕ್ರಿಕೆಟ್ ನಿರ್ದೇಶಕ ಮೊ ಬೊಬಾಟ್, ಈ ವಿಷಯದಲ್ಲಿ ಇನ್ನೂ ಯಾವುದೇ ನಿರ್ಧಾರ ತೆಗೆದುಕೊಂಡಿಲ್ಲ ಎಂದು ಹೇಳಿದ್ದಾರೆ.

ಕೊಹ್ಲಿ ಈ ಹಿಂದೆ 2013 ರಿಂದ 2021 ರವರೆಗೆ ಆರ್‌ಸಿಬಿ ನಾಯಕತ್ವ ವಹಿಸಿದ್ದರು. ತಂಡವನ್ನು ನಾಲ್ಕು ಬಾರಿ ಪ್ಲೇ ಆಫ್‌ಗೆ ತಲುಪಿಸುವಲ್ಲಿ ಶ್ರಮಿಸಿದ್ದರು. ಇದೀಗ 18ನೇ ಆವೃತ್ತಿಗೂ ಕೊಹ್ಲಿ ಆರ್‌ಸಿಬಿ ತಂಡವನ್ನೇ ಪ್ರತಿನಿಧಿಸಿದ್ದಾರೆ. ಮುಂದಿನ ಐಪಿಎಲ್ ಗೆ ಕೊಹ್ಲಿಯನ್ನು ಫ್ರಾಂಚೈಸಿ 21 ಕೋಟಿ ರೂ.ಗಳಿಗೆ ಏರಿಕೆಯಾಗಿದೆ.

# ಚನ್ನಪಟ್ಟಣದಲ್ಲಿ ರಣರಂಗ ಆಡಿದವರೆಲ್ಲಾ ಮುಗಿದು ಹೋಗಿದ್ದಾರೆ

**ಬೆಂಗಳೂರು:** ಚನ್ನಪಟ್ಟಣದಲ್ಲಿ ರಣರಂಗ ಆಡಿದವರೆಲ್ಲಾ ಮುಗಿದು ಹೋಗಿದ್ದಾರೆ. ನಾವು ಮಾಡಿದ ಕೆಲಸಕ್ಕೆ ಪಟ್ಟಿ ಹಾಕಿ ಚನ್ನಪಟ್ಟಣದ ಜನ ಮಾರ್ಕ್ಸ್ ಕೊಡುತ್ತಾರೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ಕೇಂದ್ರ ಸಚಿವ ಕುಮಾರಸ್ವಾಮಿ ವಿರುದ್ಧ ಪರೋಕ್ಷ ವಾಗ್ದಾಳಿ ನಡೆಸಿದ್ದಾರೆ.

ಚನ್ನಪಟ್ಟಣ ಪ್ರಚಾರದ ವಿಚಾರವಾಗಿ ಬೆಂಗಳೂರಿನಲ್ಲಿ ಪ್ರತಿಕ್ರಿಯೆ ನೀಡಿದ ಅವರು, ಚನ್ನಪಟ್ಟಣದಲ್ಲಿ ಯಾವ ರಣನೂ ಇಲ್ಲ, ರಂಗವೂ ಇಲ್ಲ. ಮತದಾರನ ಹೃದಯ ಗೆಲ್ಲಬೇಕು. ನಾವು ಮಾಡಿರುವ ಕೆಲಸಕ್ಕೆ, ಮಾಡುತ್ತಿರುವ ಕೆಲಸಕ್ಕೆ ಜನ ಗುರುತಿಸಿ ಎಂದು ಕೇಳಲು ಹೋಗುತ್ತಿದ್ದೇವೆ. ರಣರಂಗ ಆಡಿದವರೆಲ್ಲ ಮುಗಿದು ಹೋಗಿದ್ದಾರೆ. ಈಗ ಏನಿದ್ದರೂ ಜನರ ಲಾಭ ಮಾತ್ರ ಎಂದು ಪರೋಕ್ಷವಾಗಿ ಕುಮಾರಸ್ವಾಮಿಗೆ ಟಾಂಗ್ ಕೊಟ್ರು. ಪ್ರಜಾಪ್ರಭುತ್ವದ ವ್ಯವಸ್ಥೆಯಲ್ಲಿ



ನಾಯಕ ಆದವನು ಮತದಾರರಿಗೆ ಏನು ಕೊಡುತ್ತಾನೆ, ಯಾವ ರೀತಿ ಸಹಾಯ ಮಾಡುತ್ತಾನೆ ಅವರ ಬದುಕನ್ನು ಯಾವ ರೀತಿ ಬದಲಾವಣೆ ಮಾಡುತ್ತಾನೆ ಅದು ಬಹಳ ಮುಖ್ಯ. ಯಾರು ಏನೇನು ಮಾಡಿದ್ದಾರೆ ಅನ್ನೋ ಪಟ್ಟಿ ಈ ಚುನಾವಣೆಯಲ್ಲಿ ಲೆಕ್ಕಕ್ಕೆ ಬರುತ್ತದೆ. ಜನ ತೀರ್ಮಾನ ಮಾಡುತ್ತಾರೆ. ಡಿಕೆ ಸುರೇಶ್, ಡಿಕೆ ಶಿವಕುಮಾರ್, ಕುಮಾರಸ್ವಾಮಿ, ಯೋಗೇಶ್ವರ್ ಏನು ಕೊಡುಗೆ ಕೊಟ್ಟಿದ್ದಾರೆ ಎಂದು ಜನರು ಪಟ್ಟಿ ಹಾಕುತ್ತಾರೆ. ಅದು ಬಿಟ್ಟರೆ ಯಾವ ರಣನೂ ಇಲ್ಲ, ರಂಗನೂ ಇಲ್ಲ ಏನು ಇಲ್ಲ ಎಂದು ತಿಳಿಸಿದರು.

ಇನ್ನು ಚನ್ನಪಟ್ಟಣದಲ್ಲಿ ಬಿಜೆಪಿ ನಾಯಕರಿಂದ ಪ್ರಚಾರ ಮಾಡುತ್ತಿರುವ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಬಿಜೆಪಿ ನಾಯಕರು ಸಾಥ್ ಕೊಟ್ಟಿರೋದು ಒಳ್ಳೆಯದು ಅಲ್ಲವಾ. ಬಿಜೆಪಿ ಪಾದಯಾತ್ರೆಗಂತೂ ಜೆಡಿಎಸ್ ಅವರು ಸಾಥ್ ಕೊಟ್ಟಿರಲಿಲ್ಲ. ಆದರೂ ಜೆಡಿಎಸ್‌ಗೆ ಬಿಜೆಪಿ ಅವರು ಸಾಥ್ ಕೊಡುತ್ತಿದ್ದಾರೆ, ಕೊಡಲಿ ಎಂದು ಬಿಜೆಪಿ ನಾಯಕರಿಗೆ ತಿವಿದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com